# ಬೆಳಗಾವಿ ವರದಿ

VOL. 04 , ISSUE. 281 | TUESDAY, 2 JANUARY 2024 | NEWSBELAGAVI@GMAIL.COM | 9900332089 | REG.NO.G-2/PMG/KA/NK/BM/139/2021-23




## ಜ.12ರಂದು ದೇಶದ ಅತಿ ಉದ್ದದ ಸಮುದ್ರ ಸೇತುವೆ ಲೋಕಾರ್ಪಣೆ

ಮುಂಬೈ: ದೇಶದ ಅತಿ ಉದ್ದದ ಸಮುದ್ರ ಸೇತುವೆಯಾದ ಮುಂಬೈ ಟ್ರಾನ್ಸ್ ಹಾರ್ಬರ್ ಲಿಂಕ್(MTHL) ಅನ್ನು ಜನವರಿ 12 ರಂದು ಪ್ರಧಾನಿ ನರೇಂದ್ರ ಮೋದಿ ಲೋಕಾರ್ಪಣೆ ಮಾಡಲಿದ್ದಾರೆ ಎಂದು ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ ಶಿಂಧೆ ಹೇಳಿದ್ದಾರೆ.

ಮುಂಬೈನ ಸೆವ್ರಿ ಮತ್ತು ರಾಯಗಡ ಜಿಲ್ಲೆಯ ನ್ಹವಾ ಶೇವಾ ಪ್ರದೇಶದ ನಡುವಿನ 21.8 ಕಿಲೋಮೀಟರ್ ಉದ್ದದ ಸೇತುವೆಯು ಪ್ರಸ್ತುತ ಎರಡು ಗಂಟೆಗಳಿಂದ ಸುಮಾರು 15–20 ನಿಮಿಷಗಳಿಗೆ ಪ್ರಯಾಣದ ಅವಧಿಯನ್ನು ಕಡಿಮೆ ಮಾಡುತ್ತದೆ ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಜನವರಿ 12 ರಂದು (ಶುಕ್ರವಾರ) MTHL ಅನ್ನು ಉದ್ಘಾಟಿಸಲಿದ್ದಾರೆ. ಈ ಸೇತುವೆಯಿಂದ ಆರ್ಥಿಕ ಅಭಿವೃದ್ಧಿಯಾಗಲಿದೆ ಎಂದು ತಿಳಿಸಿದರು.

# ರಾಜ್ಯದಲ್ಲಿ 48 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ 35 ಸಾವಿರ ಕೋಟಿ ರೂ. ಬೆಳೆ ನಷ್ಟ: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ರಾಜ್ಯದಲ್ಲಿ 48 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ 35 ಸಾವಿರ ಕೋಟಿ ರೂಪಾಯಿ ಬೆಳೆ ನಷ್ಟವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಹೇಳಿದ್ದಾರೆ.

ಮುಖ್ಯಮಂತ್ರಿ ಗೃಹ ಕಚೇರಿ ಕೃಷ್ಣದಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಹೊಸ ವರ್ಷದ ಶುಭಾಶಯಗಳನ್ನು ಕೋರಿ, ಮಾತನಾಡಿದ ಸಿಎಂ, ಪ್ರಕೃತಿ ಸಹಾಯವಿಲ್ಲದಿದ್ದರೆ.

ಸರ್ಕಾರ ಏನು ಪರಿಹಾರ ಕೊಟ್ಟರು ಸಾಕಾಗುವುದಿಲ್ಲ. ಹವಾಮಾನ ಬದಲಾವಣೆಯಿಂದಾಗಿ ಈ ವೈಪರೀತ್ಯ ಕಾಣುತ್ತಿದ್ದೇವೆ. ಮುಂಗಾರಿನಲ್ಲಿ ಒಳ್ಳೆ ಮಳೆಯಾಗುವ ನಿರೀಕ್ಷೆ ಇದೆ. 2024 ರಲ್ಲಿ ಒಳ್ಳೆಯ ಮಳೆ ಬೆಳೆ ಆಗಲಿ ಎಂದು ಪ್ರಾರ್ಥನೆ ಮಾಡುತ್ತೇನೆ



ಎಂದರು.

ಅಭಿವೃದ್ಧಿ ನಿರೀಕ್ಷಿತ ಫಲ ಕಾಣಲು ಸಮೃದ್ಧಿಯಾಗಿ ಮಳೆಯಾಗಲಿ.

ಶೇ. 60ಕ್ಕೂ ಹೆಚ್ಚು ಜನ ವ್ಯವಸಾಯದ ಮೇಲೆ ಅವಲಂಬಿತರಾಗಿದ್ದಾರೆ.

ಗ್ಯಾರಂಟಿಗಳನ್ನು ಕೊಟ್ಟಿದ್ದರಿಂದ ಬರದ ತೀವ್ರತೆ ಕಡಿಮೆಯಾಗಿದೆ. ಬಡವರ ಕುಟುಂಬಕ್ಕೆ ಹಣ ದೊರೆಯುತ್ತಿದ್ದು, ಕೊಳ್ಳುವ ಶಕ್ತಿ ಇದೆ. ಬರಗಾಲವಿದ್ದರೂ ಸ್ವಲ್ಪ ಮಟ್ಟಿಗೆ ಅದರ ತೀವ್ರತೆ ಕಡಿಮೆಯಾಗಿದೆ. ಇಲ್ಲದಿದ್ದರೆ ಹಾಹಾಕಾರ ಶುರುವಾಗುತ್ತಿತ್ತು. ಸಾರ್ವತ್ರಿಕ ಮೂಲ ಆದಾಯದ ತತ್ವದ ತಳಹದಿಯ ಮೇಲೆ ಜನರ ಆದಾಯ ಹೆಚ್ಚಿಸಿ ಆರ್ಥಿಕ ಚಟುವಟಿಕೆಗಳಿಗೆ ಇಂಬು ದೊರೆತಿದೆ ಎಂದರು.

ರಾಜ್ಯದ ಜನರ ಅಭಿವೃದ್ಧಿಗಾಗಿ ಜನ ನಮ್ಮನ್ನು ಆಯ್ಕೆ ಮಾಡಿದ್ದಾರೆ. ಸರ್ಕಾರ ಆಡಳಿತ ವರ್ಗವನ್ನು ಆಯ್ಕೆ ಮಾಡಿದೆ. ಜನಪರ, ಸಮಾಜಮುಖಿ ಧೋರಣೆ ಇದ್ದಾಗ ಮಾತ್ರ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯ ಮತ್ತು ಸಂವಿಧಾನದ ಆಶಯಗಳನ್ನು ಈಡೇರಿಸಲು ಸಾಧ್ಯವಾಗುತ್ತದೆ ಎಂದರು.

ಸಂವಿಧಾನ ಅರಿತು ಅದರಂತೆ ನಡೆಯಬೇಕಿದೆ.

ಈ ದಿಕ್ಕಿನಲ್ಲಿ ಪ್ರಯತ್ನ ಮಾಡೋಣ. ಜನರ ನಿರೀಕ್ಷೆ ಹುಸಿಯಾಗದ ರೀತಿ ಕೆಲಸ ಮಾಡೋಣ. 2024ನೇ ವರ್ಷಕ್ಕೆ ನಾವೆಲ್ಲರೂ ಕಾಲಿಡುತ್ತಿದ್ದು, ಈ ವರ್ಷ ರಾಜ್ಯಕ್ಕೆ ಆಶಾದಾಯಕವಾಗಿದೆ ಎಂದು ಸಿಎಂ ಹೇಳಿದರು.



## ರಸ್ತೆಗೆ ನುಗ್ಗಿದ ರೈಲು ಬೋಗಿ: ವಾಹನ ಸವಾರರ ಪರದಾಟ

ಬಿಹಾರ: ರೈಲು ಬೋಗಿಯನ್ನು ಕೊಂಡೊಯ್ಯುತ್ತಿದ್ದ ಲಾರಿಯೊಂದು ಅಪಘಾತಕ್ಕೆ ಒಳಗಾಗಿದೆ. ಬಿಹಾರದ ಭಗಲ್ಪುರದಲ್ಲಿ ಆ್ಯಕ್ಸಿಡೆಂಟ್ ಆಗಿದ್ದು, ಬೆನ್ನಲ್ಲೇ ರಸ್ತೆಯಲ್ಲಿ ಸಿಕ್ಕಾಪಟ್ಟೆ ಟ್ರಾಫಿಕ್ ಜಾಮ್ ಆಗಿತ್ತು.

ದುರ್ಘಟನೆಯು ಲೊಹಿಯಾ ಬ್ರಿಡ್ಜ್ ವೇಳೆ ನಡೆದಿದೆ. ಯಾರಿಗೂ ಯಾವುದೇ ಹಾನಿಯಾಗಿಲ್ಲ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಟ್ರಕ್ ನಿಯಂತ್ರಣ ಕಳೆದುಕೊಂಡು ಅಪಘಾತಕ್ಕೆ ಒಳಗಾಗಿದೆ ಎನ್ನಲಾಗಿದೆ.

ಅಪಘಾತ ನಡೆದ ಸಮೀಪದಲ್ಲೇ ರೈಲ್ವೇ ನಿಲ್ದಾಣ ಇದೆ. ಅಲ್ಲಿ ರೆಸ್ಟೋರೆಂಟ್ ತೆರೆಯಲು ನಿರ್ಧರಿಸಲಾಗಿತ್ತು. ಅದಕ್ಕೆ ರೈಲು ಬೋಗಿಯನ್ನು ತರಲಾಗುತ್ತಿತ್ತು ಎಂದು ಮಾಲ್ಡಾ ಡಿವಿಸನ್ ಅಧಿಕಾರಿ ವಿಕಾಸ್ ಚೌಬೆ ತಿಳಿಸಿದ್ದಾರೆ. ಇನ್ನು ಈ ಅಪಘಾತವು ಸಾರ್ವಜನಿಕರನ್ನು ಆಕರ್ಷಿಸಿತ್ತು. ನೋಡಲು ನೂರಾರು ಮಂದಿ ಅಪಘಾತದ ಸ್ಥಳಕ್ಕೆ ದೌಡಾಯಿಸಿದ್ದರು.

## ಕರ್ನಾಟಕದಲ್ಲಿ ಕನ್ನಡಕ್ಕೆ ಮೊದಲ ಆದ್ಯತೆ ನೀಡಿ: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ಕರ್ನಾಟಕದಲ್ಲಿ ಕನ್ನಡ ಭಾಷೆಗೆ ಮೊದಲ ಆದ್ಯತೆ ನೀಡಬೇಕು. ಯಾವುದೇ ನಾಮಫಲಕ ಇರಲಿ, ಕನ್ನಡ ಭಾಷೆಗೆ ಪ್ರಾಮುಖ್ಯತೆ ನೀಡಿ, ಆಮೇಲೆ ಉಳಿದ ಭಾಷೆ ಹಾಕಬಹುದು ಎಂದು ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕನ್ನಡ ಕಡ್ಡಾಯ ಎಂಬ ಕನ್ನಡಪರ ಹೋರಾಟಗಾರರ ವಿಷಯಕ್ಕೆ ಪ್ರತಿಕ್ರಿಯೆ ನೀಡಿ, ಕರ್ನಾಟಕದಲ್ಲಿ ಕನ್ನಡ ಭಾಷೆಗೆ ಎಲ್ಲರೂ ಮೊದಲ ಆದ್ಯತೆ ನೀಡಬೇಕು. ಸರ್ಕಾರವು ಈ ವಿಷಯಕ್ಕೆ ಬದ್ಧವಿದೆ.



ಖಾಸಗಿಯರು ಸ್ವಪ್ರೇರಿತವಾಗಿ ಕನ್ನಡ ಭಾಷೆಯ ನಾಮಫಲಕ ಹಾಕಬೇಕೆಂದು ತಿಳಿಸಿದರು.

ಸುಳಗಾ ಗ್ರಾಮದಲ್ಲಿ ಕನ್ನಡ ಧ್ವಜಕ್ಕೆ ಬೆಂಕಿ ಹಚ್ಚಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರಿಗೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ಸೂಚನೆ ನೀಡಲಾಗಿದೆ. ಯಾವುದೇ ಭಾಷೆ, ಧರ್ಮ ಇರಲಿ, ಯಾರ ಭಾವನೆಗಳಿಗೂ ಧಕ್ಕೆ ಬಾರದಂತೆ ಎಲ್ಲರೂ ನಡೆದುಕೊಳ್ಳಬೇಕು. ಕಾನೂನು ಕೈಗೆತ್ತಿಕೊಂಡರೆ ಅಂತವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

ಬೆಳಗಾವಿ ನಗರದಲ್ಲಿ ಯುಜಿಡಿ ವ್ಯವಸ್ಥೆ, ಬೋರ್ ವೆಲ್ ಗೆ ಕೊಳಚೆ ನೀರು ಸೇರ್ಪಡೆ ವಿಷಯಕ್ಕೆ ಸಂಬಂಧಿಸಿದಂತೆ ಮಾತನಾಡಿ, ನಾಳೆ ಸಂಬಂಧಿಸಿದ ಸಚಿವರು ಬೆಳಗಾವಿಗೆ ಆಗಮಿಸುತ್ತಿದ್ದು, ಸಮಸ್ಯೆಗಳ ಪಟ್ಟಿಯನ್ನು ಸಿದ್ಧಪಡಿಸುತ್ತಿದ್ದು, ಬೋರ್ ವೆಲ್ ಗೆ ಕೊಳಚೆ ನೀರು ಸೇರ್ಪಡೆಯಾಗದಂತೆ ಶೀಘ್ರವೇ ಕ್ರಮ ಕೈಗೊಳ್ಳಲು ತಿಳಿಸುತ್ತೇನೆಂದ ಸಚಿವರು, ಬೆಳಗಾವಿ ಜಿಲ್ಲೆಯ 350 ಪೌರ ಕಾರ್ಮಿಕರಿಗೆ ನಾಳೆ ನೇಮಕಾತಿ ಆದೇಶ ನೀಡುತ್ತಿದ್ದೇವೆ ಎಂದು ತಿಳಿಸಿದರು.

## ಡಿಸಿಎಂ ಡಿಕೆಶಿ ಕುಟುಂಬಕ್ಕೆ ಮತ್ತೆ ಬಿಗ್ ಶಾಕ್ ಕೊಟ್ಟ ಸಿಬಿಐ



ನವದೆಹಲಿ: ಅಕ್ರಮ ಆಸ್ತಿ ಗಳಿಕೆ ಪ್ರಕರಣದಲ್ಲಿ ಡಿಸಿಎಂ ಡಿ.ಕೆ ಶಿವಕುಮಾರ್ ಅವರಿಗೆ ಮತ್ತೆ ಸಂಕಷ್ಟ ಎದುರಾಗಿದೆ. ಡಿಕೆಶಿ ಕುಟುಂಬಕ್ಕೆ ನೋಟಿಸ್ ನೀಡಿರುವ ಸಿಬಿಐ, ಹೂಡಿಕೆ ಮಾಡಿರೋ ಬಗ್ಗೆ ಮಾಹಿತಿ ನೀಡುವಂತೆ ಸೂಚಿಸಿದೆ.

ಮಲೆಯಾಳಂ ಸುದ್ದಿ ವಾಹಿನಿ ಜೈ ಹಿಂದ್ ಎಂಡಿ ಬಿ.ಎಸ್ ಶಿಜುಗೆ ಸಿಬಿಐ ನೋಟಿಸ್ ಜಾರಿ ಮಾಡಿದೆ. ಈ ಸುದ್ದಿ ಸಂಸ್ಥೆಯಲ್ಲಿ ಡಿ.ಕೆ ಶಿವಕುಮಾರ್ ಕೂಡ ಹೂಡಿಕೆ ಮಾಡಿದ್ದಾರೆ ಎನ್ನಲಾಗಿದೆ. ಹೀಗಾಗಿ ಎಂಡಿ ಬಿ.ಎಸ್ ಶಿಜುಗೆ ಚಾನೆಲ್‌ನಲ್ಲಿ ಹೂಡಿಕೆ ಮಾಡಿರುವ ಬಗ್ಗೆ ಮಾಹಿತಿ ನೀಡುವಂತೆ ಅಖಿಕಅ ಸೆಕ್ಷನ್ 91ರ ಅಡಿಯಲ್ಲಿ ನೋಟಿಸ್ ನೀಡಲಾಗಿದೆ. ಈ ನೋಟಿಸ್ ಜಾರಿಯಾಗಿರುವ ಹಿನ್ನೆಲೆಯಲ್ಲಿ ಎಂಡಿ ಬಿ.ಎಸ್ ಶಿಜು ಅವರು ಜನವರಿ 11ಕ್ಕೆ ಸಿಬಿಐ ವಿಚಾರಣೆಗೆ ಹಾಜರಾಗಬೇಕಿದೆ.

2013–18ರ ಅವಧಿಯ ಸಿಬಿಐ ಪ್ರಕರಣದ ಇದಾಗಿದ್ದು, ಜೈ ಹಿಂದ್ ಸಂಸ್ಥೆಯ ಎಂಡಿ ಶಿಜು ಅವರಿಗೆ ನೋಟಿಸ್ ನೀಡಲಾಗಿದೆ. ಈ ಬಗ್ಗೆ ನಾವು ಕಾನೂನು ಹೋರಾಟ ಮಾಡುತ್ತೇವೆ ಎಂದು ಶಿಜು ಅವರು ಹೇಳಿದ್ದಾರೆ. ಇದೇ ಪ್ರಕರಣದಲ್ಲಿ ಅಕ್ರಮ ಆಸ್ತಿಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಡಿಸಿಎಂ ಡಿಕೆ ಶಿವಕುಮಾರ್ ಕುಟುಂಬಕ್ಕೂ ಸಿಬಿಐ ನೋಟಿಸ್ ನೀಡಿದೆ ಎನ್ನಲಾಗಿದೆ.

## ಶಾಲೆಗೆ ಪೆನ್ ಬದಲು ಗನ್ ತಂದ ವಿದ್ಯಾರ್ಥಿ



ರಾಯಚೂರು: 7 ಮತ್ತು 9 ನೇ ತರಗತಿ ವಿದ್ಯಾರ್ಥಿ ನಡುವೆ ಗಲಾಟೆ ನಡೆದಿದ್ದು, ಈ ವೇಳೆ ವಿದ್ಯಾರ್ಥಿಯೋರ್ವ ಶಾಲೆಗೆ ಪೆನ್ ಬದಲು ಗನ್ ತೆಗೆದುಕೊಂಡು ಹೋದ ಘಟನೆ ಬೆಳಕಿಗೆ ಬಂದಿದೆ. ರಾಯಚೂರು ನಗರದ ಶ್ರೀಮಲ್ ರಿಖಬ್ ಚಂದ್ ಸುಖಾಣಿ ಪ್ರೌಢ ಶಾಲೆಯಲ್ಲಿ ಘಟನೆ ನಡೆದಿದೆ.

ಪುರುಷೋತ್ತಮ ಎಂಬ ವಿದ್ಯಾರ್ಥಿ ಶಾಲೆಗೆ ಗನ್, ಚಾಕು ಹಾಗೂ ಮಾರಾಕಾಸ್ತ್ರಗಳನ್ನು ಹೊತ್ತೊಯ್ದಿದ್ದಾನೆ. 7ನೇ ತರಗತಿ ಓದುತ್ತಿರುವ ವಿದ್ಯಾರ್ಥಿಯ ನಡೆತೆಯಿಂದ ಇದೀಗ ಶಾಲೆಯಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ.

ವಿದ್ಯಾರ್ಥಿ ಮಾರಕಾಸ್ತ್ರ ತೆಗೆದುಕೊಂಡು ಬಂದ ಘಟನೆ ಬೆಳಕಿಗೆ ಬಂದಂತೆ ರಾಯಚೂರು ನಗರದ ವೆಸ್ಟ್ ಪೊಲೀಸರು ಸ್ಥಳಕ್ಕೆ ಆಗಮಿಸಿದ್ದಾರೆ. ಬಳಿಕ ಬಾಲಕನನ್ನು ಪೊಲೀಸರು ಠಾಣೆಗೆ ಕರೆದೊಯ್ದಿದ್ದಾರೆ.

## ಹೊಸ ವರ್ಷಕ್ಕೆ ಭರ್ಜರಿ ಎಣ್ಣೆ ಮಾರಾಟ: ಅಬಕಾರಿ ಇಲಾಖೆಗೆ ಬಂತು ಕೋಟಿ ಕೋಟಿ ಆದಾಯ

ಬೆಂಗಳೂರು: ರಾಜ್ಯದಲ್ಲಿ ಹೊಸ ವರ್ಷಾಚರಣೆ ಜೋರಾಗಿಯೇ ನಡೆದಿದೆ. ವರ್ಷಾಂತ್ಯದ ದಿನ ಭಾರಿ ಪ್ರಯಾಣದಲ್ಲಿ ಮದ್ಯ ದ ಹೊಳೆಯೇ ಹರಿದಿದೆ. ಈ ಮೂಲಕ ಮದ್ಯಪ್ರಿಯರು ಅಬಕಾರಿ ಇಲಾಖೆಗೆ ಆದಾಯ ಗಿಫ್ಟ್ ನೀಡಿದ್ದು,ಕಳೆದ ವರ್ಷಕ್ಕೆ ಹೋಲಿಸಿದ್ರೆ ಈ ಬಾರಿ ಶೇ 15 ಪರ್ಸೆಂಟ್ ರಷ್ಟು ಹೆಚ್ಚುವರಿ ಆದಾಯ ತಂದುಕೊಟ್ಟಿದ್ದಾರೆ.ಮದ್ಯ ಸೇವಿಸುವವರಲ್ಲಿ ಸಿಟಿ ಮಂದಿ, ಈ ಬಾರಿ ಮುನ್ನಡೆ ಕಾಯ್ದುಕೊಂಡಿದ್ದು, ಹೆಚ್ಚುವರಿ ಮದ್ಯ ಮಾರಾಟವಾಗಿದೆ ಅನ್ನೋ ಮಾಹಿತಿ ಅಬಕಾರಿ ಇಲಾಖೆ ಬಿಡುಗಡೆ ಮಾಡಿದೆ.

2023ಕ್ಕೆ ಬಾಯ್ ಹೇಳಿ.. 2024ಕ್ಕೆ ಕಾಲಿಟ್ಟಾಗಿದೆ.. ಹೊಸ ವರ್ಷವನ್ನು ಹೊಸ ಹುರುಪಿನೊಂದಿಗೆ ಜನ ಸ್ವಾಗತಿಸಿದರು. ಬೆಂಗಳೂರಿನ ಪ್ರಮುಖ ರಸ್ತೆಗಳಲ್ಲಿ ನ್ಯೂ ಇಯರ್ ಸೆಲೆಬ್ರೆಷನ್ ಸದ್ದು ಮುಗಿಲು ಮುಟ್ಟಿತ್ತು. ರಾಜ್ಯದೆಲ್ಲೆಡೆ ಎಲ್ಲೆಲ್ಲೂ ಹೊಸ ವರ್ಷದ ಸಂಭ್ರಮ ಕಳೆಗಟ್ಟಿತ್ತು. ಆದ್ರೆ ಈ ಬಾರಿ ನ್ಯೂ ಇಯರ್ ವೇಳೆ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಮದ್ಯದ ಹೊಳೆಯೇ ಹರಿದಿದೆ.

ಹೌದು.. ಹೊಸ ವರ್ಷವನ್ನು ಸಂಭ್ರಮದಿಂದ ಬರಮಾಡಿಕೊಂಡಿರುವ ಮದ್ಯಪ್ರಿಯರು ರಾಜ್ಯ ಸರ್ಕಾರದ ಬೊಕ್ಕಸಕ್ಕೂ ಭರ್ಜರಿ ಕಿಕ್ ಕೊಟ್ಟಿದ್ದಾರೆ.

2023ರ ಕೊನೇ ದಿನ ಡಿಸೆಂಬರ್ 31ರಂದು ರಾಜ್ಯಾದ್ಯಂತ ಮದ್ಯ ಮಾರಾಟದಿಂದ ಸರ್ಕಾರದ ಬೊಕ್ಕಸಕ್ಕೆ ಬರೋಬ್ಬರಿ 193 ಕೋಟಿ ರೂಪಾಯಿ ಆದಾಯ ಹರಿದು ಬಂದಿದೆ.ಮಾಮೂಲಿ ದಿನದಲ್ಲಿ ಒಂದು ದಿನಕ್ಕೆ ರಾಜ್ಯದ ಅಬಕಾರಿ ಇಲಾಖೆಗೆ ಸುಮಾರು 90 ಕೋಟಿ ಆದಾಯ ಬರುತ್ತಾ ಇತ್ತು. ಆದರೆ ನ್ಯೂ ಇಯರ್ ಸೆಲೆಬ್ರೇಷನ್ ಹಿನ್ನೆಲೆಯಲ್ಲಿ ಒಂದೇ ದಿನದಲ್ಲಿ ಅಬಕಾರಿ ಇಲಾಖೆ ಆದಾಯ ದುಪ್ಪಟ್ಟು ಏರಿಕೆ ಆಯ್ತು

ಹೊಸ ವರ್ಷಾಚರಣೆ ದಿನ ಬಾರ್, ರೆಸ್ಟೋರೆಂಟ್, ಕ್ಲಬ್ ಹಾಗೂ ಪಾರ್ಟಿಗಳಲ್ಲಿ ಮದ್ಯದ ಹೊಳೆ ಹರಿದಿದೆ. ಡಿಸೆಂಬರ್ 31 ರ ಒಂದೇ ದಿನ ಬರೋಬ್ಬರಿ 193 ಕೋಟಿ ಆದಾಯ,ಅಬಕಾರಿ ಇಲಾಖೆಗೆ ಬಂದಿದೆ. ಹಿಂದಿನ ವರ್ಷ ಇದೇ ಅವಧಿಗೆ ಹೋಲಿಕೆ ಮಾಡಿದರೆ ಶೇ 15




ಪರ್ಸೆಂಟ್ ಹೆಚ್ಚು ಆದಾಯ ಬಂದಿದೆ.

ಮದ್ಯ ಸೇವಿಸುವವರಲ್ಲಿ ಬೆಂಗಳೂರಿಗರೇ ಮುನ್ನಡೆ ಕಾಯ್ದುಕೊಂಡಿದ್ದು, ಬೆಂಗಳೂರು ನಗರದಲ್ಲಿ ಶೇ.15ರಷ್ಟು ಹೆಚ್ಚುವರಿ ಮದ್ಯ ಮಾರಾಟವಾಗಿದೆ.

ಕಳೆದ ವರ್ಷ ಡಿಸೆಂಬರ್ 30 ರಂದು ಮೂರು ಲಕ್ಷ ಬ್ಯಾಕ್ಸ್ ಎಂಎಸ್‌ಎಲ್ ಹಾಗೂ ಡಿಸೆಂಬರ್ 31 ರಂದು 2.60 ಲಕ್ಷ ಎಂಎಸ್‌ಎಲ್ ಬ್ಯಾಕ್ಸ್ ಸೇಲ್ ಆಗಿತ್ತು. ಆದ್ರೆ ಈ ಬಾರಿಯ ಡಿಸೆಂಬರ್ 30–31 ರಂದು 6.40 ಲಕ್ಷ ಎಂಎಸ್‌ಎಲ್ ಬ್ಯಾಕ್ಸ್ ಮಾರಾಟವಾಗಿದೆ. ಇಯರ್ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಬಿಯರ್ 14.07 ಲಕ್ಷ ಬಾಕ್ಸ್ ಸೇಲ್ ಮಾಡಲಾಗಿದೆ.

ಬಿಯರ್ ಮಾರಾಟದಿಂದಲೇ ಸುಮಾರು 170 ಕೋಟಿರೂಪಾಯಿ ಆದಾಯ ಸರ್ಕಾರದ ಬೊಕ್ಕಸಕ್ಕೆ ಬಂದಿದೆ.

ಇನ್ನು ನ್ಯೂ ಇಯರ್ ಸೆಲೆಬ್ರೇಷನ್ ಕೇವಲ ಅಬಕಾರಿ ಇಲಾಖೆಗೆ ಮಾತ್ರವಲ್ಲದೆ ನಮ್ಮ ಮೆಟ್ರೋಗೂ ಭಾರಿ ಆದಾಯ ತಂದುಕೊಟ್ಟಿದೆ.

ಕಳೆದ ರಾತ್ರಿ ಮೆಟ್ರೋ ಓಡಾಟ ರಾತ್ರಿ 2–15 ವರಿಗೆ ಇದ್ದ ಕಾರಣ 6 ಲಕ್ಷ 26 ಪ್ರಯಾಣಿಕರು ಮೆಟ್ರೋದಲ್ಲಿ ಓಡಾಟ ಮಾಡಿದ್ದಾರೆ. ಇದರಿಂದ ಮೆಟ್ರೋಗೆ ಹೆಚ್ಚುವರಿಯಾಗಿ ಒಂದೂವರೆ ಕೋಟಿ ಕಾರ್ಯಾಚರಣೆ ಆದಾಯ ಬಂದಿದೆ.

ಫ್ಲೋ.. ಒಟ್ಟಿನಲ್ಲಿ ಡಿಸೆಂಬರ್ 31 ರಂದು ಮದ್ಯ ಮಾರಾಟ ಖರೀದಿ ಹೆಚ್ಚಾಗಿಯೇ ನಡೆದಿದ್ದು, ಇದರಿಂದ ಅಬಕಾರಿ ಇಲಾಖೆ ಖಜಾನೆ ತುಂಬಿದ್ರೆ ಇತ್ತ ಮೆಟ್ರೋ ಸೇವೆ ವಿಸ್ತಾರಣೆಯಿಂದ ಬಿಎಂಆರ್‌ಸಿಎಲ್ ಖಜಾನೆಯೂ ತುಂಬಿದೆ.

## ಬೆಳಗಾವಿ: ಹೊಸ ವರ್ಷದ ಆಚರಣೆ ವೇಳೆ ಕನ್ನಡ ಬಾವುಟಕ್ಕೆ ಬೆಂಕಿ ಹಚ್ಚಿದ ಪುಂಡರು



ಬೆಳಗಾವಿ: ಹೊಸವರ್ಷದ ಮೊದಲ ದಿನವೇ ಕನ್ನಡ ಧ್ವಜವನ್ನು ಸುಟ್ಟು ಕಿಡಿಗೇಡಿಗಳು ಉದ್ಧಟತನ ಮೆರೆದಿರುವ ಘಟನೆ ಬೆಳಗಾವಿ ತಾಲೂಕಿನ ಸುಳಗಾ ಗ್ರಾಮದಲ್ಲಿ ನಡೆದಿದೆ.

ಹೊಸ ವರ್ಷದ ಸಂದರ್ಭದಲ್ಲೇ ಗಡಿಜಿಲ್ಲೆ ಬೆಳಗಾವಿಯಲ್ಲಿ ಕಿಡಿಗೇಡಿಗಳು ಪುಂಡಾಟ ಮೆರೆದಿದ್ದಾರೆ. ರಾತ್ರೋರಾತ್ರಿ ಕನ್ನಡ ಬಾವುಟಕ್ಕೆ ಬೆಂಕಿ ಹಚ್ಚಿ ದರ್ಪ ಮೆರೆದಿದ್ದಾರೆ.

ಬೆಳಗಾವಿ ತಾಲೂಕಿನ ಸುಳಗಾ ಗ್ರಾಮದಲ್ಲಿ ರಾಯಣ್ಣ ವೃತ್ತದ ಬಳಿ ಕಟ್ಟಿದ್ದ ನಾಡಧ್ವಜಕ್ಕೆ ಕಿಡಿಗೇಡಿಗಳು ಬೆಂಕಿ ಹಚ್ಚಿದ್ದಾರೆ. ಪುಂಡರ ಈ ಕೃತ್ಯಕ್ಕೆ ಕನ್ನಡ ಪರ ಹೋರಾಟಗಾರರು ಆಕ್ರೋಶ ಹೊರ ಹಾಕಿದ್ದಾರೆ. ಕೂಡಲೇ ಕಿಡಿಗೇಡಿಗಳನ್ನು ಬಂಧಿಸುವಂತೆ ಹೋರಾಟಗಾರರು ಮನವಿ ಮಾಡಿದ್ದಾರೆ.

ಇನ್ನು ಎರಡು ವರ್ಷದ ಹಿಂದೆ ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನ ಹಲಸಿಯಲ್ಲಿ ಕನ್ನಡ ಬಾವುಟ ಸುಟ್ಟು ಜಗಜ್ಯೋತಿ ಬಸವೇಶ್ವರರ ಚಿತ್ರಕ್ಕೆ ಸಗಣಿ ಮೆತ್ತಿದ್ದ ಘಟನೆ ನಡೆದಿತ್ತು.

## ಅಯೋಧ್ಯೆಯಲ್ಲಿರೋದು ಬಿಜೆಪಿ ರಾಮ, ನಮಗೆ ಸಿದ್ದರಾಮಯ್ಯನೇ ಶ್ರೀರಾಮ: ಎಚ್.ಆಂಜನೇಯ

ಚಿತ್ರದುರ್ಗ: ಮುಖ್ಯಮಂತ್ರಿ ಸಿದ್ದರಾಮಯ್ಯನವರೇ "ನಮಗೆ ಶ್ರೀರಾಮ". ಅಯೋಧ್ಯೆಯಲ್ಲಿರೋದು ಬಿಜೆಪಿ ರಾಮ ಎಂದು ಕಾಂಗ್ರೆಸ್ ಹಿರಿಯ ಮುಖಂಡ, ಮಾಜಿ ಸಚಿವ ಎಚ್.ಆಂಜನೇಯ ಅವರು ಸೋಮವಾರ ಹೇಳಿದ್ದಾರೆ.



ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನಾ ಸಮಾರಂಭಕ್ಕೆ ಸಿದ್ದರಾಮಯ್ಯ ಅವರನ್ನು ಆಹ್ವಾನಿಸದಿರುವ ಕುರಿತು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಮಾಜಿ ಸಚಿವ ಹಾಗೂ ಸಿದ್ದರಾಮಯ್ಯ ಅವರ ಆಪ್ತ ಆಂಜನೇಯ ಅವರು ಈ ಹೇಳಿಕೆ ನೀಡಿದ್ದಾರೆ.

"ಅಯೋಧ್ಯೆ ಉದ್ಘಾಟನಾ ಸಮಾರಂಭಕ್ಕೆ ಸಿದ್ದರಾಮಯ್ಯ ಅವರನ್ನು ಆಹ್ವಾನಿಸದಿರುವುದು ಒಳ್ಳೆಯ ಬೆಳವಣಿಗೆ. ನಮಗೆ ಸಿಎಂ ಸಿದ್ದರಾಮಯ್ಯ ಅವರೇ ಭಗವಾನ್ ಶ್ರೀರಾಮ. ಅಯೋಧ್ಯೆಯಲ್ಲಿರುವ ರಾಮನನ್ನು ಏಕೆ ಪೂಜಿಸಬೇಕು?" ಎಂದು ಪ್ರಶ್ನಿಸಿದರು.

"ಸಿದ್ದರಾಮಯ್ಯನವರು ತಮ್ಮ ಹುಟ್ಟೂರು ಸಿದ್ದರಾಮನ ಹುಂಡಿಯಲ್ಲಿರುವ ದೇವಸ್ಥಾನದಲ್ಲಿ ಶ್ರೀರಾಮನನ್ನು ಪೂಜಿಸಲಿದ್ದಾರೆ. ಅಯೋಧ್ಯೆಯಲ್ಲಿರೋದು ಬಿಜೆಪಿಯ ರಾಮ. ಹೀಗಾಗಿ ಬಿಜೆಪಿಯವರನ್ನ ಕರೆಸಿಕೊಂಡು ಅಲ್ಲಿ ಭಜನೆ ಮಾಡುತ್ತಾರೆ. ಆದರೆ ನಮ್ಮ ರಾಮ ಎಲ್ಲಾ ಕಡೆ ಇದ್ದಾನೆ, ನಮ್ಮ ಎದೆಯಲ್ಲಿಯೂ ಇದ್ದಾನೆ. ನಾನು ಆಂಜನೇಯ, ಗೊತ್ತಲ್ವಾ ಆಂಜನೇಯ ಏನು ಮಾಡಿದ ಅಂತಾ? ಎಂದು ಕುಟುಕಿದ್ದಾರೆ.

"ನಮ್ಮ ಸಮುದಾಯದ ಜನ ರಾಮ, ಹನುಮಂತ ಎಂದು ಹೆಸರಿಟ್ಟುಕೊಳ್ಳುತ್ತಾರೆ. ಈ ದೇವರುಗಳು ನಮ್ಮ ಸಮುದಾಯಕ್ಕೆ ಸೇರಿದವರು. ಆದರೆ ಬಿಜೆಪಿ ಧರ್ಮಗಳನ್ನು ಒಡೆದು ಆಳುವ ನೀತಿ ಅನುಸರಿಸುತ್ತಿದೆ. ಧರ್ಮದ ವಿರುದ್ಧ ಹೇಳಿಕೆ ನೀಡಿ ಮತ ಪಡೆಯುವ ಭ್ರಮೆಯಲ್ಲಿದ್ದಾರೆ" ಎಂದು ಕಾಂಗ್ರೆಸ್ ಮುಖಂಡ ವಾಗ್ದಾಳಿ ನಡೆಸಿದರು.

"ನಾವೆಲ್ಲರೂ ಹಿಂದೂಗಳು, ಬಿಜೆಪಿ ಹಿಂದೂ ಧರ್ಮವನ್ನು ಕೊಂಡುಕೊಂಡಿಲ್ಲ. ಅವರು ತಾರತಮ್ಯ ಮತ್ತು ಶೋಷಣೆಗೆ ಪರಿಹಾರ ನೀಡಿದ್ದಾರೆಯೇ?" ಎಂದು ಪ್ರಶ್ನಿಸಿದರು. "ದೇವಸ್ಥಾನಗಳ ನಿರ್ಮಾಣ ನಿಲ್ಲಬೇಕು ಮತ್ತು ಮನೆ ನಿರ್ಮಾಣ ಮತ್ತು ಆರೋಗ್ಯಕರ ಮನಸ್ಥಿತಿಯತ್ತ ಗಮನ ಹರಿಸಬೇಕು. ಜನರು ಶೋಚನೀಯ ಸ್ಥಿತಿಯಲ್ಲಿ ಬದುಕುತ್ತಿದ್ದಾರೆ. ಅವರಿಗೆ ಮನೆಗಳನ್ನು ನಿರ್ಮಿಸಿ ರಾಮಮಂದಿರಗಳೆಂದು ಹೆಸರಿಡಿ. ಶ್ರೀರಾಮ ನಿಮ್ಮನ್ನು ಆಶೀರ್ವದಿಸುತ್ತಾನೆ. ಶ್ರೀರಾಮನನ್ನು ಮತಕ್ಕಾಗಿ ಬಳಸಿಕೊಳ್ಳಬೇಡಿ" ಎಂದು ಬಿಜೆಪಿ ಸಲಹೆ ನೀಡಿದ್ದಾರೆ.

## ಎಪಿಎಂಸಿ–ಜೈ ಕಿಸಾನ್ ಮಾರುಕಟ್ಟೆ ವ್ಯಾಪಾರಸ್ಥರು ಪರಸ್ಪರ ಸಹಕರಿಸಬೇಕು: ಸಚಿವ ಸತೀಶ ಜಾರಕಿಹೊಳಿ ಸಲಹೆ

ಬೆಳಗಾವಿ: ನಗರದಲ್ಲಿರುವ ಎ.ಪಿ.ಎಂ.ಸಿ ಹಾಗೂ ಜೈಕಿಸಾನ್ ಎರಡು ಮಾರ್ಕೆಟ್ ಗಳಿಗೆ ವ್ಯಾಪಾರ ವಹಿವಾಟುಗಳನ್ನು ಮಾಡಲು ಅವಕಾಶವಿದ್ದು, ವ್ಯಾಪಾರಸ್ಥರು ಪರಸ್ಪರ ಸಹಕಾರ ಮತ್ತು ಸೌಹಾರ್ದತೆಯಿಂದ ವ್ಯಾಪಾರ ವಹಿವಾಟುಗಳನ್ನು ನಡೆಸಿಕೊಂಡು ಹೋಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಸಲಹೆ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸೋಮವಾರ (ಜ.01) ಏರ್ಪಡಿಸಲಾಗಿದ್ದ ಎಪಿಎಂಸಿ ಹಾಗೂ ಜೈಕಿಸಾನ್ ಮಾರುಕಟ್ಟೆಗಳ ವರ್ತಕರ ಸಭೆಯಲ್ಲಿ ಅವರು ಮಾತನಾಡಿದರು.

ಎಪಿಎಂಸಿ ಮಾರುಕಟ್ಟೆಯನ್ನು ಕೋಟ್ಯಂತರ ರೂಪಾಯಿ ಖರ್ಚು ಮಾಡಿ ನಿರ್ಮಿಸಲಾಗಿದೆ. ಆದರೆ ಹೊಸದಾಗಿ ಜೈಕಿಸಾನ್ ಮಾರುಕಟ್ಟೆ ಆರಂಭಿಸಿರುವುದರಿಂದ ಎಪಿಎಂಸಿ ಮಾರುಕಟ್ಟೆ ನಷ್ಟ ಅನುಭವಿಸುತ್ತಿದೆ. ಆದ್ದರಿಂದ ಇದಕ್ಕೆ ಜೈಕಿಸಾನ ಮಾರುಕಟ್ಟೆ ಸಹಕಾರ ಅವಶ್ಯಕವಾಗಿದೆ ಎಂದು ಹೇಳಿದರು.

ಸಮಯ ನಿಗದಿ ಮಾಡಿದರೆ ಎರಡು ಮಾರುಕಟ್ಟೆ ವ್ಯಾಪಾರ ವಹಿವಾಟು ಕುಂಠಿತವಾಗುವುದು. ಆದ್ದರಿಂದ ಎರಡು ಮಾರುಕಟ್ಟೆಯವರು ಹೊಂದಾಣಿಕೆ ಮಾಡಿಕೊಂಡು ಹೋಗಬೇಕು. ಮುಂದಿನ ದಿನಗಳಲ್ಲಿ ಸಮಸ್ಯೆ ಹೆಚ್ಚಾದರೆ ಇನ್ನೊಂದು ಬಾರಿ ಸಭೆ ನಡೆಸಿ ಅಗತ್ಯ ನಿರ್ಣಯ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ಬೆಳಗಾವಿ ಉತ್ತರ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಆಸೀಫ್ (ರಾಜು) ಸೇಠ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಹಾಗೂ ಎ.ಪಿ.ಎಂ.ಸಿ ಹಾಗೂ ಜೈಕಿಸಾನ್ ಎರಡು ಮಾರ್ಕೆಟ್ ವ್ಯಾಪಾರಸ್ಥರು, ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಲೋಕಸಭೆ ಚುನಾವಣೆ ಬಗ್ಗೆ ಚರ್ಚಿಸಲು ದೆಹಲಿಗೆ ಹೊರಟಿದ್ದೇನೆ: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಮುಂಬರುವ ಲೋಕಸಭೆ ಚುನಾವಣೆ ಬಗ್ಗೆ ಚರ್ಚೆ ನಡೆಸಲು ಹೈಕಮಾಂಡ್ ದೆಹಲಿಗೆ ಬರುವಂತೆ ಆಹ್ವಾನಿಸಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ದೆಹಲಿಗೆ ಬರುವಂತೆ ಹೇಳಿದ್ದಾರೆ, ಸರ್ಕಾರ ಪಟ್ಟಿಯನ್ನು




ಅಂತಿಮಗೊಳಿಸಲಿದೆ. ಈ ಹಿಂದೆ ಶಾಸಕರನ್ನು ನೇಮಿಸಲು ಯೋಚಿಸಿದ್ದೆವು, ಆದರೆ ಪಕ್ಷದ ಕಾರ್ಯಕರ್ತರನ್ನೂ ಆಯ್ಕೆ ಮಾಡಲು ಬೇಡಿಕೆ ಇದೆ ಹೀಗಾಗಿ ಬೇರೆ ಪಟ್ಟಿ ತಯಾರಿ ನಡೆಯುತಿದೆ. ಈ ಬಗ್ಗೆ ಚರ್ಚೆ ನಡೆಸಲು ದೆಹಲಿಗೆ ತೆರಳುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

## ಪ್ರಚೋದನಾಕಾರಿ ಹೇಳಿಕೆ ನೀಡಿದ ಮಾಜಿ ಡಿಸಿಎಂ ಈಶ್ವರಪ್ಪ

ಬೆಳಗಾವಿ: ಮುಸ್ಲಿಮರು ಎಲ್ಲೆಲ್ಲಿ ದೇವಸ್ಥಾನ ಒಡೆದು ಮಸೀದಿ ನಿರ್ಮಿಸಿದ್ದೀರಿ. ಮರ್ಯಾದೆಯಿಂದ ಮಸೀದಿಗಳನ್ನ ತೆಗೆದುಕೊಳ್ಳಿ. ಇಲ್ಲವಾದಲ್ಲಿ ಹಿಂದೂ ಸಮಾಜ ಮಸೀದಿಗಳನ್ನ ಒಡೆದು ಪುಡಿ ಪುಡಿ ಮಾಡುತ್ತದೆ ಎಂದು ಮಾಜಿ ಡಿಸಿಎಂ ಹಾಗೂ ಬಿಜೆಪಿ ಮುಖಂಡ ಈಶ್ವರಪ್ಪ ಪ್ರಚೋದನಾಕಾರಿ ಹೇಳಿಕೆ ನೀಡಿದ್ದಾರೆ.

ಜಿಲ್ಲೆಯ ಚಿಕ್ಕೋಡಿ ಪಟ್ಟಣದಲ್ಲಿ ಶ್ರೀರಾಮಸೇನೆಯಿಂದ ಆಯೋಜನೆ ಮಾಡಿದ್ದ 'ಮೋದಿ ಗೆಲ್ಲಿಸಿ.. ಭಾರತ ಉಳಿಸಿ' ಅಭಿಯಾನ



ಉದ್ಘಾಟಿಸಿ ಮಾತನಾಡಿದ ಮಾಜಿ ಡಿಸಿಎಂ ಈಶ್ವರಪ್ಪ, ಮಧುರಾ, ಕಾಶಿ ದೇವಸ್ಥಾನಗಳ ಕಾರ್ಯ ಸರ್ವೆ ಮಾಡುತ್ತೇವೆ. ಕೋರ್ಟ್ ಮುಖಾಂತರ ಸರ್ವೆ ನಡೆಯುತ್ತಿದೆ. ಕಾಶಿ ವಿಶ್ವನಾಥ ಮಧುರಾ ಶ್ರೀಕೃಷ್ಣ ದೇವಸ್ಥಾನವೂ ಶೀಘ್ರದಲ್ಲಿ ನಿರ್ಮಾಣ ಆಗುತ್ತವೆ ಎಂದು ತಿಳಿಸಿದ್ದಾರೆ.

ದೇಶದಲ್ಲಿ ಶ್ರೀರಾಮನ ಬಗ್ಗೆ ಚರ್ಚೆ ಆಗುತ್ತಿದೆ. ನಮ್ಮನ್ನ ವಿರೋಧ ಮಾಡಿದವರ ಹೊಟ್ಟೆಯಲ್ಲಿ ಕಸವಿಸಿ ಆಗುತ್ತಿದೆ.

ಪಾಕಿಸ್ತಾನ ಸೇರಿ ಅಖಂಡ ಭಾರತ ನಿರ್ಮಾಣಕ್ಕೆ ಜೈ ಶ್ರೀರಾಮ ಘೋಷಣೆ ದೇಶದಲ್ಲಿ ಮತ್ತೆ ಕೇಳಿ ಬರುತ್ತಿದೆ. ಪಾಕಿಸ್ತಾನ ದೇಶದವರು ಮೋದಿ ಪ್ರಧಾನಿ ಆಗಿ ಬರಲಿ ಎಂದು ಬಯಸುತ್ತಿದ್ದಾರೆ ಎಂದು ಹೇಳಿಕೆ ನೀಡಿದ್ದಾರೆ.

ಮೋದಿ ಭಾರತೀಯ ಸಂಸ್ಕೃತಿಯನ್ನ ವಿಶ್ವಕ್ಕೆ ಸಾರಿದರು. ದೇಶವನ್ನ ಲೂಟಿ ಮಾಡಿದವರಿಗೆ ಭಾರತೀಯ ಸಂಸ್ಕೃತಿ ನಾಶ ಮಾಡಲು ಆಗಲಿಲ್ಲ.

ಕಾಂಗ್ರೆಸ್ ಅವರ ಅಧಿಕಾರದ ಆಸೆಯಿಂದ ದೇಶ ತುಂಡು ತುಂಡಾಯಿತು. ಜನವರಿ 22 ರಂದು ರಾಮಮಂದಿರ ಉದ್ಘಾಟನೆ ದಿನದಂದು ಸ್ವತಂತ್ರ ಹೋರಾಟಗಾರರ ಆತ್ಮಕ್ಕೆ ಶಾಂತಿ ಸಿಗಲಿದೆ ಎಂದಿದ್ದಾರೆ.

# ಮೃತಪಟ್ಟ ಕೆಎಸ್‌ಆರ್‌ಟಿಸಿ ನೌಕರರ ಕುಟುಂಬಕ್ಕೆ ತಲಾ 1 ಕೋಟಿ ರೂ. ಪರಿಹಾರ ವಿತರಣೆ

ಬೆಂಗಳೂರು: ಅಪಘಾತದಲ್ಲಿ ಮೃತಪಟ್ಟ ಕೆಎಸ್‌ಆರ್ಟಿಸಿ ನೌಕರರ ಕುಟುಂಬದ ಸದಸ್ಯರನ್ನು ಹೊಸ ವರ್ಷದ ಅಂಗವಾಗಿ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರು ಗೌರವಿಸಿದರು. ಅಲ್ಲದೆ, ಅಪಘಾತದಲ್ಲಿ ಮೃತಪಟ್ಟ ಮೂವರು ಸಿಬ್ಬಂದಿಯ ಅವಲಂಬಿತ ಕುಟುಂಬಕ್ಕೆ ತಲಾ 1 ಕೋಟಿ ರೂ. ಪರಿಹಾರ ವಿತರಣೆ ಮಾಡಿದರು.

ಕಳೆದ ಒಂದು ವರ್ಷದಲ್ಲಿ ಅಪಘಾತದಲ್ಲಿ ಮೃತಪಟ್ಟಿದ್ದ ಒಟ್ಟು 12 ಸಿಬ್ಬಂದಿಯ ಅವಲಂಬಿತರಿಗೆ ತಲಾ 1 ಕೋಟಿ ರೂ. ಪರಿಹಾರದ ಮೊತ್ತವನ್ನು ಪಾವತಿಸಲಾಗಿದೆ. ಮೃತ ಅವಲಂಬಿತರ ಕುಟುಂಬದವರಿಗೆ ಸೀರೆ ಮತ್ತು ಸಿಹಿಯನ್ನು ನೀಡಿ ಗೌರವಿಸಲಾಯಿತು.




ಈ ಸಂದರ್ಭದಲ್ಲಿ ಮಾತನಾಡಿದ ರಾಮಲಿಂಗಾರೆಡ್ಡಿ, ಮನೆಯ ಸದಸ್ಯನನ್ನು ಕಳೆದುಕೊಂಡ ಕುಟುಂಬದವರಿಗೆ ಯಾವ ರೀತಿಯಿಂದಲೂ ನಷ್ಟ ಭರಿಸಲು ಸಾಧ್ಯವಿಲ್ಲ. ಆದರೆ ಆರ್ಥಿಕವಾಗಿ ಅವರಿಗೆ ಶಕ್ತಿ ಮತ್ತು ಭದ್ರತೆಯನ್ನು ಒದಗಿಸುವ ಜವಾಬ್ದಾರಿಯನ್ನು ನಾವು ಮಾಡುತ್ತಿದ್ದೇವೆ.

ಕೋಟಿ ಹಣದಿಂದ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ, ಮನೆ ಮಾಡಿಕೊಂಡು ಯಾರನ್ನು ಅವಲಂಬಿಸದೆ ಬದುಕು ನಡೆಸಬಹುದಾಗಿದೆ ಎಂದರು.

ಈ ಹಿಂದೆ ಅಪಘಾತ ಸೇರಿದಂತೆ ಇತರ ಕಾರಣಗಳಿಂದ ಮೃತಪಟ್ಟ ಕುಟುಂಬದವರಿಗೆ 3 ಲಕ್ಷ ರೂ. ಗಳನ್ನು ಮಾತ್ರ ನೀಡಲಾಗುತ್ತಿತ್ತು. ಸಾರಿಗೆ ಸುರಕ್ಷಾ ಅಪಘಾತ ವಿಮಾ ಪರಿಹಾರ ಯೋಜನೆ ನಿಗಮದಲ್ಲಿ ಸೇವೆಯಲ್ಲಿರುವಾಗ ಸಿಬ್ಬಂದಿಗಳು ಖಾಸಗಿ ಅಥವಾ ಕರ್ತವ್ಯ ನಿರತ ಅಪಘಾತದಲ್ಲಿ ಮೃತಪಟ್ಟಲ್ಲಿ ಅವರ ಅವಲಂಬಿತರಿಗೆ, ಅದೇರೀತಿ ಖಾಸಗಿ ಅಥವಾ ಕರ್ತವ್ಯ ನಿರತ ಅಪಘಾತದಲ್ಲಿ ಅಂಗನ್ಯೂನ್ಯತೆಗೆ ಒಳಗಾದಲ್ಲಿ ಸಿಬ್ಬಂದಿಗಳಿಗೆ ಹೆಚ್ಚಿನ ಮೊತ್ತದ ಆರ್ಥಿಕ ಪರಿಹಾರ ಒದಗಿಸುವ ಮೂಲಕ ಅವರ ಜೀವನಕ್ಕೆ ಭದ್ರತೆ ಒದಗಿಸುವ ಉದ್ದೇಶದಿಂದ 50 ಲಕ್ಷ (ಯುನೈಟೆಡ್ ಇಂಡಿಯಾ ಇನ್ಸುರೆನ್ಸ್) ಅಡಿಯಲ್ಲಿ 50 ಲಕ್ಷ ರೂ. ನೀಡಲಾಗುತ್ತಿದೆ.

# ಯುಪಿಐ ವಹಿವಾಟು: ಇಂದಿನಿಂದ ಹೊಸ ನಿಯಮಗಳು ಜಾರಿ

ನವದೆಹಲಿ: ತಕ್ಷಣದ ಹಣವರ್ಗಾವಣೆಗೆ ಬಳಕೆ ಮಾಡುವ ಯುನಿಫೈಡ್ ಪೇಮೆಂಟ್ ಇಂಟರ್ ಫೇಸ್ (ಯುಪಿಐ) ದೇಶದಲ್ಲಿ ಅತಿ ವೇಗವಾಗಿ ಬೆಳವಣಿಗೆಯಾಗುತ್ತಿರುವ ವಹಿವಾಟಿನ ವಿಧಾನವಾಗಿದೆ.

ಯುಪಿಐ ಭಾರತದಲ್ಲಿ ಅತಿ ವೇಗವಾಗಿ ಹಾಗೂ ಅತಿ ಹೆಚ್ಚು ಬಳಕೆಯಾಗುತ್ತಿರುವ ಪಾವತಿಯ ವಿಧಾನವಾಗಿರುವ ಹಿನ್ನೆಲೆಯಲ್ಲಿ ಆರ್ ಬಿಐ ಜ.1, 2024 ರಿಂದ ಕೆಲವು ಬದಲಾವಣೆ ಹಾಗೂ ಹೊಸ ನಿಯಮಗಳನ್ನು ಜಾರಿಗೆ ತಂದಿದೆ.

ಒಂದು ವರ್ಷದಿಂದ ಕಾರ್ಯನಿರ್ವಹಿಸದ ಯುಪಿಐ ಐಡಿಗಳನ್ನು ನಿಷ್ಕ್ರಿಯಗೊಳಿಸಲು ಪೇಟಿಎಂ, ಗೂಗಲ್ ಪೇ, ಫೋನ್ ಪೇ ಹಾಗೂ ಬ್ಯಾಂಕ್ ಗಳಿಗೆ ಭಾರತೀಯ ರಾಷ್ಟ್ರೀಯ ಪಾವತಿ ನಿಗಮ (NPCI) ಸೂಚನೆ ನೀಡಿದೆ.

ಯುಪಿಐ ಗಳ ಮೂಲಕ ದಿನವೊಂದಕ್ಕೆ ಗರಿಷ್ಠ 1 ಲಕ್ಷ ರೂಪಾಯಿವರೆಗಿನ ವಹಿವಾಟು ನಡೆಸಬಹುದಾಗಿದೆ. ಆದಾಗ್ಯೂ, RBI ಯುಪಿಐ ಪಾವತಿಗಳ ಬಳಕೆಯನ್ನು ವಿಸ್ತರಿಸಲು ಡಿಸೆಂಬರ್ 8, 2023 ರಂದು ಆಸ್ಪತ್ರೆಗಳು ಮತ್ತು ಶಿಕ್ಷಣ ಸಂಸ್ಥೆಗಳಿಗೆ UPI ಪಾವತಿಗಳ ವಹಿವಾಟಿನ ಮಿತಿಯನ್ನು ರೂ5 ಲಕ್ಷಕ್ಕೆ ಏರಿಸಲಾಗಿದೆ.

ಆನ್‌ಲೈನ್ ವ್ಯಾಲೆಟ್‌ಗಳಂತಹ ಪ್ರಿಪೇಯ್ಡ್ ಪಾವತಿ ಸಾಧನಗಳನ್ನು (ಪಿಪಿಐ) ಬಳಸಿ ಮಾಡಿದ ರೂ 2,000 ಕ್ಕಿಂತ ಹೆಚ್ಚಿನ ಕೆಲವು ವ್ಯಾಪಾರಿ ಗಕಖ ವಹಿವಾಟುಗಳ ಮೇಲೆ 1.1 ಪ್ರತಿಶತ ಇಂಟರ್‌ಚೇಂಜ್ ಶುಲ್ಕವನ್ನೂ ವಿಧಿಸಲಾಗುತ್ತದೆ.

ಆನ್‌ಲೈನ್ ಪಾವತಿ ವಂಚನೆಯ ಹೆಚ್ಚುತ್ತಿರುವ ನಿದರ್ಶನಗಳನ್ನು ನಿಗ್ರಹಿಸಲು, ಬಳಕೆದಾರರು ಈ ಹಿಂದೆ



ವಹಿವಾಟು ನಡೆಸದ ಇನ್ನೊಬ್ಬ ಬಳಕೆದಾರರಿಗೆ ರೂ 2,000 ಕ್ಕಿಂತ ಹೆಚ್ಚಿನ ಮೊದಲ ಪಾವತಿಯನ್ನು ಪ್ರಾರಂಭಿಸಿದರೆ, ಪ್ರತಿ ವಹಿವಾಟಿಗೂ ಯಶಸ್ವಿಯಾಗುವುದಕ್ಕೆ ನಾಲ್ಕು ಗಂಟೆಗಳ ಕಾಲ ಮಿತಿಯನ್ನು ಅನ್ವಯಿಸಲಾಗುತ್ತದೆ. UPI ಸದಸ್ಯರು ಶೀಘ್ರದಲ್ಲೇ UPI 'ಟ್ಯಾಪ್ ಮತ್ತು ಪೇ' ಸೌಲಭ್ಯವನ್ನು ಬಳಕೆ ಮಾಡಲು ಸಾಧ್ಯವಾಗುತ್ತದೆ.

ಹೆಚ್ಚುವರಿಯಾಗಿ, ಆರ್ಬಿಐ ಜಪಾನಿನ ಕಂಪನಿ ಹಿಟಾಚಿಯ ಸಹಯೋಗದೊಂದಿಗೆ ಈಗ ಭಾರತದಾದ್ಯಂತ UPI ಎಟಿಎಂಗಳನ್ನು ಹೊರತರಲಿದೆ, ಇದರಲ್ಲಿ ನಿಮ್ಮ ಬ್ಯಾಂಕ್ ಖಾತೆಯಿಂದ ಹಣವನ್ನು ಹಿಂಪಡೆಯಲು ನೀವು ಕಿಖ ಕೋಡ್ ಅನ್ನು ಸ್ಕ್ಯಾನ್ ಮಾಡಬಹುದಾಗಿದೆ.

ಆಗಸ್ಟ್ 2023 ರಲ್ಲಿ, UPI 10 ಬಿಲಿಯನ್ ವಹಿವಾಟುಗಳನ್ನು ದಾಟುವ ಮೂಲಕ ಗಮನಾರ್ಹ ಮೈಲಿಗಲ್ಲನ್ನು ಸಾಧಿಸಿದೆ. ನ್ಯಾಶನಲ್ ಪೇಮೆಂಟ್ಸ್ ಕಾರ್ಪೊರೇಷನ್ ಆಫ್ ಇಂಡಿಯಾದ ಉನ್ನತ ಅಧಿಕಾರಿಯೊಬ್ಬರು, ದೇಶವು ತಿಂಗಳಿಗೆ 100 ಬಿಲಿಯನ್ ಯುನಿಫೈಡ್ ಪೇಮೆಂಟ್ಸ್ ಇಂಟರ್ಫೇಸ್ (ಯುಪಿಐ) ವಹಿವಾಟುಗಳನ್ನು ಮಾಡುವ ಸಾಮರ್ಥ್ಯವನ್ನು ಹೊಂದಿದೆ ಎಂದು ಹೇಳಿದ್ದಾರೆ.

# ನ್ಯೂ ಇಯರ್ ಪಾರ್ಟಿಯಲ್ಲಿ ಡ್ರಗ್ಸ್ ಸೇವನೆ: 100ಕ್ಕೂ ಹೆಚ್ಚು ಮಂದಿ ಅರೆಸ್ಟ್



ಮುಂಬೈ: ನ್ಯೂ ಇಯರ್ ಹಿನ್ನೆಲೆಯಲ್ಲಿ ಆಯೋಜನೆ ಮಾಡಿದ್ದ ರೇವ್ ಪಾರ್ಟಿ ಮೇಲೆ ಪೊಲೀಸರು ರೇಡ್ ಮಾಡಿದ್ದಾರೆ. ಪಾರ್ಟಿಯಲ್ಲಿ ಡ್ರಗ್ ಸೇವನೆ ಮಾಡಿದ್ದ ಆರೋಪದ ಮೇಲೆ 100ಕ್ಕೂ ಹೆಚ್ಚು ಜನರನ್ನು ಪೊಲೀಸರು ಅರೆಸ್ಟ್ ಮಾಡಿರುವ ಘಟನೆ ಮಹಾರಾಷ್ಟ್ರದ ಥಾಣೆಯಲ್ಲಿ ನಡೆದಿದೆ.

ಥಾಣೆ ನಗರದ ಪೊಲೀಸ್ ಠಾಣೆಯ ಕ್ರೈಂ ಬ್ರಾಂಚ್ ಮಾಹಿತಿ ಆಧಾರದ ಮೇಲೆ ತಡರಾತ್ರಿ ಕಾರ್ಯಾಚರಣೆ ನಡೆಸಿ ರೇವ್ ಪಾರ್ಟಿ ಮೇಲೆ ದಾಳಿ ಮಾಡಿತ್ತು. ಈ ವೇಳೆ ಪಾರ್ಟಿಯಲ್ಲಿ ಭಾಗವಹಿಸಿದ್ದ 100ಕ್ಕೂ ಹೆಚ್ಚಿನ ಜನರು ಎಲ್‌ಎಸ್‌ಡಿ, ಗಾಂಜಾ ಸೇರಿದಂತೆ ವಿವಿಧ ಮಾದಕಗಳನ್ನು ಸೇವನೆ ಮಾಡಿದ್ದರು ಎನ್ನಲಾಗಿದೆ.

ಇನ್ನು ಸದ್ಯ ಬಂಧನವಾಗಿರುವ 100 ಜನರಲ್ಲಿ ಇಬ್ಬರು ಈ ರೇವ್ ಪಾರ್ಟಿಯನ್ನ ಆಯೋಜನೆ ಮಾಡಿದ್ದರು. ಇವರ ಅನುಮತಿ ಮೇರೆಗೆ ಪಾರ್ಟಿಗೆ ಮಾದಕ ವಸ್ತುಗಳು ರವಾನೆ ಆಗಿದ್ದವು ಎಂದು ಹೇಳಲಾಗುತ್ತಿದೆ. ಹೊಸ ವರ್ಷ ಆಚರಣೆ ಹಿನ್ನೆಲೆಯಲ್ಲಿ ಈ ದೊಡ್ಡ ಪಾರ್ಟಿಯನ್ನು ಯೋಜಿಸಿದ್ದರು. ಇನ್ನು ಬಂಧಿತರಾಗಿರುವ ಆರೋಪಿಗಳನ್ನು ಮಾದಕವಸ್ತು ಸೇವನೆಯ ಕುರಿತು ತಿಳಿದುಕೊಳ್ಳಲು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಗುತ್ತದೆ ಎಂದು ಹೇಳಲಾಗಿದೆ.

# ಅಯೋಧ್ಯೆ ರಾಮ ಮಂದಿರ; ಸಿಎಂ ಯೋಗಿ ಆದಿತ್ಯನಾಥಗೆ ಬಾಂಬ್ ಬೆದರಿಕೆ ಇ-ಮೇಲ್

ಇನ್ನೇನು ಕೆಲ ದಿನಗಳಲ್ಲಿಯೇ ಅಯೋಧ್ಯೆಯ ಶ್ರೀರಾಮ ಮಂದಿರದಲ್ಲಿ ರಾಮಲಲ್ಲಾನ ಪ್ರಾಣ ಪ್ರತಿಷ್ಠೆ ನೆರವೇಲಿದ್ದು, ಅದಕ್ಕೆ ಬೇಕಾದ ಸಿದ್ಧತೆಗಳು ಭರದಿಂದ ಸಾಗುತ್ತಿವೆ.

ಈ ನಡುವೆ ಒಂದು ಸಂದೇಶವುಳ್ಳ ಇ–ಮೇಲ್ ಆತಂಕ ಸೃಷ್ಟಿಸುವಂತೆ ಮಾಡಿದೆ. ಹೌದು, ಅಯೋಧ್ಯೆಯ ಶ್ರೀರಾಮ ಮಂದಿರವನ್ನು ಬಾಂಬ್ ದಾಳಿ ಮೂಲಕ ಸ್ಫೋಟಿಸುವ ಬೆದರಿಕೆಯ ಇ–ಮೇಲ್ ಒಂದು ಬಂದಿದೆ. ಈ ಸಂದೇಶದಲ್ಲಿ ಉತ್ತರ ಪ್ರದೇಶದ ಸಿಎಂ ಯೋಗಿ ಆದಿತ್ಯನಾಥ್ ಮತ್ತು ಎಸ್‌ಟಿಎಫ್ ಎಡಿಜಿ ಅಮಿತಾಬ ಯಶ್ ಅವರ ಬಗ್ಗೆಯೂ ಬರೆಯಲಾಗಿದೆ.

ಇ–ಮೇಲ್ ಕಳುಹಿಸಿದ ವ್ಯಕ್ತಿ ತನಗೆ ಪಾಕಿಸ್ತಾನದ ಬೇಹುಗಾರಿಕಾ ಸಂಸ್ಥೆ ಐಎಸ್‌ಐ ಜೊತೆ ಸಂಬಂಧ ಇದೆ ಎಂತಲೂ ತಿಳಿಸಿದ್ದಾನೆ. ಈ ಬಗ್ಗೆ ಪ್ರಕರಣ ದಾಖಲಾಗಿದ್ದು, ಯುಪಿ ಪೊಲೀಸರು ತನಿಖೆಯನ್ನು ಕೈಗೊಂಡಿದ್ದಾರೆ.

ಆಕ್ಷೇಪಾರ್ಹ ಭಾಷೆಯನ್ನು ಬಳಸಿ ಭಾರತೀಯ ಕಿಸಾನ್ ಮಂಚ್‌ನ ರಾಷ್ಟ್ರೀಯ ಅಧ್ಯಕ್ಷ ದೇವೇಂದ್ರ ತಿವಾರಿ ಅವರಿಗೆ ರವಾನಿದ್ದಾನೆ. ಇನ್ನು ಇ–ಮೇಲ್ ಕಳುಹಿಸಿದ ವ್ಯಕ್ತಿ ತನ್ನನ್ನು ಜುಬೈರ್ ಹುಸೇನ್ ಖಾನ್ ಎಂದು ಹೇಳಿಕೊಂಡಿದ್ದು, ಐಎಸ್‌ಐ ಜತೆಗೂ ಸಂಬಂಧವಿದೆ



ಎಂದು ಹೇಳಿಕೊಂಡಿದ್ದಾನೆ.

ಈ ಬಗ್ಗೆ ದೇವೇಂದ್ರ ತಿವಾರಿ ಅವರು ಸಾಮಾಜಿಕ ಮಾಧ್ಯಮ ಎಕ್ಸ್ (ಟ್ವಿಟ್ಟರ್) ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಈ ಹಿಂದೆಯೂ ಸಹ ಇಂತಹ ಬೆದರಿಕೆ ಮೇಲ್ ಬಂದಿರುವುದಾಗಿ ತಿವಾರಿ ತಿಳಿಸಿದ್ದಾರೆ.

ಯುಪಿ ಸಿಎಂ ಯೋಗಿ ಆದಿತ್ಯನಾಥ್, ಎಡಿಜಿ ಅಮಿತಾಬ ಯಶ್ ಹಾಗೂ ದೇವೇಂದ್ರ ತಿವಾರಿ ಅವರನ್ನು ಬೆದರಿಕೆ ಇ–ಮೇಲ್‌ನಲ್ಲಿ ಗೋಸೇವಕರು ಎಂದು ಬರೆದುಕೊಂಡಿದ್ದಾನೆ.

ಬೆದರಿಕೆಯ ಇ–ಮೇಲ್ ಸಂದೇಶ ಕಳೆದ ಡಿಸೆಂಬರ್ 27ರ ಸಂಜೆ ದೇವೇಂದ್ರ ಅವರ ಮೇಲ್ ಐಡಿಗೆ ಬಂದಿದೆ.

# ಅತಿಥಿ ಉಪನ್ಯಾಸಕರಿಗೆ ಎಚ್ಚರಿಕೆ ರವಾನಿಸಿದ ಸರ್ಕಾರ



ಬೆಂಗಳೂರು: ಅತಿಥಿ ಉಪನ್ಯಾಸಕರು ಜ.1ರಿಂದ ತರಗತಿಗಳಿಗೆ ಹಾಜರಾಗದಿದ್ದರೆ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕಾಗುತ್ತದೆ ಎಂದು ಉನ್ನತ ಶಿಕ್ಷಣ ಇಲಾಖೆಯು ಎಚ್ಚರಿಕೆ ನೀಡಿದೆ.

ರಾಜ್ಯದ ಎಲ್ಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರಿಗೆ ಪತ್ರ ಬರೆದಿರುವ ಕಾಲೇಜು ಶಿಕ್ಷಣ ಇಲಾಖೆ ಆಡಳಿತಾಧಿಕಾರಿಗಳು, 2023–24ನೇ ಸಾಲಿನಲ್ಲಿ ಸರ್ಕಾರಿ ಕಾಲೇಜುಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆನ್‌ಲೈನ್ ಮೂಲಕ ಕೌನ್ಸೆಲಿಂಗ್ ನಡೆಸಿ ಆಯ್ಕೆ ಮಾಡಿಕೊಳ್ಳಲಾಗಿದೆ.

ಅತಿಥಿ ಉಪನ್ಯಾಸಕರು ನ.23ರಿಂದ ತರಗತಿಗಳನ್ನು ಬಹಿಷ್ಕರಿಸಿ ಹೋರಾಟ ಮಾಡುತ್ತಿದ್ದಾರೆ. ಇದಕ್ಕೆ ಸಂಬಂಧಿಸಿದಂತೆ ಉನ್ನತ ಶಿಕ್ಷಣ ಸಚಿವರು ಡಿ.29ರಂದು ಅತಿಥಿ ಉಪನ್ಯಾಸಕ ಸಂಘಟನೆಗಳೊಂದಿಗೆ ಸಭೆ ನಡೆಸಿ ಕರ್ತವ್ಯಕ್ಕೆ ಹಾಜರಾಗುವಂತೆ ನಿರ್ದೇಶನ ನೀಡಿದ್ದಾರೆ. ಅಲ್ಲದೆ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತರಗತಿಗಳನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಅತಿಥಿ ಉಪನ್ಯಾಸಕರನ್ನು ತೆಗೆದುಕೊಳ್ಳದಿದ್ದಲ್ಲಿ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕಾಗುತ್ತದೆ ಎಂದು ತಿಳಿಸಿದ್ದಾರೆ.

ಆದ್ದರಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರು ಜ.1ರಂದು ತರಗತಿಗೆ ಹಾಜರಾಗಿರುವ ಬಗ್ಗೆ ವಿವರಗಳನ್ನು ಅಂದು ಮಧ್ಯಾಹ್ನ 2 ಗಂಟೆಯೊಳಗೆ ಸಲ್ಲಿಸುವಂತೆ ಎಲ್ಲ ಪ್ರಾಂಶುಪಾಲರಿಗೆ ಸೂಚನೆ ನೀಡಿದ್ದಾರೆ.

# ನ್ಯೂ ಇಯರ್ ಪಾರ್ಟಿಗೆಂದು ಬಂದಿದ್ದ ಎಸ್ಪಿ ಪುತ್ರನ ಮೇಲೆ ಹಲ್ಲೆ

ಬೆಂಗಳೂರು: ಹೊಸ ವರ್ಷ ಸಂಭ್ರಮಾಚರಣೆಗೆ ಬೆಂಗಳೂರು ನಗರದ ಡೈರಿ ಸರ್ಕಲ್‌ನ ಕ್ರೈಸ್ಟ್ ಕಾಲೇಜು ಬಳಿ ಬಂದಿದ್ದ ಕೇರಳದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುತ್ರನ ಮೇಲೆ ಹಲ್ಲೆ ನಡೆಸಲಾಗಿದೆ ಎಂಬ ಆರೋಪ ಕೇಳಿಬಂದಿದೆ.



ಹಲ್ಲೆಗೊಳಗಾದ ಯುವಕ ಸ್ಟಾಲಿನ್ ಎಂದು ವರದಿಯಿಂದ ತಿಳಿದುಬಂದಿದೆ.

ಹೊಸ ವರ್ಷದ ಪಾರ್ಟಿಗೆಂದು ಸ್ಟಾಲಿನ್ ಕೇರಳದಿಂದ ಬೆಂಗಳೂರಿಗೆ ಬಂದಿದ್ದು, ತನ್ನ ಗೆಳೆಯರ ಜೊತೆ ಪಬ್ನಲ್ಲಿ ಪಾರ್ಟಿ ಮಾಡುತ್ತಿದ್ದನು. ಸ್ವಲ್ಪ ಸಮಯದ ನಂತರ ಸ್ಟಾಲಿನ್ ಗೆಳೆಯರು ಪಬ್ನಿಂದ ಹೊರಗೆ ಬಂದಿದ್ದಾರೆ. ಹೀಗೆ ಹೊರಗೆ ಬಂದವರು ಯುವತಿಯನ್ನು ಟಚ್ ಮಾಡಿದ್ದಾರೆ ಎಂದು ಸ್ಟಾಲಿನ್ ಗೆಳೆಯರ ಜೊತೆ ಇಬ್ಬರು ಯುವಕರು ಜಗಳಕ್ಕಿಳಿದಿದ್ದಾರೆ.

ಇದನ್ನು ತಿಳಿದ ಸ್ಟಾಲಿನ್, ಏನಾಯ್ತು ಎಂದು ಹೊರಗೆ ಬಂದು ನೋಡುತ್ತಿದ್ದ ವೇಳೆ ಆ ಇಬ್ಬರು ಯುವಕರು ಸ್ಟಾಲಿನ್ ಮೇಲೂ ಹಲ್ಲೆ ಮಾಡಿದ್ದಾರೆ ಎನ್ನಲಾಗಿದೆ. ಗಲಾಟೆಯಲ್ಲಿ ಸ್ಟಾಲಿನ್ ಅವರ ಹಲ್ಲು ಮುರಿದಿದೆ.

ಕೂಡಲೇ ಸ್ಥಳಕ್ಕೆ ಬಂದ ಪೊಲೀಸರು ಗಲಾಟೆ ತಡೆದಿದ್ದಾರೆ. ಬಳಿಕ ಪೊಲೀಸರು ವಿಚಾರಿಸಿದಾಗ ತಾನು ಕೇರಳದ ಎಸ್ಪಿ ಎಜೆ ಬಾಬು ಪುತ್ರ ಎಂದು ಸ್ಟಾಲಿನ್ ಹೇಳಿದ್ದಾನೆ. ಆಡುಗೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಅಸ್ವಸ್ಥಗೊಂಡಿದ್ದ ಕೈದಿ ಸಾವು



ಆನೇಕಲ್: ಡಕಾಯಿತಿ ಪ್ರಕರಣದಲ್ಲಿ ಬಂಧಿಸಿದ್ದ ಆರೋಪಿ ನಿಗೂಢ ಸಾವನ್ನಪ್ಪಿರೋ ಘಟನೆ ಬೆಂಗಳೂರಿನ ಎಚ್‌ಎಸ್‌ಆರ್ ಲೇಔಟ್ ಪೊಲೀಸ್ ಠಾಣೆಯಲ್ಲಿ ನಡೆದಿದೆ.

ಮಡಿವಾಳದ ತಾವರೆಕೆರೆ ಮೂಲದ ಆರೋಪಿ ಗಣೇಶ್ನನ್ನ ದರೋಡೆ ಪ್ರಕರಣದಲ್ಲಿ2023ರ ಡಿಸೆಂಬರ್ 22ರಂದು ಬಂಧಿಸಲಾಗಿತ್ತು. ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದ ಗಣೇಶ್ ತೀವ್ರ ನೋವಿನಿಂದ ಒದ್ದಾಡಿದ್ದ. ಆಸ್ಪತ್ರೆಗೆ ದಾಖಲಿಸುವ ಮಾರ್ಗಮಧ್ಯೆ ಸಾವನ್ನಪ್ಪಿದ್ದಾನೆ.

ಆರೋಪಿಯನ್ನ ಠಾಣೆಯಲ್ಲಿ ಹಲವು ದಿನ ಇಟ್ಟುಕೊಂಡಿದ್ದ ಪೊಲೀಸರು, ತೀವ್ರ ವಿಚಾರಣೆಗೆ ಒಳಪಡಿಸಿದ್ರು. ವಿಚಾರಣೆ ಮಾಡುವ ವೇಳೆ ಮರ್ಮಾಂಗಕ್ಕೆ ಗಾಯ ಆಗಿತ್ತು. ಮರ್ಮಾಂಗಕ್ಕೆ ಖಾರದಪುಡಿ ಹಾಕಿರೋದಾಗಿ ಕುಟುಂಬಸ್ಥರು ಹಾಗೂ ಸ್ನೇಹಿತರು ಹೆಚ್‌ಎಸ್‌ಆರ್ ಠಾಣೆ ಪೊಲೀಸರ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ.

## 2023ರಲ್ಲಿ ಮಹಿಳೆಯರ ವಿರುದ್ಧ 28,811 ಅಪರಾಧ, ಉತ್ತರ ಪ್ರದೇಶದಲ್ಲೇ ಶೇ. 55 ರಷ್ಟು ಪ್ರಕರಣ: NCW

ನವದೆಹಲಿ: ರಾಷ್ಟ್ರೀಯ ಮಹಿಳಾ ಆಯೋಗ (ಎನ್‌ಸಿಡಬ್ಲ್ಯು) ಕಳೆದ ವರ್ಷ ಮಹಿಳೆಯರ ವಿರುದ್ಧದ ಅಪರಾಧಕ್ಕೆ ಸಂಬಂಧಿಸಿದಂತೆ 28,811 ಪ್ರಕರಣಗಳನ್ನು ದಾಖಲಿಸಿದೆ ಮತ್ತು ಈ ಪೈಕಿ ಶೇಕಡಾ 55 ರಷ್ಟು ಪ್ರಕರಣಗಳು ಉತ್ತರ ಪ್ರದೇಶದಿಂದ ವರದಿಯಾಗಿವೆ.


ಕೌಟುಂಬಿಕ ಹಿಂಸಾಚಾರ ಹೊರತುಪಡಿಸಿ ಕಿರುಕುಳವನ್ನು ಒಳಗೊಂಡಿರುವ ಗೌರವಕ್ಕೆ ಧಕ್ಕೆ ವಿಭಾಗದಲ್ಲಿ ಹೆಚ್ಚಿನ ಸಂಖ್ಯೆಯ ಅಂದರೆ 8,540 ದೂರುಗಳನ್ನು ಸ್ವೀಕರಿಸಲಾಗಿದೆ ಮತ್ತು ನಂತರ 6,274 ಕೌಟುಂಬಿಕ ದೌರ್ಜನ್ಯದ ದೂರುಗಳು ಬಂದಿವೆ ಎಂದು NCW ಡೇಟಾ ತಿಳಿಸಿದೆ.

ವರದಕ್ಷಿಣೆ ಕಿರುಕುಳದ ದೂರುಗಳು 4,797, ಕಿರುಕುಳದ ದೂರುಗಳು 2,349, ಮಹಿಳೆಯರು ನೀಡಿದ ದೂರುಗಳ ವಿರುದ್ಧ ಪೊಲೀಸರ ನಿರಾಸಕ್ತಿಗೆ ಸಂಬಂಧಿಸಿದ ದೂರುಗಳು 1,618 ಮತ್ತು ಅತ್ಯಾಚಾರ ಹಾಗೂ ಅತ್ಯಾಚಾರ ಯತ್ನದ ದೂರುಗಳು 1,537 ರಷ್ಟು ಬಂದಿವೆ ಎಂದು ಅಂಕಿಅಂಶಗಳು ತಿಳಿಸಿವೆ.

805 ಲೈಂಗಿಕ ಕಿರುಕುಳದ ದೂರುಗಳು, ಸೈಬರ್ ಅಪರಾಧದ ದೂರುಗಳು 605, ಹಿಂಬಾಲಿಸಿದ ವಿಚಾರಕ್ಕೆ ಸಂಬಂಧಿಸಿದ 472 ದೂರುಗಳಿವೆ ಎಂದು ಅದು ಹೇಳಿದೆ. ಅಂಕಿಅಂಶಗಳ ಪ್ರಕಾರ ಉತ್ತರ ಪ್ರದೇಶದಲ್ಲಿ ಅತಿ ಹೆಚ್ಚು ಅಂದರೆ 16,109 ದೂರುಗಳು ದಾಖಲಾಗಿದ್ದು, ದೆಹಲಿಯಲ್ಲಿ 2,411, ಮಹಾರಾಷ್ಟ್ರದಲ್ಲಿ 1,343 ದೂರುಗಳು ದಾಖಲಾಗಿವೆ. ಬಿಹಾರದಲ್ಲಿ 1,312, ಮಧ್ಯಪ್ರದೇಶದಲ್ಲಿ 1,165, ಹರಿಯಾಣದಲ್ಲಿ 1,115, ರಾಜಸ್ಥಾನದಲ್ಲಿ 1,011, ತಮಿಳುನಾಡಿನಲ್ಲಿ 608, ಪಶ್ಚಿಮ ಬಂಗಾಳದಲ್ಲಿ 569 ಮತ್ತು ಕರ್ನಾಟಕದಲ್ಲಿ 501 ದೂರುಗಳು ದಾಖಲಾಗಿವೆ.

# ವಿತ್ತ ಜಗತ್ತು 2024 ರಲ್ಲಿ ಹೇಗಿರಲಿದೆ?

## ಇಣುಕು ನೋಟ ಇಲ್ಲಿದೆ! (ಹಣಕ್ಲಾಸು)




ಈ ವರ್ಷ ಹೇಗಿರುತ್ತೆ? ಎನ್ನುವುದು ಪ್ರತಿಯೊಬ್ಬ ನಾಗರೀಕನಿಗೂ ಕುತೂಹಲವಿರುತ್ತದೆ. ನನ್ನ ಭವಿಷ್ಯ ಹೇಗಿದೆ ಎನ್ನುವುದನ್ನು ತಿಳಿದುಕೊಳ್ಳುವ ಹಂಬಲ ಕೂಡ ಇದ್ದೆ ಇರುತ್ತದೆ. ಇದು ಆ ರೀತಿಯ ಭವಿಷ್ಯವಾಣಿಯಲ್ಲ. ಆದರೆ ಪ್ರತಿಯೊಬ್ಬ ನಾಗರಿಕನ ಭವಿಷ್ಯವನ್ನು ಬದಲಿಸಬಲ್ಲ ಲೆಕ್ಕಾಚಾರದ, ಅಂಕಿಅಂಶಗಳು ಹೇಳುವ ಮಾತು. ಜಾಗತಿಕವಾಗಿ 2024 ರಲ್ಲಿ ವಿತ್ತ ಜಗತ್ತು ಹೇಗಿರಲಿದೆ ಎನ್ನುವುದನ್ನು ಸ್ವಲ್ಪ ವಿಶ್ಲೇಷಿಸುವ ಪ್ರಯತ್ನವನ್ನು ಮಾಡೋಣ.

ಆರ್ಬಿಸಿ ಅಸೆಟ್ ಮ್ಯಾನೇಜ್ಮೆಂಟ್ ಸಂಸ್ಥೆ ಹೇಳುವ ಪ್ರಕಾರ 2024 ರಲ್ಲಿ ಜಾಗತಿಕವಾಗಿ ವಿತ್ತ ಜಗತ್ತು ರಿಸೆಶನ್ ಗೆ ತುತ್ತಾಗುವ ಸಾಧ್ಯತೆ ಎಪ್ಪತ್ತು ಪ್ರತಿಶತ. ವರ್ಷದ ಮೊದಲಲ್ಲೇ ಇದನ್ನು ನಾವು ಕಾಣಬಹುದು ಎನ್ನುತ್ತದೆ. ಈ ರೀತಿಯ ಆರ್ಥಿಕ ಹಿಂಜರಿತಕ್ಕೆ ಕಾರಣಗಳನ್ನು ಕೂಡ ಆ ಸಂಸ್ಥೆ ನೀಡಿದೆ. ಒಂದೇ ಸಮನೆ ಏರುತ್ತ ಬಂದಿರುವ ಅಮೆರಿಕಾದ ಫೆಡರಲ್ ಬಡ್ಡಿ ದರ ಈ ಕುಸಿತಕ್ಕೆ ಪ್ರಮುಖ ಕಾರಣವಾಗಲಿದೆ. ಅಮೇರಿಕಾದಲ್ಲಿ ಹೆಚ್ಚಾಗಿರುವ ಹಣದುಬ್ಬರವನ್ನು ಕಡಿಮೆ ಗೊಳಿಸುವ ಸಲುವಾಗಿ ಬಡ್ಡಿದರವನ್ನು ಏರಿಸುತ್ತಾ ಬಂದಿದ್ದು ಎಲ್ಲರಿಗೂ ತಿಳಿದ ವಿಷಯವಾಗಿದೆ. ಏರಿದ ಬಡ್ಡಿ ದರ ಇನ್ನೊಂದು ಸುತ್ತಿನ ಹಣದುಬ್ಬರಕ್ಕೆ ಕಾರಣವಾಗಿದೆ. ಹೀಗಾಗಿ ಹಣದುಬ್ಬರವನ್ನು ಕಡಿಮೆ ಮಾಡಬೇಕೆಂದು ಏರಿಸಿದ ಬಡ್ಡಿ ದರವೆ ಮುಳುವಾಗುವ ಸಾಧ್ಯತೆಗಳು ಬಹಳ ಹೆಚ್ಚಾಗಿವೆ. ಅಲ್ಲದೆ ಪ್ರತಿ ಬ್ಯುಸಿನೆಸ್ಗೆ ಒಂದು ಸೈಕಲ್, ಅಥವಾ ಒಂದು ಕರ್ವ್ ಎನ್ನುವುದನ್ನು ಮಾಡಿಕೊಂಡಿರಲಾಗುತ್ತದೆ.

ಅದರ ಪ್ರಕಾರ ಎರಡು ವರ್ಷ ಹತ್ತು ತಿಂಗಳ ಕರ್ವ್ ಮತ್ತು ಮೂರು ವರ್ಷ ಹತ್ತು ತಿಂಗಳ ಕರ್ವ್ ಎರಡೂ ಮುಂದೆ ಆರ್ಥಿಕ ಹಿಜರಿತವಿದೆ ಎನ್ನುವುದನ್ನು ಹೇಳುತ್ತಿವೆ. ಅಂದರೆ ಗಮನಿಸಿ ಎಕಾನಮಿ ಎನ್ನುವುದು ಹೇಗೆ ನಡೆಯುತ್ತದೆ. ಅದರಲ್ಲಾಗುವ ಬದಲಾವಣೆಗಳನ್ನು ಕರ್ವ್ ಮೂಲಕ ಗಮನಿಸಿ ದಾಖಲಿಸಿ ಇಡಲಾಗುತ್ತದೆ. ಇವು ಅಂಕಿಅಂಶಗಳ ಆಧಾರದ ಮೇಲೆ , ಇಂತಹ ಸನ್ನಿವೇಶದಲ್ಲಿ ಮನುಷ್ಯ ಹೇಗೆ ವರ್ತಿಸುತ್ತಾನೆ ಎನ್ನುವುದನ್ನು ಕೂಡ ಲೆಕ್ಕ ಹಾಕಿ ಸೃಷ್ಟಿಸಲಾಗಿರುವ ಕರ್ವ್ಗಳು. ಇವುಗಳ ಪ್ರಕಾರ 2024 ರಲ್ಲಿ ಆರ್ಥಿಕ ಹಿಂಜರಿತ ಗ್ಯಾರಂಟಿ.

ನಮ್ಮ ಸಮಾಜ ಸಸ್ಟೈನಬಲ್ ಮಟ್ಟಕ್ಕಿಂತ ಹೆಚ್ಚಿನ ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಾ ಬಂದಿದೆ. ಎಲ್ಲಿಯವರೆಗೆ ಹೆಚ್ಚಿನ ಒತ್ತಡವನ್ನು ಸಮಾಜ ತಡೆದುಕೊಳ್ಳಬಲ್ಲದು ? ಅಂದರೆ ಗಮನಿಸಿ ಎಲ್ಲದಕ್ಕೂ ಒಂದು ಗರಿಷ್ಟ ಕ್ಯಾಪಾಸಿಟಿ ಎನ್ನುವುದು ಇರುತ್ತದೆ. ಆ ಮಿತಿಯನ್ನು ಮೀರಿ ನಾವು ಹೆಚ್ಚು ಕಾಲ ಏನನ್ನೂ ಮಾಡಲು ಸಾಧ್ಯವಿಲ್ಲ. ಉದಾಹರಣೆಗೆ ಒಂದು ಲಾರಿ 20–25 ಟನ್ ತೂಕವನ್ನು ಹೊರಬಲ್ಲದು ಎಂದರೆ ಅದಕ್ಕಿಂತ ಐದತ್ತು ಟನ್ ಕಡಿಮೆ ಲೋಡ್ ಹಾಕಿರಬೇಕು. ಅದರ ಬದಲಿಗೆ ನಾವು 30–35 ಟನ್ ತೂಕವನ್ನು ಹಾಕಿದರೆ ಅವಘಡ ತಪ್ಪಿದ್ದಲ್ಲ. ನಮ್ಮ ಸಮಾಜದಲ್ಲಿ ಆಗಿರುವು ಇದೆ, ವರ್ಷಾನುಗಟ್ಟಲೆ ಓವರ್ ಲೋಡ್ ತಡೆದುಕೊಂಡಿರುವ ಆರ್ಥಿಕತೆ ಕುಸಿತ ಕಾಣುವುದು ಅತಿ ಸಹಜ. ಕೂಲ್ ಡೌನ್ ಆಗಲು ವೇಗವನ್ನಾದರೂ ತಗ್ಗಿಸ ಬೇಕಲ್ಲವೇ? ಆರ್ಥಿಕ ಹಿಂಜರಿತ ಅಥವಾ ರಿಸೆಶನ್ ಎಂದರೆ ಇನ್ನೇನೂ ಅಲ್ಲ ಅದು ನಮ್ಮ ಆರ್ಥಿಕತೆಯ ವೇಗಕ್ಕೆ ಕಡಿವಾಣ ಹಾಕುವ ಸ್ಪೀಡ್ ಬ್ರೇಕರ್.

ಜಗತ್ತಿನಾದ್ಯಂತ ಸೆಂಟ್ರಲ್ ಬ್ಯಾಂಕುಗಳು ಕೋವಿಡ್ಗೆ ಮೊದಲಿದ್ದ ಹಣದುಬ್ಬರವನ್ನು ಮರಳಿ ತರಲು ಹರಸಾಹಸವನ್ನು ಪಡುತ್ತಿವೆ. ಈ ರಿಸೆಶನ್ ಜ್ವರ ಬಂದಾಗ ಮಾತ್ರೆ ತೆಗೆದುಕೊಂಡಂತೆ ಒಳಿತೇ ಆಗಲಿದೆ ಎಂದು ನನ್ನ ಭಾವನೆ. ಈ ಹಿಂಜರಿತದಿಂದ ಮಾರುಕಟ್ಟೆಯಲ್ಲಿ ಹಣದುಬ್ಬರ ಮತ್ತು ಲೇಬರ್ ಮಾರುಕಟ್ಟೆಯಲ್ಲಿ ವೇತನ ಹೆಚ್ಚಳದ ಕೂಗು ಸ್ವಲ್ಪ ಕಡಿಮೆಯಾಗುತ್ತದೆ. ಇದು ಒಟ್ಟಾರೆ ಹಣದುಬ್ಬರವನ್ನು ಕಡಿಮೆ ಮಾಡುವುದರಲ್ಲಿ ಒಂದಷ್ಟು ಸಹಕಾರಿಯಾಗಲಿದೆ.

ಹೌದು 2024 ರ ಮೊದಲರ್ಧದಲ್ಲಿ ಆರ್ಥಿಕ ಹಿಂಜರಿತ ತಪ್ಪಿಸುವುದು ಕಷ್ಟಸಾಧ್ಯ. ಗಮನಿಸಿ ಇದು ಕುಸಿತವಲ್ಲ, ಕೇವಲ ಹಿಂಜರಿಕೆ. ಅಂದರೆ ಇದು ಕೇವಲ ಒಂದಷ್ಟು ವಾರಗಳಿಗೆ, ಹೆಚ್ಚೆಂದರೆ ಒಂದಷ್ಟು ತಿಂಗಳು ಮಾತ್ರ ಇರಲಿದೆ. ಸಮಾಜದ ಒಂದು ವರ್ಗಕ್ಕೆ ರಿಸೆಶನ್ ಆಗಿತ್ತು ಎಂದು ಕೂಡ ತಿಳಿಯುವುದಿಲ್ಲ. ರಿಸೆಶನ್ ಆಗಿತ್ತು ಎಂದು ಎಲ್ಲರಿಗೂ ತಿಳಿಯುವುದರೊಳಗೆ ಅದು ಬಂದು ಹೋಗಿರುತ್ತದೆ. ಹೀಗಾಗಿ ಇದರ ಬಗ್ಗೆ ನಾವು ಹೆಚ್ಚು ಚಿಂತೆ ಮಾಡಬೇಕಾದ ಅವಶ್ಯಕತೆಯಿಲ್ಲ. ಆದರೂ ಸಮಾಜದಲ್ಲಿ ಆಗುತ್ತಿರುವ ಬದಲಾವಣೆಗಳ ಬಗ್ಗೆ ಗಮನವಿರಲಿ.

**ಹಣದುಬ್ಬರ**

ಜಾಗತಿಕವಾಗಿ ಹಣದುಬ್ಬರ ಎಲ್ಲಾ ದೇಶಗಳನ್ನೂ ಹೈರಾಣು ಮಾಡಿದೆ. ಕೋವಿಡ್ ನಂತರದ ಬೆಲೆಯೇರಿಕೆ ಬಹಳ ದೇಶಗಳ ಅರ್ಥ ವ್ಯವಸ್ಥೆಯನ್ನು ಬದಲು ಮಾಡಿ ಬಿಟ್ಟಿವೆ. ಅಮೇರಿಕಾ , ಯೂರೋಪು ಸೇರಿದಂತೆ ಬಹಳ ದೇಶಗಳಲ್ಲಿ ಆಹಾರ ಪದಾರ್ಥಗಳ ಮೇಲಿನ ಬೆಲೆಯೇರಿಕೆ 50–80 ಪ್ರತಿಶತ ಮುಟ್ಟಿದೆ ಎಂದರೆ ಹಣದುಬ್ಬರದ ತೊಂದರೆ ಎಷ್ಟು ದೊಡ್ಡದು ಎನ್ನವುದರ ಅರಿವಾದೀತು. 2024 ರಲ್ಲಿ ಕೂಡ ಹಣದುಬ್ಬರ ತನ್ನ ಓಟವನ್ನು ಮುಂದವರಿಸಲಿದೆ. ರಿಸೆಶನ್ ಇದಕ್ಕೆ ಸ್ವಲ್ಪ ಮಟ್ಟಿನ ಕಡಿವಾಣ ಹಾಕಬಹುದು. ಉಳಿದಂತೆ 2024 ರಲ್ಲೂ ಹಣದುಬ್ಬರದ ಕಾಟ ಇದ್ದೆ ಇರುತ್ತದೆ.

**ಡೆಫ್ಲೇಷನ್ ಅಥವಾ ಹಣದುಬ್ಬರದಿಳಿತ**

ಡೆಫ್ಲೇಷನ್ ಎನ್ನುವ ಹೊಸ ಸನ್ನಿವೇಶ ಚೀನಾಕ್ಕೆ ಎದುರಾಗಿದೆ. ಇದು ಹಣದುಬ್ಬರಕ್ಕೆ ವಿರುದ್ಧವಾದದ್ದು. ಹಣದುಬ್ಬರದಲ್ಲಿ ಬೇಡಿಕೆ ಕುಸಿಯುವುದಿಲ್ಲ ಆದರೆ ಸೇವೆ ಮತ್ತು ಸರುಕಿನ ಬೆಲೆ ಹೆಚ್ಚಾಗುತ್ತಾ ಹೋಗುತ್ತದೆ. ಹೀಗಾಗಿ ಜನರಿಗೆ ಅದನ್ನು ಕೊಳ್ಳುವ ಶಕ್ತಿ ಕುಗ್ಗುತ್ತದೆ. ಈ ಕಾರಣ ಡಿಮ್ಯಾಂಡ್ ಕುಸಿತವಾಗುತ್ತದೆ.

ಬೆಲೆಯೇರಿಕೆಯನ್ನು ತಡೆದು ಬಿಟ್ಟರೆ ಸಾಕು ಮಾರುಕಟ್ಟೆ ಮತ್ತೆ ಹಳಿಗೆ ಬರುತ್ತದೆ. ಹೀಗಾಗಿ ಇದು ಲೆಕ್ಕಾಚಾರದ ಪ್ರಕಾರ ಇದ್ದುದರಲ್ಲಿ ಸುಲಭವಾಗಿ ನಿಯಂತ್ರಣಕ್ಕೆ ತರಬಹುದು. ಆದರೆ ಡೆಫ್ಲೇಷನ್ ಹಾಗಲ್ಲ. ಇಲ್ಲಿ ಬೆಲೆಯೇರಿಕೆ ಇರುವುದಿಲ್ಲ ಎಲ್ಲವೂ ಕೈಗೆಟಕುವ ದರದಲ್ಲಿ ಸಿಗುತ್ತದೆ. ಆದರೆ ಡಿಮ್ಯಾಂಡ್ ಕುಸಿತಕಾಣುತ್ತದೆ. ಜನರಿಗೆ ಕೊಳ್ಳುವುದರಲ್ಲಿ ಆಸಕ್ತಿ ಕಡಿಮೆಯಾಗುತ್ತದೆ. ಎಲ್ಲವೂ ಸಿಗುತ್ತಿದೆ , ಬೆಲೆಯೂ ಕೈಗೆಟುಕುವ ಮಟ್ಟದಲ್ಲಿದೆ ಆದರೂ ಪದಾರ್ಥವನ್ನು ಕೊಳ್ಳದ ಸನ್ನಿವೇಶವನ್ನು ಡೆಫ್ಲೇಷನ್ ಎನ್ನಲಾಗುತ್ತದೆ. ಇದು ಹಣದುಬ್ಬರಕ್ಕಿಂತ ದೊಡ್ಡ ಸಮಸ್ಯೆ. ಜಪಾನ್ ಇದರಲ್ಲಿ ಸಿಲುಕಿ ಇದೀಗ ಇದರಿಂದ ಹೊರಬರುತ್ತಿದೆ. ಚೀನಾ ಇದೀಗ ಇದರ ಕಬಂಧ ಬಾಹುಗಳಿಗೆ ಸಿಲುಕಿದೆ. ಚೀನಾದಲ್ಲಿ ಆರ್ಥಿಕತೆ ಕುಸಿದರೆ ಅದರ ಪರಿಣಾಮ ಜಗತ್ತಿನ ಮೇಲೂ ಆಗಲಿದೆ.

**ಭಾರತದಲ್ಲಿ ನಡೆಯಲಿರುವ ಮಹಾಚುನಾವಣೆ ಜಾಗತಿಕ ವಿತ್ತ ಜಗತ್ತಿನ ದಿಕ್ಸೂಚಿ ಕೂಡ ಆಗಲಿದೆ**

ಈಗಷ್ಟೆ ರಾಜ್ಯ ಚುನಾವಣೆಗಳಲ್ಲಿ ಕೇಂದ್ರ ಸರಕಾರದಲ್ಲಿ ಆಡಳಿತ ನಡೆಸುತ್ತಿರುವ ಪಕ್ಷ ಜಯಭೇರಿ ಬಾರಿಸಿದೆ. ಅದರ ಪರಿಣಾಮ ಷೇರು ಮಾರುಕಟ್ಟೆಯಲ್ಲಿ ಕಂಡಿದ್ದೇವೆ. 2024 ರ ಏಪ್ರಿಲ್ ಮೇಯಲ್ಲಿ ನಡೆಯಲಿರುವ ಈ ಚುನಾವಣೆ ಕೇವಲ ಭಾರತದ ಭವಿಷ್ಯದ ದೃಷ್ಟಿಯಿಂದ ಮಾತ್ರವಲ್ಲ, ಜಾಗತಿಕ ವಿತ್ತ ಜಗತ್ತಿನ ದೃಷ್ಟಿಯಲ್ಲೂ ಬಹಳ ಮುಖ್ಯವಾಗಲಿವೆ.

ಕಳೆದ ಹತ್ತು ವರ್ಷದಲ್ಲಿ ರಾಷ್ಟೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಆಗಿರುವ ಬದಲಾವಣೆಗಳು, ಒಪ್ಪಂದಗಳು ಇನ್ನೊಂದು ಹಂತಕ್ಕೆ ಏರಲು ಈ ಚುನಾವಣೆ ಫಲಿತಾಂಶ ಸಹಾಯ ಮಾಡಲಿದೆ.

ಭಾರತದ ಚುನಾವಣೆ ಫಲಿತಾಂಶ ಜಗತ್ತಿನ ಜಿಯೋ ಪೊಲಿಟಿಕಲ್ ಪರಿಭಾಷೆಯನ್ನು ಬದಲಿಸಲಿದೆ. ಹೀಗಾಗಿ ಭಾರತದ ಈ ಚುನಾವಣೆ ಭಾರತಕಷ್ಟೆ ಅಲ್ಲ ಇಡೀ ವಿಶ್ವಕ್ಕೆ ಮುಖ್ಯವಾಗಲಿದೆ.

**ಒಟ್ಟಾರೆ ಈ ವರ್ಷದಲ್ಲಿ...**

ಒಂದಷ್ಟು ಆರ್ಥಿಕ ಹಿಂಜರಿತವನ್ನು ನಾವು ಕಾಣಬಹುದು. ಅದು ಭಾರತದಲ್ಲಿ ಸೃಷ್ಟಿಯಾದದ್ದು ಎನ್ನುವುದಕ್ಕಿಂತ ಯೂರೋಪು ಮತ್ತು ಅಮೆರಿಕಾದದಿಂದ ಸಿಕ್ಕ ಉಡುಗೊರೆ ಎನ್ನಬಹುದು.

ಚೀನಾ ಒಂದಷ್ಟು ಆರ್ಥಿಕವಾಗಿ ಚೇತರಿಕೆ ಕಾಣಲಿದೆ. ಡೆಫ್ಲೇಷನ್ ನಿಂದ ಸ್ವಲ್ಪ ಮಟ್ಟಿಗೆ ಹೊರಬಂದರೂ ಅದು ಸಾಧನೆ.

ಯೂರೋಪಿನ ಹಲವಾರು ದೇಶಗಳಲ್ಲಿ ರಿಯಲ್ ಎಸ್ಟೇಟ್ ಕುಸಿತ ಮುಂದುವರಿಯುತ್ತದೆ.

ಪಾಲಿಸಿಗಳಲ್ಲಿ ಬದಲಾವಣೆ ಮಾಡುವ ಸಾಧ್ಯತೆಗಳು ಬಹಳವಿರುವ ಕಾರಣ ಮತ್ತು ಈ ರೀತಿಯ ಬದಲಾವಣೆ ಆದರೆ ಕೆನಡಾ ಮತ್ತು ಅಮೆರಿಕದಲ್ಲಿ ಒಂದಷ್ಟು ಚೇತರಿಕೆಯನ್ನು ಕಾಣಬಹುದು.

ದೀರ್ಘಕಾಲದಿಂದ ತನ್ನ ಮೂಲ ಮೌಲಕ್ಕಿಂತ ಹೆಚ್ಚಾಗಿದ್ದ ಅಮೆರಿಕನ್ ಡಾಲರ್ ಮೌಲ್ಯ ಜಗತ್ತಿನ ಪ್ರಮುಖ ಕರೆನ್ಸಿಗಳ ಮುಂದೆ ಕುಸಿತ ಕಾಣುವ ಸಂಭವವಿದೆ. ಇದು ಬಹಳ ದೇಶಗಳ ಕರೆಂಟ್ ಅಕೌಂಟ್ ಡೆಫಿಸೀಟ್ಗೆ ದಾರಿಯಾಗಲಿದೆ.

ಭಾರತದಲ್ಲಿ ಷೇರು ಮಾರುಕಟ್ಟೆ ಚುನಾವಣೆಯ ಫಲಿತಾಂಶಕ್ಕೆ ತಕ್ಕಂತೆ ವರ್ತಿಸಲಿದೆ.

**ಕೊನೆ ಮಾತು:** ಭಾರತದಲ್ಲಿ ಈ ವರ್ಷ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಚುನಾವಣೆ ಇದೆ. ಈ ಚುನಾವಣೆಯ ಫಲಿತಾಂಶದ ಮೇಲೆ ಬಹಳಷ್ಟು ಅವಲಂಬಿತವಾಗಿದೆ. ಈಗಿರುವ ಕೇಂದ್ರ ಸರಕಾರವೇ ಮುಂದುವರಿದರೆ ಮುಂದಿನ ಐದು ವರ್ಷದಲ್ಲಿ ಭಾರತದ ಓಟವನ್ನು ತಡೆಯುವುದು ಸಾಧ್ಯವಿಲ್ಲ. ಜಾಗತಿಕವಾಗಿ ಭಾರತಕ್ಕೆ ಸಿಕ್ಕಿರುವ ಸ್ಥಾನಮಾನ ಇನ್ನಷ್ಟು ಬಲವಾಗಲು, ಮತ್ತಷ್ಟು ಹೆಚ್ಚಿನ ಬಲವನ್ನು ಪಡೆದುಕೊಳ್ಳಲು ಚುನಾವಣೆ ಫಲಿತಾಂಶ ಸಹಾಯ ಮಾಡಲಿದೆ. ಜಗತ್ತಿನ ಲೆಕ್ಕಾಚಾರದಲ್ಲಿ ಸ್ವಲ್ಪ ಆಚೀಚೆ ಆಗಬಹುದು, ಆದರೆ ಭಾರತದ ಭವಿಷ್ಯ ಪೂರ್ತಿ ನಿಂತಿರುವುದು 2024 ರ ಚುನಾವಣೆ ಫಲಿತಾಂಶದ ಆಧಾರದ ಮೇಲೆ ಮಾತ್ರ.

NEWS

ಬೆಳಗಾವಿ ವರದಿ

TUESDAY, 2 JANUARY 2024

# ದೇವರು ಹೇಗಿದ್ದಾನೆಂದು ತೋರಿಸಿಕೊಟ್ಟವರು ಜಕಣಾಚಾರಿ: ಎಸ್.ಎನ್.ಚನ್ನಬಸಪ್ಪ



ಶಿವಮೊಗ್ಗ: ಇಡೀ ಜಗತ್ತಿಗೆ ದೇವರು ಹೇಗಿದ್ದಾನೆ ಎಂದು ತಮ್ಮ ಶಿಲ್ಪಕಲೆಯ ಮೂಲಕ ತೋರಿಸಿಕೊಟ್ಟವರು ಅಮರ ಶಿಲ್ಪಿ ಜಕಣಾಚಾರಿಯವರು ಎಂದು ಶಾಸಕರಾದ ಎಸ್.ಎನ್.ಚನ್ನಬಸಪ್ಪ ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ವಿಶ್ವಕರ್ಮ ಮಹಾಸಭಾ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಇಂದು ಕುವೆಂಪು ರಂಗಮಂದಿರದಲ್ಲಿ ಏರ್ಪಡಿಸಲಾಗಿದ್ದ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮದು ನೆಲೆಗಟ್ಟಿನ ಮತ್ತು ಉನ್ನತ ಪರಂಪರೆಯ ರಾಷ್ಟ್ರವಾಗಿದ್ದು, ತಮ್ಮದೇ ಆದ ರೀತಿಯಲ್ಲಿ ಶಿಲ್ಪಕಲೆಯ ಮೂಲಕ ದೇಶ ಕಟ್ಟುವ ಕಾರ್ಯವನ್ನು ಜಕಣಾಚಾರಿಯಂತಹ ಶಿಲ್ಪಿಗಳು ಮಾಡಿದ್ದಾರೆ. ಮೇರು ವ್ಯಕ್ತಿತ್ವದ ಇವರು ಸೋಮನಾಥ ದೇವಾಲಯ, ಬೇಲೂರು, ಹಳೇಬೀಡಿನಂತಹ ದೇವಾಲಯ ನಿರ್ಮಿಸಿದ ಪುಣ್ಯಾತ್ಮರು.

ಇಡೀ ಜಗತ್ತು ನಮ್ಮೆಡೆ ನೋಡುವಂತೆ ಮಾಡಿರುವುದು ಇಂತಹ ಶಿಲ್ಪಿಗಳು. ದೇಶದ ಶಿಲ್ಪಕಲೆಗೆ ದೊಡ್ಡ ಕೊಡುಗೆಯನ್ನು ನೀಡಿದ್ದಾರೆ. ನಮ್ಮ ದೇಶಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದ್ದು ಶಿಲ್ಪಕಲೆ ದೇಶದ ಅಸ್ಮಿತೆ. ದೇವಾಲಯಗಳ ಬಗ್ಗೆ ಶ್ರದ್ದೆ, ನಂಬಿಕೆ ಮತ್ತು ಆಸಕ್ತಿ ಹೊಂದಿರುವವರು ನಾವು. ನಮ್ಮದು ಸನಾತನ, ದೇವನಿರ್ಮಿತ ದೇಶ. ಸೋಮನಾಥ ಪುರ ಸೇರಿದಂತೆ ಅಯೋಧ್ಯ, ಕಾಶಿ ವಿಶ್ವನಾಥ ಹೀಗೆ ಅನೇಕ ದೇವಾಲಯಗಳನ್ನು ಭಗ್ನಗೊಳಿಸಲಾಗಿದ್ದು, ಹೋರಾಟದ ಮೂಲಕ ನಮ್ಮ ದೇವಾಲಯಗಳು ಮತ್ತು ಪರಂಪರೆಯನ್ನು ಉಳಿಸಿಕೊಂಡಿದ್ದೇವೆ ಎಂದರು.

ಶೃಂಗೇರಿಯ ಕನ್ನಡ ಪ್ರಾಧ್ಯಾಪಕರಾದ ಡಾ.ಕೆ.ಎಸ್.ವೆಂಕಪ್ಪ ಆಚಾರ್ಯ ಇವರು ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ನಮ್ಮ ದೇಶದಲ್ಲಿರುವ ಕಲೆ, ಕೌಶಲ್ಯ, ಸಾಧನೆಗಳಿಂದಾಗಿ ವಿಶ್ವ ಇಂದು ನಮ್ಮನ್ನು ಗುರುತಿಸುತ್ತಿದೆ. ಆದರೆ ಹಿಂದಿನ ಅನೇಕ ಶಿಲ್ಪಕಲೆಗಳ ನಿರ್ಮಾತೃಗಳನ್ನು ಎಲ್ಲೂ ತೋರಿಸಿಲ್ಲ. ಕಲೆಯ ನಿರ್ಮಾತೃಗಳನ್ನು ಜಗತ್ತಿಗೆ ತೋರಿಸಬೇಕಿದೆ. ಶಿಲ್ಪಿ ಅಥವಾ ಕಲಾವಿದನನ್ನು ಮುಂದಿನ ಪೀಳಿಗೆಗೆ ತಿಳಿಯಪಡಿಸಬೇಕಿದ್ದು ಈ ಸಂಸ್ಮರಣಾ ದಿನಚರಣೆಯು ಇಂತಹ ಶಿಲ್ಪಿಗಳನ್ನು ಸಂಸ್ಮರಿಸಲು ಮತ್ತು ಸಮುದಾಯದವರೆಲ್ಲ ಒಟ್ಟುಗೂಡಲು ಒಂದು ಉತ್ತಮ ವೇದಿಕೆಯಾಗಿದೆ ಎಂದರು.

12 ನೇ ಶತಮಾನದಲ್ಲಿ ತುಮಕೂರು ಬಳಿಯ ಕ್ರೀಡಾಪುರದಲ್ಲಿ ಜಕಣಾಚಾರಿಯವರು ಜನಿಸಿದರು. ವಿಶ್ವ ಪ್ರಸಿದ್ದ ಬೇಲೂರು, ಹಳೇಬೀಡು, ಸೋಮನಾಥ ದೇವಾಲಯ ನಿರ್ಮಾಣ ಮಾಡಿ ತಮ್ಮ ಕಲೆ, ಕೌಶಲ್ಯ, ಜಾಣ್ಮೆ, ಶ್ರದ್ದೆ ಮತ್ತು ಹಠವನ್ನು ಈ ಶಿಲ್ಪಕಲೆ ಮೂಲಕ ವಿಶ್ವಕ್ಕೇ ಸಾರಿದ್ದಾರೆ. ನಾವೆಲ್ಲ ಈ ಕುರಿತು ಚಿಂತಿಸಬೇಕು ಎಂದರು.

ಅತ್ಯಂತ ಚಾಣಾಕ್ಷ, ಕುಶಲಿ ಜಕಣಾಚಾರಿಯವರ ನೇತೃತ್ವದಲ್ಲಿ ಸಮುದಾಯದ ಅನೇಕ ಶಿಲ್ಪಿಗಳು ಕಾರ್ಯ ನಿರ್ವಹಿಸಿದ್ದು ದೇಶಕ್ಕೆ ವಿಶ್ವಕರ್ಮ ಸಮಾಜದ ಕೊಡುಗೆ ಅನನ್ಯವಾಗಿದೆ. ಅಯೋಧ್ಯೆಯ ರಾಮಮಂದಿರ ನಿರ್ಮಾಣದ ಭಾಗವಾಗಿ ರಥವನ್ನು ಹಾಗೂ ಒಂದು ಮೂರ್ತಿಯನ್ನು ನಮ್ಮ ಸಮುದಾಯದವರು ನಿರ್ಮಿಸಿರುವುದು ಹೆಮ್ಮೆಯ ವಿಷಯ. ನಮ್ಮ ಕೌಶಲ್ಯ, ಪ್ರತಿಭೆಗೆ ಜನಮನ್ನಣೆ ಸಿಗುತ್ತಿದ್ದು, ಈ ಕಲೆಯನ್ನು ಮುಂದಿನ ಪೀಳಿಗೆಗೆ ಕೊಂಡಯ್ಯಬೇಕು.

ಯುವಜನತೆ ಪಾಲ್ಗೊಳ್ಳುವಂತಹ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಅವರಿಗೂ ಇತಿಹಾಸದ ಜ್ಞಾನ ಹೆಚ್ಚಬೇಕು. ಸಮಾಜ ಸಂಘಟನೆ ಆಗಬೇಕು. ಕಲೆಗೆ ಪ್ರೋತ್ಸಾಹ ದೊರಕಬೇಕು. ಹಾಗೂ ಗೌರವ, ಮನ್ನಣೆ ಸಿಗುಂತಹ ಕಾರ್ಯಗಳನ್ನು ಸಮಾಜಬಾಂಧವರು ಕೈಗೊಳ್ಳಬೇಕೆಂದು ಆಶಿಸಿದರು.

ಇದೇ ವೇಳೆ ಸಮಾಜದ ಇಬ್ಬರು ಸಾಧಕರಾದ ಶ್ರೀ ನವೀನ್ ಮತ್ತು ಶ್ರೀ ಭರತ್ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಉಮೇಶ್ ಹೆಚ್ ಸ್ವಾಗತಿಸಿದರು. ಜಿಲ್ಲಾ ವಿಶ್ವಕರ್ಮ ಮಹಾಸಭಾದ ಅಧ್ಯಕ್ಷ ಆಗರದಹಳ್ಳಿ ನಿರಂಜನಮೂರ್ತಿ, ಗೌರವಾಧ್ಯಕ್ಷ ಸತ್ಯನಾರಾಯಣ್, ಕಾರ್ಯದರ್ಶಿ ಎನ್.ಟಿ.ಬಸವರಾಜ್, ಜಿಲ್ಲಾ ವಿಶ್ವಕರ್ಮ ಬ್ರಾಹ್ಮಣರ ಸಮಾಜದ ಅಧ್ಯಕ್ಷ ಸೋಮಾಚಾರಿ, ಮಾಜಿ ನಗರಸಭಾ ಉಪಾಧ್ಯಕ್ಷ ರಮೇಶ್, ಕಾಳಿಕಾಂಬ ದೇವಸ್ಥಾನದ ಶ್ರೀನಿವಾಸ ಮೂರ್ತಿ, ಸಮಾಜದ ಮುಖಂಡರು, ಹಾಜರಿದ್ದರು.

## ಬಡ್ಡಿ ಸಮೇತ ಠೇವಣಿ ಹಣ ಹಿಂದಿರುಗಿಸದ ಧಾರವಾಡದ ದೈವಜ್ಞ ಪತ್ತಿನ ಸಹಕಾರಿ ಸಂಘಕ್ಕೆ ದಂಡ ವಿಧಿಸಿ, ದೂರುದಾರರಿಗೆ ಪರಿಹಾರ ನೀಡಲು ಆದೇಶ

ಧಾರವಾಡ: ಆಕಾಶವಾಣಿ ರಸ್ತೆಯ ನಿವಾಸಿ ಸುಮಿತ್ರಾ ಶೇಠ್ ಅನ್ನುವವರು 2018-19ರಲ್ಲಿ ಧಾರವಾಡದ ದೈವಜ್ಞ ಪತ್ತಿನ ಸಹಕಾರಿ ಸಂಘದಲ್ಲಿ ರೂ.3,90,000/- ಠೇವಣಿ ಇಟ್ಟಿದ್ದರು.

ಅದರ ಮೇಲೆ ಶೇ.8.5 ರಂತೆ ಬಡ್ಡಿ ಕೊಡಲು ಎದುರುದಾರರ ಸಂಘದವರು ಒಪ್ಪಿದ್ದರು. ಅಲ್ಲದೇ ದೂರುದಾರರ ಉಳಿತಾಯ ಖಾತೆಯಲ್ಲಿ ರೂ.56,568/- ಹಣ ಬಾಕಿ ಇತ್ತು. ಅವಧಿ ಮುಗಿದರೂ ಎದುರುದಾರ ಸಂಘದವರು ದೂರುದಾರರಿಗೆ ಠೇವಣಿ ಹಣ ಅಥವಾ ಅದರ ಮೇಲೆ ಬಡ್ಡಿ ಕೊಟ್ಟಿರಲಿಲ್ಲ.

ಉಳಿತಾಯ ಖಾತೆಯ ಹಣವನ್ನು ಪಡೆಯಲು ಅವರು ಅನುಮತಿಸಿರಲಿಲ್ಲ. ಈ ಬಗ್ಗೆ ಹಲವು ಬಾರಿ ಎದುರದಾರ ಸಂಘದವರಿಗೆ ದೂರುದಾರರು ವಿನಂತಿಸಿದರೂ ಏನೂ ಪ್ರಯೋಜನ ಆಗಿರಲಿಲ್ಲ. ಅಂತಹ ಎದುರುದಾರದೈವಜ್ಞ ಪತ್ತಿನ ಸಹಕಾರಿ ಸಂಘದ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತ ಹೇಳಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರರು ದಿ.29/05/2023 ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಎದುರುದಾರ ದೈವಜ್ಞ ಪತ್ತಿನ ಸಹಕಾರಿ ಸಂಘದವರು ವಕೀಲರ ಮೂಲಕ ಹಾಜರಾಗಿ ತಮ್ಮ ಮೇಲಿನವರ ಸೂಚನೆಯಂತೆ ತಮ್ಮ ಸಂಘದಲ್ಲಿರುವ ಎಲ್ಲಾ ಸದಸ್ಯರ ಠೇವಣಿ ಮತ್ತು ಇತರೆ ಹಣವನ್ನು ಪಿ.ಎಮ್.ಸಿ. ಬ್ಯಾಂಕ್ನಲ್ಲಿ ಇಟ್ಟಿರುವುದಾಗಿ ಸದರಿ ಬ್ಯಾಂಕು ನಂತರ ಯುನಿಟಿ ಸ್ಮಾಲ್ ಫೈನಾನ್ಸ್ ಬ್ಯಾಂಕ್ ನಲ್ಲಿ ವಿಲೀನವಾಗಿದೆ. ಹೀಗಾಗಿ ತಾವು ಇಟ್ಟಿರುವ ಹಣವನ್ನು ಸದರಿ ಬ್ಯಾಂಕಿನಿಂದ ವಾಪಸ್ಸು ಪಡೆದು ಗ್ರಾಹಕರಾದ ದೂರುದಾರರಿಗೆ ಹಿಂದಿರುಗಿಸಲು ಕ್ರಮ ಕೈಗೊಳ್ಳುವುದಾಗಿ ಹೇಳಿದ್ದರು. ತಮ್ಮಿಂದ ಯಾವುದೇ ರೀತಿ ಸೇವಾ ನ್ಯೂನ್ಯತೆ ಆಗಿಲ್ಲ ಅಂತಾ ಎದುರುದಾರ ದೈವಜ್ಞ ಪತ್ತಿನ ಸಹಕಾರಿ ಸಂಘದವರು ಹೇಳಿ ದೂರನ್ನು ವಜಾ ಮಾಡುವಂತೆ ಕೋರಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ.ಭೂತೆ, ಸದಸ್ಯರುಗಳಾದ ವಿಶಾಲಾಕ್ಷಿ.ಅ. ಬೋಳಶೆಟ್ಟಿ ಹಾಗೂ ಪ್ರಭು ಸಿ. ಹಿರೇಮಠ ಅವರು ದೂರುದಾರರು ಮತ್ತು ಎದುರುದಾರ ಸಂಘದವರ ಮಧ್ಯೆ ಆಗಿರುವ ಒಪ್ಪಂದದಂತೆ ಬಡ್ಡಿ ಸಮೇತ ಠೇವಣಿ ಹಣವನ್ನು ಅವಧಿ ಮುಗಿದ ನಂತರ ವಾಪಸ್ಸು ಕೊಡುವುದು ಎದುರುದಾರರ ಸಂಘದವರ ಕರ್ತವ್ಯವಾಗಿದೆ. ಆದರೆ ದೂರುದಾರರ ಠೇವಣಿ ಹಣ ಹಿಂದಿರುಗಿಸದೇ ಇರುವುದು ಮತ್ತು ಅವರ ಉಳಿತಾಯ ಖಾತೆಯ ಹಣವನ್ನು ಪಡೆಯಲು ನಿರಾಕರಿಸಿರುವುದು ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಅಭಿಪ್ರಾಯಪಟ್ಟು ತೀರ್ಪು ನೀಡಿದೆ.

ತೀರ್ಪು ನೀಡಿದ 3 ತಿಂಗಳ ಒಳಗಾಗಿ ಯುನಿಟಿ ಸ್ಮಾಲ್ ಫೈನಾನ್ಸ್ ಬ್ಯಾಂಕ್ ನೊಂದಿಗೆ ವ್ಯವಹರಿಸಿ ದೂರುದಾರರ ಠೇವಣಿ ಹಣ ಮತ್ತು ಉಳಿತಾಯ ಖಾತೆಯ ಹಣ ರೂ.6,12,154/- ಮತ್ತು ಅದರ ಮೇಲೆ ಶೇ.8.05 ರಂತೆ ಬಡ್ಡಿ ಸಮೇತ ಲೆಕ್ಕ ಹಾಕಿ ಹಿಂದಿರುಗಿಸುವಂತೆ ಆಯೋಗ ಆದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲತೆ ಮತ್ತು ಮಾನಸಿಕ ಹಿಂಸೆಗಾಗಿ ರೂ.25,000/- ಪರಿಹಾರ ಹಾಗೂ ಈ ಪ್ರಕರಣದ ಖರ್ಚು ವೆಚ್ಚ ಅಂತಾ ರೂ.10,000/- ನೀಡುವಂತೆ ಎದುರುದಾರ ಧಾರವಾಡದ ದೈವಜ್ಞ ಪತ್ತಿನ ಸಹಕಾರಿ ಸಂಘಕ್ಕೆ ಆಯೋಗ ನಿರ್ದೇಶಿಸಿದೆ.

## ಜ.2 ರಂದು ವಿಶೇಷ ಮಕ್ಕಳ ಪ್ರತಿಭೋತ್ಸವ ಕಾರ್ಯಕ್ರಮ

ಧಾರವಾಡ: ಚಿಲಿಪಿಲಿ ಮಕ್ಕಳ ಶಿಕ್ಷಣ ಹಾಗೂ ಸರ್ವಾಂಗೀಣ ಅಭಿವೃದ್ಧಿ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಮಕ್ಕಳ ಪ್ರತಿಭೋತ್ಸವ ಹಾಗೂ ಸಾವಿತ್ರಿಬಾಯಿ ಪುಲೆ ಶ್ರೇಷ್ಠ ಸೇವಾ ಶಿಕ್ಷಕಿ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವನ್ನು ಜನವರಿ 02, 2024 ರಂದು ಸಂಜೆ 5-30 ಗಂಟೆಗೆ ರಂಗಾಯಣದ ಸುವರ್ಣ ಸಮುಚ್ಚಯದಲ್ಲಿ ಆಯೋಜಿಸಲಾಗಿದೆ.

ಮನೋವಿಕಲ ಸರ್ಕಾರಿ ಬಾಲಕಿಯರ ಬಾಲ ಮಂದಿರ ಅಧೀಕ್ಷಕರಾದ ಜಾಹೀದಾ ಹೆಚ್. ಕಾಲೇಖಾನವರ ಪ್ರಶಸ್ತಿ ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಸ್ವರೂಪ ಟಿ.ಕೆ. ಕಾರ್ಯಕ್ರಮವನ್ನು ಉದ್ಘಾಟಿಸುವರು. ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ರಾಜೇಶ್ವರಿ ಸಾಲಗಟ್ಟಿ ಪ್ರಶಸ್ತಿ ಪ್ರದಾನ ಮಾಡುವರು. ಶೈಕ್ಷಣಿಕ ಚಿಂತಕರಾದ ಎಂ.ಎಂ. ಚಿಕ್ಕಮಠ ಹಾಗೂ ನವನಗರದ ಸ್ನೇಹ ಮಕ್ಕಳ ತೆರೆದ ತಂಗುದಾಣದ ಮುಖ್ಯಸ್ಥರಾದ ನಾಗರತ್ನ ಎಸ್. ಜಡೇದ ಅವರು ಅತಿಥಿಗಳಾಗಿ ಭಾಗವಹಿಸುವರು, ಹಿರೇಮಲ್ಲೂರ ಈಶ್ವರನ್ ಪದವಿ ಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಶಶಿಧರ್ ತೋಡಕರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಚೇತನಾ ಶಂಕರ ಹಲಗತ್ತಿ ಗೌರವ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಯುವನಿಧಿ ಯೋಜನೆ; ಸೇವಾಸಿಂಧು ಮೂಲಕ ಅರ್ಜಿ ಸಲ್ಲಿಸಿ, ಯೋಜನೆಯ ಪ್ರಯೋಜನ ಪಡೆಯಿರಿ

ಧಾರವಾಡ: ಸರ್ಕಾರದ ಮಹತ್ತರ ಯೋಜನೆಯಾದ ಯುವನಿಧಿಗೆ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಆರಂಭವಾಗಿದ್ದು, ಅಭ್ಯರ್ಥಿಗಳು 2022-23ನೇ ಶೈಕ್ಷಣಿಕ ವರ್ಷದಲ್ಲಿ ಪದವಿ, ಡಿಪ್ಲೋಮಾ ಪಡೆದಿರಬೇಕು. ಅಂದರೆ 2023ನೇ ವರ್ಷದಲ್ಲಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಅಂತಹವರು ಸೇವಾಸಿಂಧು ಜಾಲತಾಣ https://sevasindhugs.karnataka.gov.in/ ಮೂಲಕ ಅರ್ಜಿ ಸಲ್ಲಿಸಲು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಅರ್ಜಿದಾರರು ನ್ಯಾಶನಲ್ ಅಕ್ಯಾಡೆಮಿಕ ಡೆಪೊಸಟರಿ (NAD Portal) ಪೋರ್ಟಲ್ನ ಜಾಲತಾಣ https://nad.karnataka.gov.in ದಲ್ಲಿ ವಿಶ್ವವಿದ್ಯಾನಿಲಯಗಳು, ಶೈಕ್ಷಣಿಕ ಸಂಸ್ಥೆಗಳು, ಮಂಡಳಿಗಳು ಪ್ರವೇಶಾತಿ ಸಂದರ್ಭದಲ್ಲಿ ನೀಡುವ ಪದವಿ, ಡಿಪ್ಲೋಮಾ, ತಾತ್ಕಾಲಿಕ ಪದವಿ ಪ್ರಮಾಣ ಪತ್ರಗಳ ಮೇಲೆ ನಮೂದಿಸಿರುವ ನೋಂದಣಿ ಸಂಖ್ಯೆಯನ್ನು ಬಳಸಿಕೊಂಡು ದತ್ತಾಂಶವು ಲಭ್ಯವಿದೆಯೆ ಅಥವಾ ಇಲ್ಲವೇ ಎಂಬುದರ ಬಗ್ಗೆ ಖಾತರಿ ಪಡಿಸಿಕೊಳ್ಳಬೇಕು.

ನೊಂದಣಿ ಸಂಖ್ಯೆ ಇಲ್ಲದೇ ಇದ್ದಲ್ಲಿ ಓಂಆ ಕಡಿಣಚಿಟ ನಲ್ಲಿ ಸ್ವಯಂ ಪ್ರೇರಿತವಾಗಿ ನೋಂದಣಿ ಮಾಡಿಕೊಳ್ಳಬೇಕು. ಅಥವಾ ತಮಗೆ ಸಂಬಂಧಿಸಿದ ಕಾಲೇಜು, ಬೋರ್ಡ್, ವಿಶ್ವವಿದ್ಯಾಲಯವನ್ನು ಸಂಪರ್ಕಿಸಿ, ಅಭ್ಯರ್ಥಿಗಳು ನೋಂದಣಿ ಮಾಡಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ಅಭ್ಯರ್ಥಿಗಳು ಯುವನಿಧಿಯ ನೋಂದಣಿ ಮಾಡಿಕೊಳ್ಳಲು ಗ್ರಾಮೀಣ ಭಾಗದಲ್ಲಿ ತಮಗೆ ಹತ್ತಿರದ ಗ್ರಾಮ ಒನ್ ಕೇಂದ್ರಗಳು ಹಾಗೂ ನಗರ ಪ್ರದೇಶಗಳಲ್ಲಿ ಕರ್ನಾಟಕ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಿಗೆ ಭೇಟಿ ನೀಡಬೇಕೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೋಕಾಕ: ಹೆಲ್ಮೆಟ್ ಧರಿಸದೇ ಬೈಕ್ ಓಡಿಸಿದ ಹೆಡ್ ಕಾನ್ಸ್ ಟೇಬಲ್ ಅಮಾನತು




ಬೆಳಗಾವಿ: ಹೆಲ್ಮೆಟ್ ಹಾಕದೇ ವಾಹನ ಚಲಾಯಿಸಿದ ಗೋಕಾಕ ಗ್ರಾಮೀಣ ಪೊಲೀಸ್ ಠಾಣೆಯ ಹೆಡ್ ಕಾನ್ಸ್ಟೇಬಲ್ ಒಬ್ಬರನ್ನು ಅಮಾನತು ಮಾಡಲಾಗಿದೆ.

ಬೆಳಗಾವಿಯಲ್ಲಿ ಪೊಲೀಸರೇ ಹೆಲ್ಮೆಟ್ ಹಾಕುವುದಿಲ್ಲ ಎಂದು ಸಾರ್ವಜನಿಕರಿಂದ ಆರೋಪ ಬಂದಿದ್ದವು. ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾದ ಎಸ್ಪಿ ಭೀಮಶಂಕರ್ ಗುಳೇದ ಅವರು, ಹೆಲ್ಮೆಟ್ ಹಾಕದೆ ವಾಹನ ಚಲಾಯಿಸಿದ ಗೋಕಾಕ ಗ್ರಾಮೀಣ ಪೊಲೀಸ್ ಠಾಣೆಯ ಹೆಡ್ ಕಾನ್ಸ್ಟೇಬಲ್ ಅವರನ್ನು ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ.

## ಅನೈತಿಕ ಸಂಬಂಧವನ್ನು ಪ್ರಶ್ನಿಸಿದ್ದಕ್ಕೆ ಪತ್ನಿಯಿಂದಲೇ ಪತಿಯ ಕೊಲೆ




ಬೀದರ್: ಅನೈತಿಕ ಸಂಬಂಧವನ್ನು ಪ್ರಶ್ನೆ ಮಾಡಿದ್ದಕ್ಕೆ ಪತಿಯನ್ನೇ ಸಂಚು ರೂಪಿಸಿ ಪತ್ನಿ ಹಾಗೂ ಪ್ರಿಯಕರ ಸೇರಿ ಕೊಲೆ ಮಾಡಿದ ಪ್ರಕರಣವನ್ನು ಕೊನೆಗೂ ಬೀದರ್ ಪೊಲೀಸರು ಬೇಧಿಸಿದ್ದಾರೆ.

ಅಮಿತ್ ಕೊಲೆಯಾಗಿದ್ದು, ಪೊಲೀಸರು ಈಗ ಪತ್ನಿ ಚೈತ್ರಾ, ಆಕೆಯ ಗೆಳೆಯ ರವಿ ಪಾಟೀಲ್ ಅಲ್ಲದೇ ಕೃತ್ಯಕ್ಕೆ ಸಹಕಾರ ನೀಡಿದ ಸಿಕ್ಕಿಂದರ್ ಶಾಹಾ, ವೆಂಕಟ್ ಗಿರಿಮಾತೆ ಮತ್ತು ಆಕಾಶ್ ಅವರನ್ನು ಬಂಧಿಸಿದ್ದಾರೆ.

ಏನಿದು ಪ್ರಕರಣ? ನವೆಂಬರ್ 11 ರಂದು ಬೀದರ್ ತಾಲೂಕಿನ ಅಲಿಯಂಬರ್ ಗ್ರಾಮದ ಬಳಿ ಅಮಿತ್ ಶವ ಪತ್ತೆಯಾಗಿತ್ತು.

ಇದನ್ನು ಅಪಘಾತ ಎಂಬಂತೆ ಬಿಂಬಿಸಲಾಗಿತ್ತು. ಆದರೆ ಮೃತದೇಹ ನೋಡಿದಾಗ ಪೊಲೀಸರಿಗೆ ಅನುಮಾನ ವ್ಯಕ್ತವಾಗಿತ್ತು.

ತನಿಖೆಗೆ ಇಳಿದ ಪೊಲೀಸರಿಗೆ ಶವ ಪತ್ತೆಯಾದ ಜಗದಲ್ಲಿ ಸಕ್ರಿಯವಾಗಿದ್ದ ಮೊಬೈಲ್ ನಂಬರ್ ಪತ್ತೆಹಚ್ಚಿದ್ದಾರೆ. ಬಳಿಕ ಸಿಕ್ಕಿಂದರ್ ಶಾಹಾ, ವೆಂಕಟ್ ಗಿರಿಮಾತೆ ಮತ್ತು ಆಕಾಶ್ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ರವಿ ಪಾಟೀಲ್ ಇವರಿಗೆ ಮುಂಗಡವಾಗಿ ಹಣ ನೀಡಿ ಕೃತ್ಯ ನಡೆಸಿ ವಿಚಾರಣೆಯನ್ನು ಬಾಯಿಬಿಟ್ಟಿದ್ದಾರೆ. ನಂತರ ರವಿಪಾಟೀಲ್ ವಿಚಾರಣೆ ವೇಳೆ ಚೈತ್ರಾ ಪಾತ್ರ ಬಹಿರಂಗವಾಗಿದೆ. ವಿಚಾರಣೆ ವೇಳೆ ನಮ್ಮ ಅನೈತಿಕ ಸಂಬಂಧಕ್ಕೆ ಅಡ್ಡಿಯಾಗಿದ್ದಕ್ಕೆ ಹತ್ಯೆ ಮಾಡಲಾಗಿದೆ ಎಂದು ಚೈತ್ರಾ ತಿಳಿಸಿದ್ದಾಳೆ. ಪೊಲೀಸರು ಈಗ ಕೃತ್ಯಕ್ಕೆ ಬಳಸಿದ ರಾಡ್, ಮೊಬೈಲ್ ಹಾಗೂ ಕೊಲೆ ಮಾಡಲು ಸಹಚರರಿಗೆ ನೀಡಿದ ಮುಂಗಡ ಹಣವನ್ನು ಜಪ್ತಿ ಮಾಡಿದ್ದಾರೆ.

## 21 ವರ್ಷದ ವಿದ್ಯಾರ್ಥಿನಿ ಅನುಮಾನಸ್ಪದವಾಗಿ ಸಾವು



ಬೆಂಗಳೂರು: ಬಿಬಿಎ ವ್ಯಾಸಂಗ ಮಾಡುತ್ತಿದ್ದ 21 ವರ್ಷದ ವಿದ್ಯಾರ್ಥಿನಿ ನೇಣಿಗೆ ಶರಣಾಗಿರೋ ಘಟನೆ ಸುಧಾಮನಗರದಲ್ಲಿ ನಡೆದಿದೆ.

ಮೃತ ವಿದ್ಯಾರ್ಥಿನಿಯನ್ನು ವರ್ಷಿಣಿ ಎಂದು ಗುರುತಿಸಲಾಗಿದೆ. ವರ್ಷಿಣಿ ಜಯನಗರದ ಕಮ್ಯೂನಿಟಿ ಕಾಲೇಜಿನಲ್ಲಿ ಓದುತ್ತಿದ್ದಳು.

ಸುಧಾಮನಗರದಲ್ಲಿ ಕುಟುಂಬದೊಂದಿಗೆ ವಾಸವಿದ್ದ ಯುವತಿ ಫ್ಯಾನಿಗೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾಳೆ ಎನ್ನಲಾಗಿದೆ. ಸದ್ಯ ವಿದ್ಯಾರ್ಥಿನಿಯ ಸಾವಿಗೆ ಕಾರಣ ಏನು ಅನ್ನೋದು ತಿಳಿದು ಬಂದಿಲ್ಲ.

ಯುವತಿ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಕಿಮ್ಸ್ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮತ್ತಿನಲ್ಲಿ ರಸ್ತೆಯಲ್ಲೇ ಬಿದ್ದು ಹೊರಳಾಡಿದ ಯುವತಿ



ಬೆಂಗಳೂರು: ಕೋರಮಂಗಲದಲ್ಲಿ ಭಾನುವಾರ ರಾತ್ರಿ ಸಾವಿರಾರು ಯುವಜನರು ಸೇರಿ ಸಂಭ್ರಮ ಆಚರಿಸಿದ್ದರು. ರಾತ್ರಿಯಾಗುತ್ತಿದ್ದಂತೆಯೇ ಪಬ್‌ಗಳಲ್ಲಿ ಕುಡಿದು ಮತ್ತೇರಿಸಿಕೊಂಡಿದ್ದ ಯುವಕ-ಯುವತಿಯರು ಬೀದಿಗೆ ಇಳಿದಿದ್ದರು. ಪ್ರಮುಖವಾಗಿ ಉತ್ತರ ಭಾರತದ ಯುವತಿಯರಂತೂ ಮೈಮೇಲೆ ಪರಿವೆಯೇ ಇಲ್ಲದಂತೆ ಓಲಾಡುತ್ತಿದ್ದರು.

ಅದರ ನಡುವೆ ಒಬ್ಬ ಯುವತಿಯಂತೂ ಕುಡಿದು ಹೆಜ್ಜೆ ಇಡಲಾಗದೆ ಅಲ್ಲೇ ಕಟ್ಟಡವೊಂದರ ಮೆಟ್ಟಿಲ ಮೇಲೆ ಬಿದ್ದುಕೊಂಡಿದ್ದರು. ಆಕೆಗೆ ಎದ್ದು ನಡೆಯಲು ಸಾಧ್ಯವಾಗುತ್ತಿರಲಿಲ್ಲ. ಆಕೆಯ ಕೆಲವು ಗೆಳೆಯರು ಆಕೆಯನ್ನು ಅಲ್ಲಿಂದ ಎತ್ತಿಕೊಂಡು ಹೋಗಲು ಪ್ರಯತ್ನ ನಡೆಸಿದರೂ ಫಲ ನೀಡಲಿಲ್ಲ.

ಆಕೆ ಏಳುತ್ತಾ ಬೀಳುತ್ತಾ ಇದ್ದಾಗ ಪೊಲೀಸರು ಬಂದರು. ಮಹಿಳಾ ಪೊಲೀಸರು ಆಕೆಯನ್ನು ಎತ್ತಲು ಪ್ರಯತ್ನಿಸಿದರೆ ಆಕೆ ಕೊಸರಿಕೊಳ್ಳುತ್ತಿದ್ದಳು. ಬಿದ್ದಲ್ಲೇ ಹೊರಳಾಡುತ್ತಿದ್ದ ಆಕೆಯನ್ನು ಅದು ಹೇಗೋ ಬಲವಂತದಿಂದ ಎತ್ತಿಕೊಂಡು ಹೋಗಲು ಕೊನೆಗೂ ಯಶಸ್ವಿಯಾದರು. ಬೆಂಗಳೂರಿನ ಹಲವು ಕಡೆಗಳಲ್ಲಿ ಈ ರೀತಿ ಯುವಜನರ ಹುಚ್ಚಾಟಗಳು ನಡೆದಿದ್ದವರು. ಇದರಿಂದಾಗಿ ಅವರು ಪೊಲೀಸರ ಬೆತ್ತದ ರುಚಿಯನ್ನೂ ಚೆನ್ನಾಗಿ ಅನುಭವಿಸಿದರು.

# ಕರ್ನಾಟಕ ಶಿಲ್ಪಕಲೆ ಸಾಮ್ರಾಟ ಜಕಣಾಚಾರಿ: ಎಡಿಸಿ ಮೊಹಮ್ಮದ್ ಝುಬೇರಾ



ಬಳ್ಳಾರಿ: ನಾಡಿನ ಐತಿಹಾಸಿಕ ವಾಸ್ತು ಶಿಲ್ಪ ಪರಂಪರೆಗೆ ಶಿಲ್ಪಗಳ ಕೊಡುಗೆ ಅಪಾರವಾದುದು. ಅಂತಹ ಅಪರೂಪದ ಕೊಡುಗೆಯನ್ನು ಕಲಾಕೌಶಲ್ಯ ಮೂಲಕ ನಾಡಿಗೆ ನೀಡಿ ಅಜರಾಮರನಾದವನು ಅಮರಶಿಲ್ಪಿ ಜಕಣಾಚಾರಿ ಎಂದು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಗಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಡಾ.ರಾಜ್ಕುಮಾರ್ ರಸ್ತೆಯ ಸಮುಚ್ಛಯ ಆವರಣದ ಹೊಂಗಿರಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಮರ ಶಿಲ್ಪಿ ಜಕಣಾಚಾರಿ ಅವರ ಉತ್ತಮ ಜ್ಞಾನ ಮತ್ತು ಕಲಾತ್ಮಕ ಪ್ರವೃತ್ತಿ ರೂಢಿಸಿಕೊಳ್ಳಬೇಕು. ಅಮರಶಿಲ್ಪಿ ಜಕಣಾಚಾರಿ ಹಲವಾರು ದೇವಾಲಯಗಳನ್ನು ನಿರ್ಮಿಸಿ ದಂತಕಥೆಯಾದ ಶಿಲ್ಪಿ, ಇವರು ಕಲ್ಯಾಣಿ ಚಾಲುಕ್ಯರ ಹಾಗೂ ಹೊಯ್ಸಳರ ಶೈಲಿಯ ದೇವಾಲಯಗಳನ್ನು ಬೇಲೂರು ಹಾಗೂ ಹಳೇಬೀಡಿನಲ್ಲಿ ನಿರ್ಮಿಸಿದ್ದಾರೆ ಎಂದು ತಿಳಿಸಿದರು.

ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಉಪನ್ಯಾಸಕ ವಿಶ್ವನಾಥ್ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಜಕಣಾಚಾರಿ ಅವರು ತುಮಕೂರಿನ ಕ್ರೀಡಾಪುರ ಎಂಬ ಹಳ್ಳಿಯಲ್ಲಿ ಜನಿಸಿದವರು. ಸೌಂದರ್ಯ ಮತ್ತು ಕಲಾ ಆರಾಧಕನಾಗಿದ್ದ ಜಕಣಾಚಾರಿ ವೈಯಕ್ತಿಕ ಬದುಕಿನಲ್ಲಿ ನಡೆದ ಘಟನೆಗಳಿಂದ ಬೇಸತ್ತು ಹೆಂಡತಿ ಮನೆ, ಊರನ್ನು ತೊರೆದು ಲೋಕಸಂಚಾರಿಯಾಗಿ ಅಲೆಯುತ್ತಿರುವಾಗ ರಾಮಾನುಜಾಚಾರ್ಯರು ಮಾರ್ಗದರ್ಶನ ದಿಂದ ತನ್ನ ವೃತ್ತಿಯಲ್ಲಿ ಏಕಾಗ್ರತೆನ್ನು ಸಾಧಿಸಿದವರು ಎಂದು ಹೇಳಿದರು.

ಮಗನಾದ ಡಂಕಣಾಚರ್ಯನು ಆತನ ತಂದೆಯನ್ನು ಹುಡುಕುವುದಕ್ಕಾಗಿ ತಾನೇ ಒಬ್ಬ ಪ್ರಖ್ಯಾತ ಶಿಲ್ಪಿಯಾಗಿ ಬೆಳೆದನು. ಬೇಲೂರಿನಲ್ಲಿ ಶಿಲ್ಪಿಯ ಕೆಲಸಕ್ಕಾಗಿ ನೇಮಿಸಲ್ಪಟ್ಟನು, ಮಹಾನ್ ಶಿಲ್ಪಿ ಜಕಣಾಚಾರಿ ನಿರ್ಮಿಸಿದ ಒಂದು ಶಿಲ್ಪದಲ್ಲಿ ಒಂದು ಒಡಕನ್ನು ಆತನು ಕಂಡನು. ಇದರಿಂದ ಕೋಪಗೊಂಡ ಜಕಣಾಚಾರ್ಯರು ಅವರು ಕೆತ್ತಿದ ಶಿಲ್ಪದಲ್ಲಿ ದೋಷವಿದ್ದರೆ ತನ್ನ ಬಲಗೈಯನ್ನು ಕತ್ತರಿಸಿಕೊಳ್ಳುವುದಾಗಿ ಮಾತನ್ನಿತ್ತರು. ಆ ಶಿಲ್ಪವನ್ನು ಪರೀಕ್ಷಿಸಿದ ನಂತರ, ಆ ದೋಷವಿರುವುದು ನಿಜವೆಂದು ಗೊತ್ತಾಗಿ ಜಕಣಾಚಾರ್ಯರು ತಮ್ಮ ವಾಗ್ದಾನದಂತೆ ತಮ್ಮ ಬಲಗೈಯನ್ನು ಕತ್ತರಿಸಿಕೊಂಡವರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪಮೇಯರ್ ಬಿ.ಜಾನಕಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಟಿ.ಹೊನ್ನುರಪ್ಪ, ಇತಿಹಾಸ ಅಕಾಡೆಮಿಯ ಜಿಲ್ಲಾಧ್ಯಕ್ಷ ಟಿ.ಎಚ್.ಬಸವರಾಜ್, ವಿಶ್ವಕರ್ಮ ಸಂಘದ ಜಿಲ್ಲಾಧ್ಯಕ್ಷ ಮಿಷನ್ಚಂದ್ರ್ ಸೇರಿದಂತೆ ಸಮಾಜದ ಮುಖಂಡರುಗಳು ಹಾಗೂ ಇತರರು ಉಪಸ್ಥಿತರಿದ್ದರು.

## ನದಿಗಳನ್ನು ಕಲುಷಿತಗೊಳಿಸದಂತೆ 8ನೇ ತರಗತಿ ಬಾಲಕಿಯ ಅಭಿಯಾನ




ಮಡಿಕೇರಿ: ಕೊಡಗು ಜಿಲ್ಲೆಯ ಸುಂಟಿಕೊಪ್ಪದ ಕೊಡಗರಹಳ್ಳಿಯ ಸರ್ಕಾರಿ ಶಾಲೆಯ ಎಂಟನೇ ತರಗತಿಯ ಬಾಲಕಿಯೊಬ್ಬಳ ಪ್ರಾಮಾಣಿಕ ಪ್ರಯತ್ನ ಸ್ಥಳೀಯ ನದಿ ಉಳಿಸಿಕೊಳ್ಳಲು ನೆರವಾಗಿದೆ.

ಈಕೆಯ ಸೈನ್ಸ್ ಪ್ರಾಜೆಕ್ಟ್ ಕಾರ್ಯ ಇದೀಗ ಜಿಲ್ಲಾಡಳಿತ ಹಾಗೂ ಜಿಲ್ಲಾ ಪೊಲೀಸರ ಗೌರವಕ್ಕೆ ಪಾತ್ರವಾಗಿದ್ದು, ನದಿ ಬಳಿ ತ್ಯಾಜ್ಯ ಸುರಿಯುವುದನ್ನು ತಡೆಯಲು ಸಿಸಿಟಿವಿ ಕ್ಯಾಮೆರಾ ಅಳವಡಿಸುವಂತೆ ಆದೇಶಿಸಿದ್ದಾರೆ.

ಸುಂಟಿಕೊಪ್ಪ ನಿವಾಸಿಗಳಾದ ಶಿಜು ಮತ್ತು ಸಂಧ್ಯಾ ದಂಪತಿಯ ಪುತ್ರಿ ಶ್ರೀಶಾ ಎ.ಎಸ್. ಕೊಡಗರಹಳ್ಳಿ ಸುಂಟಿಕೊಪ್ಪ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ. ಅವರು 31 ನೇ ರಾಷ್ಟ್ರೀಯ ಮಕ್ಕಳ ವಿಜ್ಞಾನ ಸಮಾವೇಶದಲ್ಲಿ ಶಾಲೆಯನ್ನು ಪ್ರತಿನಿಧಿಸಲು ನಾಮನಿರ್ದೇಶನಗೊಂಡರು, ಅಲ್ಲಿ ಕಲುಷಿತಗೊಳ್ಳುತ್ತಿರುವ ನದಿ ದಡಗಳು ಎಂಬ ಬಗ್ಗೆ ತಮ್ಮ ಪ್ರೆಸೆಂಟೇಷನ್ ನೀಡಿ 'ಯುವ ವಿಜ್ಞಾನಿ' ಎಂಬ ಮನ್ನಣೆ ಪಡೆದರು.

ಬಹುಪಾಲು ಸೈನ್ಸ್ ಪ್ರಾಜೆಕ್ಟ್ ಗಳು ಇಂಟರ್ ನೆಟ್ ಬಳಸಿಕೊಂಡು ಮಾಡಲಾಗುತ್ತದೆ, ಆದರೆ ಶ್ರೀಶ ಒಂದು ಹೆಜ್ಜೆ ಮುಂದೆ ಹೋಗಿ ವಾಸ್ತವ ಪ್ರಪಂಚದ ಯೋಜನೆ ಮಾಡಿದ್ದಾರೆ.

ಪ್ರಾಜೆಕ್ಟ್ ಗೆ ತನ್ನ ತಂದೆಯ ಸಹಾಯ ಪಡೆದಳು. ತನ್ನ ಪ್ರಾಜೆಕ್ಟ್‌ಗೆ ಮೆಟೀರಿಯಲ್ ಸಂಗ್ರಹಿಸಲು ತನ್ನ ಮನೆಯ ಸಮೀಪವಿರುವ ಹೊಳೆಗೆ ಭೇಟಿ ನೀಡಿದಳು. ಹರದೂರು ನದಿ ಸಮೀಕ್ಷೆ ನಡೆಸಿ, ಅದರ ಪ್ರಾಮುಖ್ಯತೆಯ ಕುರಿತು ವಿವರಗಳನ್ನು ಸಂಗ್ರಹಿಸಿದ್ದಾಳೆ. ಅವರು ಸ್ಥಳೀಯ ನಿವಾಸಿಗಳಿಂದ ಅಗತ್ಯ ಮಾಹಿತಿ ಪಡೆದಳು, ಈ ನದಿಯು ಯುಗ ಯುಗಗಳಿಂದಲೂ ಈ ಪ್ರದೇಶದ ಜೀವನಾಡಿಯಾಗಿದೆ.

ಆದಾಗ್ಯೂ, ಸಮೀಕ್ಷೆಯು ಆಕೆಗೆ ನದಿಯ ದುಃಖದ ಸ್ಥಿತಿಯ ಬಗ್ಗೆ ಪರಿಚಯಿಸಿತು, ಅಲ್ಲಿ ಅವಳು ತನ್ನ ನದಿ ದಂಡೆಗಳ ಮೇಲೆ ಎಸೆಯಲ್ಪಟ್ಟ ಪ್ಲಾಸ್ಟಿಕ್ ಮತ್ತು ಇತರ ಕಸ ಕಂಡಿತು. ಸ್ಥಳಕ್ಕೆ ಭೇಟಿ ನೀಡಿದ ಕೆಲವು ಸ್ಥಳೀಯರು ಮತ್ತು ಪ್ರವಾಸಿಗರ ಪ್ಲಾಸ್ಟಿಕ್ ತ್ಯಾಜ್ಯ ಬಳಕೆಯಿಂದ ಹೊಳೆ ಕಲುಷಿತವಾಗುತ್ತಿದೆ.

ಶ್ರೀಶ ಅವರು ಹೊಳೆಯ ದಯನೀಯ ಸ್ಥಿತಿಯ ಬಗ್ಗೆ ಮಾಹಿತಿ ಸಂಗ್ರಹಿಸಿ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಮತ್ತು ಸ್ಥಳೀಯ ಪಂಚಾಯಿತಿಗೆ ವರದಿ ಸಲ್ಲಿಸಿದರು. ಆಕೆಯ ಪ್ರಯತ್ನಗಳು ಎಸ್ಪಿ ಕೆ ರಾಮರಾಜನ್ ಅವರ ಮನವೊಲಿಸಿದ್ದು, ಕಸ ಹಾಕುವುದನ್ನು ತಡೆಯಲು ನದಿ ಬಳಿ ಸಿಬ್ಬಂದಿ ನಿಯೋಜಿಸಲಾಗಿದೆ.

ಇದಲ್ಲದೆ, ನದಿ ದಡಗಳಲ್ಲಿ ಕಸ ಸುರಿಯುವುದನ್ನು ನಿಯಂತ್ರಿಸಲು ಸಿಸಿಟಿವಿಗಳನ್ನು ಅಳವಡಿಸಲು ಜಿಲ್ಲಾಡಳಿತವು ಸ್ಥಳೀಯ ಸಂಸ್ಥೆಗೆ ಆದೇಶಿಸಿದೆ. ಹೊಳೆಯನ್ನು ಸಂರಕ್ಷಿಸುವ ಜವಾಬ್ದಾರಿಯನ್ನು ನಿವಾಸಿಗಳು ತೆಗೆದುಕೊಳ್ಳುವಂತೆ ಒತ್ತಾಯಿಸಿ ಸಹ ತನ್ನ ಸಹಪಾಠಿಗಳ ಸಹಾಯದಿಂದ, ಶ್ರೀಶ ಜಾಗೃತಿ ಅಭಿಯಾನ ನಡೆಸಿದರು.

## ಒಂದೇ ಕುಟುಂಬದ 5 ಮಂದಿ ಸಾವು

ಚಂಡೀಗಢ: ಒಂದೇ ಕುಟುಂಬದ 5 ಮಂದಿ ಸಾವನ್ನಪ್ಪಿರುವ ಘಟನೆ ಪಂಜಾಬ್ ನ ಜಲಂಧರ್ ನಲ್ಲಿ ನಡೆದಿದೆ. ಅದಮ್ ಪುರ ಗ್ರಾಮದಲ್ಲಿ ಈ ಘಟನೆ ವರದಿಯಾಗಿದೆ ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ.

59 ವರ್ಷದ ಮನ್ ಮೋಹನ್ ಸಿಂಗ್, ಅವರ ಪತ್ನಿ, ಇಬ್ಬರು ಮಕ್ಕಳು, ಮೂರು ವರ್ಷದ ಮೊಮ್ಮಗಳ ಶವ ಪತ್ತೆಯಾಗಿದೆ.

ಮನಮೋಹನ್ ಅವರ ಶವ ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಇತರರ ಮೃತದೇಹ ಅದೇ ಕೋಣೆಯಲ್ಲಿ ಹಾಸಿಗೆಯ ಮೇಲೆ ಪತ್ತೆಯಾಗಿದೆ.

ಮನಮೋಹನ್ ಸಿಂಗ್ ಅವರು ಬರೆದಿರುವ ಆತ್ಮಹತ್ಯೆ ಪತ್ರದಲ್ಲಿ ಕೆಲವು ಹಣಕಾಸಿನ ಸಮಸ್ಯೆಗಳಿಂದಾಗಿ ಈ ನಿರ್ಧಾರವನ್ನು ತೆಗೆದುಕೊಳ್ಳುತ್ತಿರುವುದಾಗಿ ಬರೆದಿದ್ದಾರೆ ಎಂದು ಹಿರಿಯ ಪೊಲೀಸ್ ವರಿಷ್ಠಾಧಿಕಾರಿ, ಜಲಂಧರ್ (ಗ್ರಾಮೀಣ) ಮುಖವಿಂದರ್ ಸಿಂಗ್ ಭುಲ್ಲರ್ ಹೇಳಿದ್ದಾರೆ.

ಪ್ರಾಥಮಿಕ ತನಿಖೆಯ ಪ್ರಕಾರ ಮನಮೋಹನ್ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಳ್ಳುವ ಮುನ್ನ ತನ್ನ ಕುಟುಂಬದ ಸದಸ್ಯರನ್ನು ಕತ್ತು ಹಿಸುಕಿ ಹತ್ಯೆ ಮಾಡಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ದಂಪತಿಯ ಹಿರಿಯ ಮಗಳು ತನ್ನ ಅಪ್ರಾಪ್ತ ಮಗಳೊಂದಿಗೆ ತನ್ನ ಹೆತ್ತವರ ಮನೆಗೆ ಬಂದಿದ್ದರು. ಮನಮೋಹನ್ ಅವರ ಪುತ್ರ ಮದುವೆಯಾಗಿದ್ದು, ವಿದೇಶದಲ್ಲಿ ನೆಲೆಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

## ಶಿಲ್ಪಕಲೆಯ ಮೇರು ವ್ಯಕ್ತಿ ಅಮರಶಿಲ್ಪಿ ಜಕಣಾಚಾರಿ: ಜಿಲ್ಲಾಧಿಕಾರಿ

ಮಂಗಳೂರು: ನೂರಾರು ವರ್ಷಗಳ ಹಿಂದೆಯೇ ಶಿಲ್ಪಕಲೆಗೆ ಅತ್ಯುನ್ನತ ಮೆರುಗು ತಂದು ಇತಿಹಾಸದ ಭವ್ಯ ಸಾಕ್ಷ್ಯ ನೀಡಿದ ಮೇರು ವ್ಯಕ್ತಿ ಅಮರಶಿಲ್ಪಿ ಜಕಣಾಚಾರಿ ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಎಂ.ಪಿ. ತಿಳಿಸಿದ್ದಾರೆ.

ಅವರು ಸೋಮವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಮರಶಿಲ್ಪಿ ಜಕಣಾಚಾರಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬೇಲೂರು ಹಳೇಬೀಡಿನಂತಹ ಭವ್ಯ ಇತಿಹಾಸದ ಶಿಲ್ಪ ಕಲೆಯನ್ನು ನಾಡಿಗೆ ದೊರಕಲು ಕಾರಣ ಕರ್ತರಾದ ಜಕಣಾಚಾರಿ ಅವರ ಕೊಡುಗೆ ಸದಾ ಸ್ಮರಣೀಯವಾಗಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಸುಂದರ ಆಚಾರ್ಯ ಬೆಳುವಾಯಿ ಮಾತನಾಡಿ ಜಕಣಾಚಾರಿ ಅವರ ಕೊಡುಗೆಗಳನ್ನು ಸ್ಮರಿಸಿದರು. ಅಪರ ಜಿಲ್ಲಾಧಿಕಾರಿ ಡಾ.ದೈಷ್ ಕುಮಾರ್, ಮಂಗಳೂರು ಉಪವಿಭಾಗಾಧಿಕಾರಿ ಹರ್ಷವರ್ಧನ್, ವಿಶ್ವ ಬ್ರಾಹ್ಮಣ ಸಮಾಜದ ಮುಖಂಡರು ಉಪಸ್ಥಿತರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರಾಜೇಶ್ ಜಿ. ಸ್ವಾಗತಿಸಿದರು.

## ಆರೋಗ್ಯ ದಿನದರ್ಶಿಕೆ ಬಿಡುಗಡೆ

ಮಂಗಳೂರು: ದಕ್ಷಿಣ ಕನ್ನಡ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ (ವಾರ್ಷಿಕ ಕ್ಯಾಲೆಂಡರ್) ಆರೋಗ್ಯ ದಿನದರ್ಶಿಕೆಯನ್ನು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಎಂ.ಪಿ. ಬಿಡುಗಡೆಗೊಳಿಸಿದರು.

ಸೋಮವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಬರುವ ಎಲ್ಲಾ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳು, ಪ್ರತಿ ತಿಂಗಳುಗಳಲ್ಲಿ ಬರುವ ವಿಶೇಷ ಆರೋಗ್ಯ ದಿನಾಚರಣೆಗಳ ಮಾಹಿತಿಗಳನ್ನು ಹಾಗೂ ರಜಾದಿನಗಳ ಮಾಹಿತಿಗಳನ್ನು ವಾರ್ಷಿಕ "ದಿನದರ್ಶಿಕೆ" ಬಿಡುಗಡೆಗೊಂಡಿದೆ.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಸಂತೋಷ್ ಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಹೆಚ್. ಆರ್ ತಿಮ್ಮಯ್ಯ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಸದಾಶಿವ ಶ್ಯಾನುಬೋಗ್, ಜಿಲ್ಲಾ ಕುಟುಂಬ ಕಲ್ಯಾಣ ಡಾ. ದೀಪಾಪ್ರಭು, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜ್ಯೋತಿ ಕೆ. ಹಾಗೂ ಇತರ ಅಧಿಕಾರಿಗಳು ಭಾಗವಹಿಸಿದ್ದರು.

## ಬಿಇಒ ಕಚೇರಿಯಲ್ಲಿ ನೇಣು ಬಿಗಿದುಕೊಂಡು ಮ್ಯಾನೇಜರ್ ಆತ್ಮಹತ್ಯೆ



ಚಿಕ್ಕಮಗಳೂರು: ಮೂಡಿಗೆರೆ ಬಿಇಒ ಕಚೇರಿಯಲ್ಲಿ ಮ್ಯಾನೇಜರ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ BEO ಕಚೇರಿಯಲ್ಲಿ ಮ್ಯಾನೇಜರ್ ನಿಂಗನಾಯಕ್(57) ಎಂಬುವವರು ಡೆತ್ ನೋಟ್ ಬರೆದಿಟ್ಟು ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕಡೂರು ಮೂಲದ ಮೃತ ನಿಂಗನಾಯಕ್ ಅವರು ಕಳೆದ ಎರಡು ವರ್ಷಗಳಿಂದ ಮೂಡಿಗೆರೆ ಃಇಔ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು.

ಒಂದು ವಾರದ ಹಿಂದಷ್ಟೇ BEO ಕಚೇರಿಯ ಮೇಲೆ ಲೋಕಾಯುಕ್ತ ದಾಳಿ ನಡೆಸಿತ್ತು. ಆಗ ಹತ್ತು ಸಾವಿರ ಹಣ ಪಡೆಯುತ್ತಿದ್ದ BEO ಹೇಮಂತ್ ರಾಜ್ ಸಿಕ್ಕಿಬಿದ್ದಿದ್ದರು. ಈ ಘಟನೆ ನಡೆದ ವಾರಕ್ಕೆ ನಿಂಗರಾಜ್ ಆತ್ಯಹತ್ಯೆಗೆ ಶರಣಾಗಿದ್ದಾರೆ. ಸದ್ಯ ಮೂಡಿಗೆರೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಇನ್ನು ಮತ್ತೊಂದೆಡೆ ಬೆಂಗಳೂರಿನ ಸುಧಾಮನಗರದಲ್ಲಿ ಕುಟುಂಬದೊಂದಿಗೆ ವಾಸವಿದ್ದ ವರ್ಷಿಣಿ(21) ಎಂಬ ಯುವತಿ ನೇಣುಹಾಕಿಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಮೃತ ವರ್ಷಿಣಿ ಜಯನಗರದ ಕಮ್ಯೂನಿಟಿ ಕಾಲೇಜಿನಲ್ಲಿ ಬಿಬಿಎ ವ್ಯಾಸಂಗ ಮಾಡುತ್ತಿದ್ದರು. ಯುವತಿ ಮೃತದೇಹ ಮರಣೋತ್ತರ ಪರೀಕ್ಷೆಗಾಗಿ ಕಿಮ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ. ವಿಲ್ಸನ್ ಗಾರ್ಡನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಹಾರ್ಮೋನಿಯಂ ವಾದಕ ದಿ. ಕೃಷ್ಣರಾವ ಭೀ. ಹುನಗುಂದ ಶತಮಾನೋತ್ಸವ

## ಎಲ್ಲ ಜನರನ್ನು ಒಂದೆಡೆ ಸೇರಿಸುವ ಶಕ್ತಿ ಸಂಗೀತಕ್ಕಿದೆ: ಪಂ. ಆನಂದ ಜೋಶಿ

ಬೆಳಗಾವಿ: ಎಲ್ಲ ಜನರನ್ನು ಒಂದೆಡೆ ಸೇರಿಸುವ ಶಕ್ತಿ ಸಂಗೀತಕ್ಕಿದೆ. ಜಾತಿ, ಮತ, ಪಂಗಡ, ಭಾಷೆಗಳನ್ನು ಮರೆತು ಒಂದೆಡೆ ಸೇರುವ ಸ್ಥಳವೆಂದರೆ ಅದು ಸಂಗೀತ ಕಚೇರಿಯಲ್ಲಿ ಮಾತ್ರ ಎಂದು ಖ್ಯಾತ ಹಿಂದೂಸ್ತಾನಿ ಸಂಗೀತ ದಿಗ್ಗಜ ಪಂ. ದಿ. ಭೀಮಸೇನ ಜೋಶಿಯವರ ಪುತ್ರ ಪಂ. ಆನಂದ ಜೋಶಿಯವರು ಇಂದಿಲ್ಲಿ ಹೇಳಿದರು.

ನಗರದ ಹಿಂದವಾಡಿಯಲ್ಲಿರುವ ಐ.ಎಂ.ಇ.ಆರ್. ಸಭಾಭವನದಲ್ಲಿ ಹುನಗುಂದ ಪರಿವಾರದವರು ದಿ. 30 ಶನಿವಾರ ಸಾಯಂಕಾರ 5 ಗಂಟೆಗೆ ಹಾರ್ಮೋನಿಯಂ ವಾದಕ ದಿ. ಕೃಷ್ಣರಾವ ಭೀ. ಹುನಗುಂದ ಶತಮಾನೋತ್ಸವ ಕಾರ್ಯಕ್ರಮ ಸಂದರ್ಭದಲ್ಲಿ ಸಂಗೀತ ಕಾರ್ಯಕ್ರಮವನ್ನು ನೀಡಿದ ಪಂ. ಆನಂದ ಜೋಶಿಯವರ ಕಾರ್ಯಕ್ರಮದಲ್ಲಿ ಮಾತನಾಡುತ್ತ ಮೇಲಿನಂತೆ ಅಭಿಪ್ರಾಯ ಪಟ್ಟರು.

ಮುಂದೆ ಮಾತನಾಡುತ್ತ ಸಂಗೀತ ಮಾಂತ್ರಿಕ ಪಂ. ಭೀಮಸೇನ ಜೋಶಿಯವರು ನನ್ನ ತಂದೆ. ಅವರ ಮಗನೆಂದು ಹೇಳಿಕೊಳ್ಳುವುದೇ ನನಗೆ ಅಭಿಮಾನದ ಸಂಗತಿ. ಈಗಷ್ಟೇ ಸಂಗೀತ ಕ್ಷೇತ್ರಕ್ಕೆ ಪಾದಾರ್ಪಣೆ ಮಾಡಿರುವ ನನಗೆ ನಿಮ್ಮೆಲ್ಲರ ಪ್ರೋತ್ಸಾಹ, ಆಶೀರ್ವಾದ ನಮ್ಮ ಮೇಲಿರಲಿ ಪಂ. ಆನಂದ ಜೋಶಿಯವರು ಹೇಳಿದರು.

ಪಂ. ಆನಂದ ಜೋಶಿಯವರು ಸೂರ ಮಲ್ಹಾರ, ಮಿಶ್ರಕ ಖಮಾಜ ರಾಗಗಳನ್ನು ಪ್ರಸ್ತುತ ಪಡಿಸಿದ



ಅವರು 'ಜಯ ಜಯ ರಾಮ ಕೃಷ್ಣ 'ಮಾಹೆ ಮಾಹೆ ರಿ ಪಂಢರಿ..' ತುಂಗಾ ತೀರದಿ ನಿಂತ..' 'ಕರುಣಿಸೋ 'ಭಾಗ್ಯದ ಲಕ್ಷ್ಮೀ ಬಾರಮ್ಮ..' 'ಬಾಜೆ ಮುರಳಿಯಾ ಬಾಜೆ..' ಮಿಲೆ ಸುರ ಮೇರೆ ತುಮ್ಹಾರಾ..' ಭಜನ, ಅಭಂಗ, ದಾಸರ ಪದಗಳನ್ನು ಹಾಡಿದರು. ತಮ್ಮ ಸಂಗೀತದಿಂದ ಕೇಳುಗರ ಮನಗೆದ್ದರು. ತೇಜಸ್ ಜೋಶಿ ತಬಲಾ ಮತ್ತು ಮುಕುಂದ ಗೋರೆ ಹಾರ್ಮೋನಿಯಂ ಸಾಥ ನೀಡಿದರು. ಇದೇ ಸಂದರ್ಭದಲ್ಲಿ ಪಂ. ಆನಂದ ಜೋಶಿಯವರಿಗೆ ಶಾಲು ಹೊದಿಸಿ, ಫಲಪುಷ್ಪ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಅಧ್ಯಕ್ಷತೆಯನ್ನು ವಹಿಸಿದ್ದ ಹಿರಿಯ ನ್ಯಾಯವಾದ ಎಸ್. ಎಂ. ಕುಲಕರ್ಣಿಯವರು ಮಾತನಾಡುತ್ತ ದಿ. ಕೃಷ್ಣರಾವ ಭೀ. ಹುನಗುಂದ ಅವರು ನನಗೆ ಮೊದಲಿನಿಂದಲೂ ಪರಿಚಯ. ಅವರು ಹಾರ್ಮೋನಿಯಂ ನುಡಿಸುತ್ತಿದ್ದರೆ ಎಂಥವರನ್ನು ತನ್ನೆಡೆ ಸೆಳೆಯುತ್ತಿತ್ತು. ಬೇರೆಯವರನ್ನು ಪ್ರೋತ್ಸಾಹಿಸಿ ಬೆಳೆಸುವ ಗುಣ ಅವರದ್ದಾಗಿತ್ತು ಎಂದು ಹೇಳಿದರು.

ಪ್ರಾಸ್ತಾವಿಕ ನುಡಿಗನ್ನಾಡಿದ ಅರವಿಂದ ಹುನಗುಂದ, ಇಂದು ಶತಮಾನೋತ್ಸವ ಆಚರಿಸುತ್ತಿರುವ ಹಾರ್ಮೋನಿಯಂ ವಾದಕ ದಿ. ಕೃಷ್ಣರಾವ ಭೀ. ಹುನಗುಂದ ಇವರು ನನ್ನ ತಂದೆ. ಎಂದೂ ಪ್ರಚಾರದ ಬೆನ್ನು ಬೀಳಲಿಲ್ಲ. ಇವರು ಪಂ. ಭೀಮಸೇನ ಜೋಶೀ, ಪಂ. ಮಲ್ಲಿಕಾರ್ಜುನ ಮನ್ಸೂರ, ಪಂ. ವೆಂಕಟೇಶ ಗೋಡಖಿಂಡಿ, ಪಂ. ಮಾಧವ ಗುಡಿ, ಪಂ. ಅನಂತ ತೇರದಾಳ, ಪಂ. ಶ್ರೀಪತಿ ಪಾಡಿಗಾರ, ಪಂ. ವೆಂಕಟೇಶಕುಮಾರ ಮಂತಾದ ದಿಗ್ಗಜರಿಗೆ ಹಾರ್ಮೋನಿಯಂ ಸಾಥ ನೀಡಿದ್ದರೆಂದು ಹೇಳಿದರು.

ಅತಿಥಿಗಳಾಗಿ ಆಗಮಿಸಿದ್ದ ಖ್ಯಾತ ವೈದ್ಯ ಡಾ. ಮೋಹನ ದೇಸಾಯಿ ಮಾತನಾಡಿದರು. ಶ್ರೀಮತಿ ಸರಸ್ವತಿ ದೇಸಾಯಿ ನಿರೂಪಿಸಿದರು. ಸಂಗೀತ ಕಲಾವಿದರಾದ ಪ್ರಭಾಕರ ಶಹಾಪುರಕರ, ಗುರರಾಜ ಕುಲಕರ್ಣಿ, ಜಿತೇಂದ್ರ ಸಾಬಣ್ಣನವರ ಅಲ್ಲದೇ ಹುನಗುಂದ ಪರಿವಾರ, ಡಾ, ಅರವಿಂದ ಕುಲಕರ್ಣಿ, ಎಸ್. ವಿ. ದೀಕ್ಷಿತ, ಸುಪ್ರಿಯಾ ದೇಸಪಾಂಡೆ, ಜಿ. ಎಸ್. ಸೋನಾರ, ಪ್ರಸಾದ ಕಾರಜೋಳ ಮುಂತಾದ ಸಂಗೀತಾಸಕ್ತರು ಉಪಸ್ಥಿತರಿದ್ದರು.

### ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ – 2023

## ಶಿಲ್ಪಕಲೆಯನ್ನು ಉಳಿಸಿಬೇಳಸಬೇಕಿದೆ: ಪ್ರೇಮಾ ಹಾವನೂರ

ಬೆಳಗಾವಿ: ಯಾವುದೇ ಉಪಕರಣಗಳು ಇಲ್ಲದ ಸಮಯದಲ್ಲಿ ಅಮರ ಶಿಲ್ಪಿ ಜಕಣಾಚಾರಿ ಅವರು ತಮ್ಮ ದೂರ ದೃಷ್ಟಿ ಹಾಗೂ ಕೌಶಲ್ಯದಿಂದ ಸಾಂಸ್ಕೃತಿಕ ವೈವಿಧ್ಯಮಯ ಹಾಗೂ ಇತಿಹಾಸ ಸಾರುವ ಶಿಲ್ಪಿಕಲೆಗಳನ್ನು ಕೆತ್ತನೆ ಮಾಡುವ ಮೂಲಕ ಕನ್ನಡದ ಸ್ವಾಭಿಮಾನ ಮತ್ತು ಹೆಮ್ಮೆಯನ್ನು ಎತ್ತಿ ಹಿಡಿದ ಕೀರ್ತಿಗೆ ಪಾತ್ರರಾಗಿದ್ದಾರೆ ಎಂದು ಪ್ರೇಮಾ ಹಾವನೂರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ



ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಕುಮಾರ ಗಂಧರ್ವ ಕಲಾಮಂದಿರದಲ್ಲಿ ಸೋಮವಾರ (ಜ.01) ರಂದು ಏರ್ಪಡಿಸಲಾಗಿದ್ದ ವಿಶ್ವ ಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ರಾಜ್ಯದ ಪ್ರವಾಸಿ ತಾಣಗಳಾದ ಬೇಲೂರು, ಹಳೇಬೀಡು, ಹಂಪಿ, ಪಟ್ಟದಕಲ್ಲು ಐಹೊಳೆ, ಸೇರಿದಂತೆ ವಿವಿಧ ಪ್ರವಾಸಿ ತಾಣಗಳ ಕೆತ್ತನೆಗಳುನ್ನು ಯುವ ಪೀಳಿಗೆ ನೋಡುವುದರ ಜೊತೆಗೆ ಅವುಗಳ ಸಂದೇಶ ತಿಳಿದುಕೊಳ್ಳಬೇಕಿದೆ ಎಂದು ಸಲಹೆ ನೀಡದರು.

ಶಿಲ್ಪಕಲೆಗಳು ನಾಡಿನ ಸೌಂದರ್ಯ, ಧಾರ್ಮಿಕ ಆಚಾರ, ವಿಚಾರ ಆಡಳಿತ ಪದ್ಧತಿ, ಜನರ ಜೀವನ ಶೈಲಿ ಹೀಗೇ ಹತ್ತು ಹಲವು ಸಂದೇಶ ಸಾರುತ್ತವೆ. ಆದ್ದರಿಂದ ನಾವೆಲ್ಲರೂ ಕೂಡಿಕೊಂಡು ಶಿಲ್ಪಕಲೆಗಳನ್ನು ಉಳಿಸಿ ಬೆಳೆಸೋಣ ಎಂದು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಮಂಜುನಾಥ ಬಡಿಗೇರ, ಜನಾರ್ಧನ ಬಡಿಗೇರ, ಕೆ ಎಚ್ ಬಡಿಗೇರ ಸೇರಿದಂತೆ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ದಿ. 6 ರಂದು ಖಾನಾಪೂರ ತಾಲೂಕಾ 9ನೇ ಕನ್ನಡ ಸಾಹಿತ್ಯ ಸಮ್ಮೇಳನ

ಬೆಳಗಾವಿ: ಕನ್ನಡ ಸಾಹಿತ್ಯ ಪರಿಷತ್ತು ಬೆಳಗಾವಿ ಜಿಲ್ಲೆಯ, ಖಾನಾಪೂರ ತಾಲೂಕಾ 9ನೇ ಕನ್ನಡ ಸಾಹಿತ್ಯ ಸಮ್ಮೇಳನವು ದಿನಾಂಕ 6 ರಂದು ಶನಿವಾರ ಗಂದಿಗವಾಡ ಗ್ರಾಮದ ಶ್ರೀ.ರಾಮಲಿಂಗೇಶ್ವರ ದೇವಸ್ಥಾನ ದಲ್ಲಿ ಜರುಗಲಿದೆ.

ಅಂದು ಮುಂಜಾನೆ:8:00 ಘಂಟೆಗೆ, ನ್ಯಾಯವಾದಿ ದಯಾನಂದ ಹಿಟ್ಟಿನ ಅವರು ರಾಷ್ಟ್ರ ಧ್ವಜಾರೋಹಣವನ್ನು ನೆರವೇರಿಸುವರು. ಕ.ಸಾ.ಪ. ಬೆಳಗಾವಿ ಜಿಲ್ಲಾಧ್ಯಕ್ಷೆ ಶ್ರೀಮತಿ ಮಂಗಲಾ. ಮೆಟಗುಡ್ಡ ಪರಿಷತ್ತಿನ ಧ್ವಜಾರೋಹಣವನ್ನು ನೆರವೇರಿಸುವರು. ಖಾನಾಪೂರ ತಾಲೂಕಾಧ್ಯಕ್ಷ ಬಸವಪ್ರಭು ಹಿರೇಮಠ ಅವರು ನಾಡ ಧ್ವಜಾರೋಹಣವನ್ನು ನೆರವೇರಿಸುವರು. ಅವರೊಳ್ಳಿಯ ಪೂಜ್ಯ ಶ್ರೀ ಚನ್ನಬಸವ ದೇವರು ಇವರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಎಂಕೆ. ಹುಬ್ಬಳ್ಳಿ ರಾಣಿ ಶುಗರ್ಸ ಮಾಜಿ ಅಧ್ಯಕ್ಷ ನಾಸೀರ ಬಾಗವಾನ ಅವರು ಉದ್ಘಾಟಿಸಲಿದ್ದಾರೆ. ಶ್ರೀ.ಮೃತ್ಯುಂಜಯ ಸ್ವಾಮಿಗಳು ಹಿರೇಮಠ ಅವರು ಸಮ್ಮೇಳನದ ಸರ್ವಾಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಸಮ್ಮೇಳನದಲ್ಲಿ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಶ್ರೀಮತಿ.ಲಕ್ಷ್ಮೀ ಹೆಬ್ಬಾಳಕರ, ಕೆನರಾ ಕ್ಷೇತ್ರದ ಸಂಸದ ಅನಂತಕುಮಾರ ಹೆಗಡೆ, ಖಾನಾಪೂರ ಶಾಸಕ ವಿಠ್ಠಲ ಹಲಗೇಕರ, ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಹಣಮಂತ ನಿರಾಣಿ, ಚನ್ನರಾಜ ಹಟ್ಟಿಹೊಳಿ, ನಾಗರಾಜ ಯಾದವ, ಲಖಿನ್ ಜಾರಕಿಹೊಳಿ, ಸಾಬಣ್ಣಾ ತಳವಾರ, ಮುಖ್ಯ ಅತಿಥಿಗಳಾಗಿ ಉಪಸ್ಥಿತರಿರುವರು.

ಕನ್ನಡ ಸಾಹಿತ್ಯ ಪರಿಷತ್ ಬೆಳಗಾವಿ ಜಿಲ್ಲೆಯ ಎಲ್ಲ ತಾಲೂಕಾ ಅಧ್ಯಕ್ಷರುಗಳು, ಸಾಹಿತಿಗಳು, ಕಲಾವಿದರು, ಬೆಳಗಾವಿ ಜಿಲ್ಲಾ ಕ.ಸಾ.ಪ. ಕಾರ್ಯಕಾರಿ ಸಮಿತಿಯ ಸರ್ವ ಸದಸ್ಯರು, ಕ.ಸಾ.ಪ. ಸರ್ವ ಸದಸ್ಯರು ಮತ್ತು ಕನ್ನಡಪರ ಸಂಘಟನೆಗಳು, ಸಮಸ್ತ ಕನ್ನಡ ಮನಸ್ಸುಗಳು ಎಲ್ಲರೂ ಈ ಕಾರ್ಯಕ್ರಮಕ್ಕೆ ಆಗಮಿಸಿ ಶೋಭೆತರಬೇಕೆಂದು, ಕಸಾಪ ಬೆಳಗಾವಿ ಜಿಲ್ಲಾಧ್ಯಕ್ಷೆ ಶ್ರೀಮತಿ ಮಂಗಲಾ ಮೆಟಗುಡ್ಡ ಹಾಗೂ ಖಾನಾಪೂರ ತಾಲೂಕಾಧ್ಯಕ್ಷ ಬಸವಪ್ರಭು ಹಿರೇಮಠ ಜಂಟಿ ಪ್ರಕಟಣೆಯಲ್ಲಿ ಕೋರಿದ್ದಾರೆ.



ಬೆಳಗಾವಿ: ಹೊಸ ವರ್ಷದ ಹಿನ್ನೆಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೋಮವಾರ ಕುಟುಂಬ ಸಮೇತ ಬೆಳಗಾವಿಯ ಹಿಂಡಲಗಾ ಮಹಾಗಣಪತಿಯ ಮಂದಿರ ಹಾಗೂ ಕಪಿಲೇಶ್ವರ ದೇವಾಲಯಕ್ಕೆ ತೆರಳಿ, ವಿಶೇಷ ಪೂಜೆಯನ್ನು ಸಲ್ಲಿಸಿದರು. ಹೊಸ ವರ್ಷ ಎಲ್ಲರ ಬಾಳಿನಲ್ಲಿ ಸುಖ, ಶಾಂತಿ, ನೆಮ್ಮದಿ ಹೊತ್ತು ತರಲಿ ಎಂದು ಪ್ರಾರ್ಥಿಸಿದರು. ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಮೃಣಾಲ್ ಹೆಬ್ಬಾಳಕರ್ ಇದ್ದರು.

## ಕನ್ನಡ ಮಾಧ್ಯಮದ ಮಕ್ಕಳಿಗೆ ಮಲತಾಯಿ ಧೋರಣೆ: ಕರವೇ ಆಕ್ರೋಶ

ಬೆಳಗಾವಿ: ಬೆಳಗಾವಿ ತಾಲೂಕಿನ ನಂದಿಹಳ್ಳಿಯ ಗ್ರಾಮದ ಒಂದೇ ಆವರಣದಲ್ಲಿ ಕನ್ನಡ ಮತ್ತು ಮರಾಠಿ ಮಾಧ್ಯಮ ಶಾಲೆಗಳಿದ್ದು, ಕನ್ನಡ ಮಾಧ್ಯಮದ ಮಕ್ಕಳಿಗೆ ಮಲತಾಯಿ ದೋರಣೆ ಮಾಡಲಾಗುತ್ತಿದೆ ಎಂದು ಆರೋಪಗಳು ಕೇಳಿ ಬಂದಿವೆ.

ಬೆಳಗಾವಿ ತಾಲೂಕಿನ ನಂದಿಹಳ್ಳಿಯ ಗ್ರಾಮದ ಒಂದೇ ಆವರಣದಲ್ಲಿ ಕನ್ನಡ ಮತ್ತು ಮರಾಠಿ ಮಾಧ್ಯಮ ಶಾಲೆಗಳಿವೆ. ಈ ಎರಡು ಶಾಲೆಗಳು ಸರ್ಕಾರಿ ಶಾಲೆಯಾಗಿವೆ. ಇಲ್ಲಿ ಕನ್ನಡ ಮಾಧ್ಯಮದ ಮಕ್ಕಳಿಗೆ ಮೂಲಭೂತ ಸೌಕರ್ಯ ನೀಡುತ್ತಿಲ್ಲ. ಅಲ್ಲದೇ ಮಕ್ಕಳಿಗೆ ಶಾಲಾ ಆವರಣದಲ್ಲೇ ಕೂರಿಸಿ ಪಾಠ ಮಾಡಲಾಗುತ್ತಿದೆ. ಅಲ್ಲದೇ ಕನ್ನಡ ಶಾಲೆಯಲ್ಲಿ, ಮರಾಠಿ ಭಾಷೆಯಲ್ಲಿ ಮ್ಯಾಪ್ಗಳನ್ನು ಬಿಡಿಸಲಾಗಿದೆ. ನಾಮಫಲಕಗಳನ್ನೂ ಕೂಡ ಮರಾಠಿ ಭಾಷೆಯಲ್ಲಿ ಹಾಕಲಾಗಿದೆ.



ಕನ್ನಡ ಮಾಧ್ಯಮ ಮಕ್ಕಳಿಗೆ ಕುಡಿಯಲು ನೀರಿಲ್ಲ, ಸೂಕ್ತ ಮೈದಾನವಿಲ್ಲ. ಒಂದೇ ಕೊಠಡಿಯಲ್ಲಿ ಐದು ತರಗತಿಯನ್ನು ನಡೆಸಲಾಗುತ್ತಿದೆ. ಮತ್ತೊಂದು ವರ್ಗದ ಮಕ್ಕಳಿಗೆ ಕಟ್ಟೆ ಮೇಲೆ ಕೂರಿಸಿ ಶಿಕ್ಷಕರು ಪಾಠ ಮಾಡುತ್ತಿದ್ದಾರೆ. ಆದರೆ ಮರಾಠಿ ಮಾಧ್ಯಮದ ಮಕ್ಕಳಿಗೆ ಎಲ್ಲ ಸೌಲಭ್ಯಗಳನ್ನು ನೀಡಿ, ಕೊಠಡಿಯೊಳಗೆ ಕೂರಿಸಿ ಪಾಠ ಮಾಡಲಾಗುತ್ತಿದೆ. ಈ ಮೂಲಕ ಶಾಲೆಯ ಆಡಳಿತ ಮಂಡಳಿ ಕನ್ನಡ, ಮರಾಠಿ ಭಾಷೆ ವಿಚಾರದಲ್ಲಿ ಮಕ್ಕಳ ನಡುವೆ ತಾರತಮ್ಯ ಉಂಟುಮಾಡುತ್ತಿದೆ.

ಇದನ್ನು ತಿಳಿದ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಶಾಲೆಗೆ ದೌಡಾಯಿಸಿ ಮುಖ್ಯ ಶಿಕ್ಷಕಿಯನ್ನು ತರಾಟೆಗೆ ತೆಗೆದುಕೊಂಡರು.

ಕನ್ನಡ ಶಾಲಾ ಮಕ್ಕಳಿಗೆ ಆಗುತ್ತಿರುವ ಅನ್ಯಾಯದ ಬಗ್ಗೆ ಕರವೇ ಕಾರ್ಯಕರ್ತರು ಖಂಡನೆ ವ್ಯಕ್ತಪಡಿಸಿದರು. ಇನ್ನು ಕರವೇ ಕಾರ್ಯಕರ್ತರು ಆಗಮಿಸುವ ವಿಚಾರ ತಿಳಿದು ಶಿಕ್ಷಕರು ಕನ್ನಡ ಮಾಧ್ಯಮ ಮಕ್ಕಳನ್ನು ಕೊಠಡಿಯೊಳಗೆ ಕೂರಿಸಿದರು. ವಿಷಯ ತಿಳಿದು ಬೆಳಗಾವಿ ಗ್ರಾಮೀಣ ಪೊಲೀಸರು ಶಾಲೆಗೆ ಆಗಮಿಸಿ ಪರಿಸ್ಥಿತಿ ತಿಳಿಗೊಳಿಸಿದರು.

## ರಾಷ್ಟ್ರ ಮತ್ತು ಅಂತರರಾಷ್ಟ್ರ ಮಟ್ಟದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ: ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಭಾರತದಯುವ ವ್ಯವಹಾರ ಮತ್ತು ಕ್ರೀಡಾ ಮಂತ್ರಾಲಯದಿಂದ ಮಾನ್ಯತೆ ಪಡೆದ ಕ್ರೀಡಾ ಸಂಘ ಸಂಸ್ಥೆಗಳಿಂದ 2023–24ನೇ ಸಾಲಿನಲ್ಲಿ (ಜನೇವರಿ–2023 ರಿಂದ ಡಿಸೆಂಬರ–2023 ರವರೆಗೆ) ಸಂಘಟಿಸಲಾದ ರಾಷ್ಟ್ರಮಟ್ಟದ ಪಂದ್ಯಾವಳಿಗಳಲ್ಲಿ ಪದಕ ವಿಜೇತ ಅಥವಾ ಅಂತರರಾಷ್ಟ್ರ ಮಟ್ಟದ ಪಂದ್ಯಾವಳಿಗಳಲ್ಲಿ ಭಾಗವಹಿಸಿದ/ಪದಕ ವಿಜೇತ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಕ್ರೀಡಾಪಟುಗಳು ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಉಪ ನಿರ್ದೇಶಕರಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಬೆಳಗಾವಿ ಇವರಿಗೆ ದಿನಾಂಕ ಜನವರಿ 12, 2024ರ ಒಳಗಾಗಿ ಸಲ್ಲಿಸಬೇಕು.

ಹೆಚ್ಚಿನ ವಿವರಗಳಿಗಾಗಿ ಸದರಿಯವರ ಕಛೇರಿ ದೂರವಾಣಿ 0831–2950306 ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಯುವ ಸಬಲೀಕರಣ ಮತ್ತುಕ್ರೀಡಾ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೊಲೀಸ್ ಅಧಿಕಾರಿಗೆ ಏಕಚವನದಲ್ಲಿಯೇ ಆವಾಜ್ ಹಾಕಿದ ಮಾಜಿ ಶಾಸಕ ಪಿ. ರಾಜೀವ್

ಬೆಳಗಾವಿ: ಕುಡಚಿ ಮತಕ್ಷೇತ್ರದ ಮಾಜಿ ಶಾಸಕ ಪಿ ರಾಜೀವ್ ಅವರು ಪೊಲೀಸ್ ಅಧಿಕಾರಿಗೆ ಏಕಚವನದಲ್ಲಿಯೇ ಆವಾಜ್ ಹಾಕಿರುವ ಘಟನೆ ಹಾರೋಗೇರಿ ಪೊಲೀಸ್ ಠಾಣೆಯಲ್ಲಿ ನಡೆದಿದೆ.

ಹಾರೋಗೇರಿ ಪೊಲೀಸ್ ಠಾಣೆಯಲ್ಲೇ ಮಾಜಿ ಶಾಸಕ ಪಿ. ರಾಜೀವ್ ಮತ್ತು ಪಿಎಸ್ ಐ ವಾಗ್ವಾದ ನಡೆದಿದ್ದು,ಯಾವುದೇ ಕೇಸ್ ದಾಖಲು ಇಲ್ಲದೆ ಪುರಸಭೆ ಸದಸ್ಯ ರವಿ ಠಕ್ಕನವರ ಬಂಧನ ಮಾಡಿದ್ದೀರೆಂದು ಪಿಎಸ್ಐ ವಿರುಧ್ಧ ಏಕವಚನದಲ್ಲೇ ಆವಾಜ್ ಹಾಕಿದ್ದಾರೆ.

ಮಾಜಿ ಸಚಿವ ಲಕ್ಷ್ಮಣ ಸವದಿ ಅವರಿಗೆ ಬಹಿರಂಗವಾಗಿ ಅವಾಚ್ಯ ಪದ ಬಳಕೆ ಆರೋಪಕ್ಕೆ



ಸಂಬಂಧಿಸಿದಂತೆ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲೂಕಿನ ಹಾರೋಗೇರಿ ಪುರಸಭೆ ಸದಸ್ಯ ರವಿ ಠಕ್ಕನವರನ್ನು ಅರೆಸ್ಟ್ ಮಾಡಲಾಗಿದೆ. ಈ ಹಿನ್ನಲೆಯಲ್ಲಿ ಯಾವುದೇ ಕೇಸ್ ದಾಖಲು ಇಲ್ಲದೆ ಪುರಸಭೆ ಸದಸ್ಯ ರವಿ ಠಕ್ಕನವರ ಬಂಧನ ಮಾಡಿದ್ದೀರೆಂದು ಪಿಎಸ್ಐ ಉಪ್ಪಾರ್ ವಿರುಧ್ಧ ಪಿ ರಾಜೀವ್ ಗರಂ ಆಗಿದ್ದಾರೆ.

ಅಲ್ಲದೇ ಲಕ್ಷ್ಮಣ ಸವದಿಯವರಗೆ ಕ್ಷಮೆ ಕೇಳಿ ಅಂತಾ ಪುರಸಭೆ ಸದಸ್ಯ ರವಿ ಠಕ್ಕನವರಿಗೆ ಪಿಎಸ್ ಐಗೆ ಅವಾಜ್ ಹಾಕಿದ್ದಾರೆ. ಹಾಗೂ ಇದೇ ವೇಳೆ ಹಿರಿಯ ಅಧಿಕಾರಿಗಳನ್ನು ಮಾಜಿ ಶಾಸಕಪಿ.ರಾಜೀವ್ ತರಾಟೆಗೆ ತೆಗೆದುಕೊಂಡಿದ್ದಾರೆ. ಈ ವಾಗ್ವಾದ ವಿಡಿಯೋ ಎಲ್ಲೆಡೆ ವೈರಲ್ ಆಗುತ್ತಿದೆ.

## ರಾಜ್ಯದಲ್ಲಿ ಕೊರೋನಾದಿಂದ ಒಬ್ಬರು ಸಾವು

### 296 ಮಂದಿಗೆ ಪಾಸಿಟಿವ್

ಬೆಂಗಳೂರು: ರಾಜ್ಯದಲ್ಲಿ ಕೋವಿಡ್–19 ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಸೋಮವಾರ ಕೊರೋನಾದಿಂದ ಒಬ್ಬರು ಮೃತಪಟ್ಟಿದ್ದಾರೆ ಮತ್ತು 296 ಮಂದಿಗೆ ಪಾಸಿಟಿವ್ ದೃಢಪಟ್ಟಿದೆ. ಇದರೊಂದಿಗೆ ರಾಜ್ಯದಲ್ಲಿ ಸಕ್ರಿಯ ಪ್ರಕರಣಗಳ ಸಂಖ್ಯೆ ಒಂದು ಸಾವಿರದ ಗಡಿ ದಾಟಿದೆ.

ಕಳೆದ 24 ಗಂಟೆಗಳಲ್ಲಿ 296 ಹೊಸ ಕೋವಿಡ್–19 ಪಾಸಿಟಿವ್ ಪ್ರಕರಣಗಳು ವರದಿಯಾಗಿದ್ದು, ಸಕ್ರಿಯ ಪ್ರಕರಣಗಳ ಸಂಖ್ಯೆ 1,245ಕ್ಕೆ ಏರಿಕೆಯಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ.

ಪಾಸಿಟಿವ್ ಪ್ರಮಾಣ ಶೇ. 5.89 ರಷ್ಟು ಇದೆ. ಬೆಂಗಳೂರಿನಲ್ಲಿ 131 ಮಂದಿಗೆ ಕೋವಿಡ್ ಪಾಸಿಟಿವ್ ದೃಢಪಟ್ಟಿದೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ.

ಕೋವಿಡ್ ನಿಂದ ಚೇತರಿಸಿಕೊಂಡು 50 ಮಂದಿ ಡಿಸ್ಚಾರ್ಜ್ ಆಗಿದ್ದು, ಸೋಂಕಿತರಲ್ಲಿ 1,179 ಮಂದಿ ಮನೆ ಆರೈಕೆಗೆ ಒಳಗಾದರೆ, 66 ಮಂದಿಗೆ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.



20 ಸೋಂಕಿತರು ತೀವ್ರ ನಿಗಾ ಘಟಕದಲ್ಲಿ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ.

ಕೊರೋನಾ ಸೋಂಕಿತ 55 ವರ್ಷದ ವ್ಯಕ್ತಿ ಲಸಿಕೆ ಪಡೆದಿದ್ದರೂ ತೀವ್ರ ಉಸಿರಾಟದ ಸಮಸ್ಯೆಯಿಂದ ನಿಧನರಾಗಿದ್ದಾರೆ.

ಅವರು ಮಧುಮೇಹ, ಅಧಿಕ ರಕ್ತದೊತ್ತಡ ಮತ್ತು ದೀರ್ಘಕಾಲದ ಮೂತ್ರಪಿಂಡ ಕಾಯಿಲೆಯಿಂದ ಬಳಲುತ್ತಿದ್ದರು ಎಂದು ಇಲಾಖೆ ತಿಳಿಸಿದೆ.

## ಬೆಳಗಾವಿ ತಾನಾಜಿಗಲ್ಲಿ ಬಾವಿಯಲ್ಲಿ ಶವ ಪತ್ತೆ



ಬೆಳಗಾವಿ: ಬೆಳಗಾವಿ ರೈಲ್ವೆ ಗೇಟ್ ಬಳಿಯ ತಾನಾಜಿಗಲ್ಲಿಯ ಬ್ರಹ್ಮದೇವ ಮಂದಿರದ ಬಳಿ ಬಾವಿಯಲ್ಲಿ ಸೋಮವಾರ ಮಧ್ಯಾಹ್ನ ಅಪರಿಚಿತ ಶವ ಪತ್ತೆಯಾಗಿದೆ.

ಮೃತದೇಹ ತೇಲುತ್ತಿರುವುದನ್ನು ಗಮನಿಸಿದ ನಾಗರಿಕರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಇದು ಕೊಲೆಯೋ ಅಥವಾ ಆತ್ಮಹತ್ಯೆಯೋ ಎಂಬ ಶಂಕೆ ವ್ಯಕ್ತವಾಗಿದೆ. ಜನ ಹೆಚ್ಚಿನ ಪ್ರಮಾಣದಲ್ಲಿ ಸೇರಿದ್ದು, ಶವವನ್ನು ಬಾವಿಯಿಂದ ತೆಗೆಯುವ ಪ್ರಯತ್ನ ನಡೆದಿದೆ.

## ಮದರಸಾಗಳಿಗೆ ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣ: ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

ಬೆಳಗಾವಿ: 2023–24ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿರುವ ನೋಂದಾಯಿತಿ ಮದರಸಾಗಳಿಗೆ ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣವನ್ನು ನೀಡಲು ಮದರಸಾ ಸಂಸ್ಥೆಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿಲಾಗಿದೆ.

ಅರ್ಜಿದಾರರು https://dom.karnataka.gov.in ಈ ಲಿಂಕ್ ಮೂಲಕ "2023–24ನೇ" ಸಾಲಿನಲ್ಲಿ ಜಿಲ್ಲೆಯಲ್ಲಿರುವ ನೋದಾಯಿತ ಮದರಸಾಗಳಿಗೆ ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣವನ್ನು ನೀಡಲು ಮದರಸಾ ಸಂಸ್ಥೆಗಳು" ಇಲ್ಲಿ ಕ್ಲಿಕ್ ಮಾಡಿ ಅರ್ಜಿಗಳನ್ನು ದಿನಾಂಕ:20.01.2024ರೊಳಗೆ ಸಲ್ಲಿಸಬಹುದು.

ದಾಖಲೆಗಳೊಂದಿಗೆ ಪ್ರಸ್ತಾವನೆಗಳನ್ನು ಜಿಲ್ಲಾ ಕಛೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ್ ಅಲ್ಪಸಂಖ್ಯಾತರ ಭವನ, ಕೆ.ಎಸ್.ಸಿ.ಎ ಕ್ರಿಕೇಟ್ ಕ್ರೀಡಾಂಗಣ ಎದುರುಗಡೆ, ರಾಮತೀರ್ಥ ನಗರ, ಬೆಳಗಾವಿ–590016 ಇಲ್ಲಿಗೆ ಸಲ್ಲಿಸಬೇಕು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾಡಳಿತದಿಂದ ಆಚರಿಸಿದ ಅಮರಶಿಲ್ಪಿ ಶ್ರೀ ಜಕಣಾಚಾರಿ ಸಂಸ್ಮರಣೆ

ಧಾರವಾಡ: ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಧಾರವಾಡ ಜಿಲ್ಲೆಯ ವಿಶ್ವಕರ್ಮ ಸಮಾಜದ ಎಲ್ಲ ಸಂಘ ಸಂಸ್ಥೆಯ ಸಹಕಾರದಲ್ಲಿ ನಗರದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಅಮರಶಿಲ್ಪಿ ಶ್ರೀ ಜಕಣಾಚಾರಿ ಅವರ ಸಂಸ್ಮರಣಾ ದಿನಾಚರಣೆಯನ್ನು ಜ.01 ಬೆಳಿಗ್ಗೆ ಆಚರಿಸಲಾಯಿತು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಅಮರಶಿಲ್ಪಿ ಶ್ರೀಜಕಣಾಚಾರಿ ಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಕಾರ್ಯಕ್ರಮ ಉದ್ಘಾಟಿಸಿದರು. ನಂತರ ಅವರು ಮಾತನಾಡಿ, ಅಮರಶಿಲ್ಪಿ ಶ್ರೀಜಕಣಾಚಾರಿಯವರ ಬದುಕಿನ ಮಹತ್ವ ಮತ್ತು ಅವರ ಕೊಡುಗೆಯನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಸಾಹಿತಿ ಈರಣ್ಣ ಬಡಿಗೇರ ಅವರು ವಿಶೇಷ ಉಪನ್ಯಾಸ ನೀಡಿ, ಇಡೀ





ವಿಶ್ವವೇ ಬೆರಗಾಗುವಂತೆ ಕಲ್ಲನ್ನು ಹೂವಾಗಿ ಅರಳಿಸಿದ್ದ ಅಮರಶಿಲ್ಪಿ ಜಕಣಾಚಾರಿ, ಬೇಲೂರು, ಹಳೇಬೀಡು ದೇವಾಲಯಗಳಿಗೆ ವಿಶ್ವ ಭೂಪಟದಲ್ಲಿ ಶಾಶ್ವತ ಸ್ಥಾನ ಸಂಪಾದಿಸಿಕೊಟ್ಟಿದ್ದಾರೆ.

ಇಂದಿನ ವಿಶ್ವಕರ್ಮ ಸಮುದಾಯ ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ತಮ್ಮ ಕೌಶಲ್ಯ ಕಣ್ಮರೆಯಾಗದಂತೆ ಶಿಲ್ಪಕಲೆಯನ್ನು ಮುಂದುವರಿಸಿಕೊಂಡು ಹೋಗಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್. ಎಸ್. ಕೆಳದಿಮಠ ಹಾಗೂ ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಅಧ್ಯಕ್ಷ ಡಾ. ಲಿಂಗರಾಜ ಅಂಗಡಿ, ಶ್ರೀ ಮೌನೇಶ್ವರ ಧರ್ಮನಿಧಿ ಸಂಸ್ಥೆ ಅಧ್ಯಕ್ಷ ಮಹಾರುದ್ರ ಬಡಿಗೇರ, ಸಮುದಾಯದ ಮುಖಂಡರಾದ ವಿಠ್ಠಲ ಜಿ. ಕಮ್ಮಾರ, ವಸಂತ ಅರ್ಕಾಚರ, ಶಿವಣ್ಣ ಬಡಿಗೇರ, ಸಂತೋಷ ಬಡಿಗೇರ ಮತ್ತು ಅವರು ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಆರತಿ ದೇವಶಿಖಾಮಣಿ ನಿರೂಪಿಸಿ, ವಂದಿಸಿದರು.

**ಕರ್ನಾಟಕ ಸರ್ಕಾರ**
**ಉಪ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ, ಬೆಳಗಾವಿ ವಿಭಾಗ, ಬೆಳಗಾವಿ**
ಕಚೇರಿ ದೂರವಾಣಿ ಸಂಖ್ಯೆ:0831–2467071. ಫ್ಯಾಕ್ಸ್ ಸಂಖ್ಯೆ: 0831–2467071, E-Mail ID:dcfbgm@gmail.com

ಸಂಖ್ಯೆ. ಎ9/ಬಿಜಿಟಿ/ಟೆಂಡರ್/ಸಿಆರ್– /2023–24 ದಿನಾಂಕ:27–12–2023

**ಇ–ಪ್ರೋಕ್ಯೂರಮೆಂಟ್ ಪೋರ್ಟಲ್ ಮುಖಾಂತರ ಪ್ರಕಟಣೆ**

ಬೆಳಗಾವಿ (ಪ್ರಾದೇಶಿಕ) ವಿಭಾಗದಲ್ಲಿ 2023–24ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಹೊಸ ಕಾಮಗಾರಿಗಳಿಗೆ ಟೆಂಡರ್ ದಿನಾಂಕ: 08–01–2024 ರಂದು ಇ–ಪ್ರೋಕ್ಯೂರಮೆಂಟ್ ಪೋರ್ಟಲ್ ಮುಖಾಂತರ KFD/2023-24/OW/WORK_INDENT4417, 4419, 4423, 4425, 4435, 4436, 4442 & 4589 (Others) KFD/2023-24/OW/WORK_INDENT 4421, 4424 & 4439 (Reserved for SC) FD/2023-24/OW/WORK_INDENT 4592 (Reserved for ST) ಟೆಂಡರ್‌ನ್ನು ಕರೆಯಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಈ ಕೆಳ ಸಹಿದಾರರ ಕಛೇರಿಗೆ ರಜಾ ದಿನಗಳನ್ನು ಹೊರತುಪಡಿಸಿ ಸಂಪರ್ಕಿಸಿ ಪಡೆಯಬಹುದಾಗಿದೆ.

ಸಹಿ/–ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು
ಮತ್ತು ಉಪ ಅರಣ್ಯ ಸಂರಕ್ಷಣಾಧಿಕಾರಿ,
ಬೆಳಗಾವಿ ವಿಭಾಗ, ಬೆಳಗಾವಿ ರವರ ತಾಂತ್ರಿಕ ಸಹಾಯಕರು

DIPR/BGM/RO-NO-866/KSMCA/2023-24

VOL. 04 ISSUE. 281 RNI. KARKAN/2020/79084 REG.NO.G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka. Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089